ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 97 ಸಂಚಿಕೆ- 97 | PAGE-8 ಪುಟ-8 | ಶುಕ್ರವಾರ 23.05.2025 | RS.2/- ಬೆಲೆ 2/-

## ಸಂಪುಟ ಸಭೆಯಲ್ಲಿ ಜಾತಿ ಗಣತಿ ಚರ್ಚೆ "ಅಪೂರ್ಣ"



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.22:ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ 'ಜಾತಿ ಗಣತಿ' ಎಂದು ಜನಪ್ರಿಯವಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯ ಮೇಲಿನ ಚರ್ಚೆ "ಅಪೂರ್ಣ"ವಾಗಿದ್ದು, ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಮತ್ತೆ ಚರ್ಚಿಸಲಾಗುವುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಅವರು ಹೇಳಿದ್ದಾರೆ.

ಹೆಚ್ಚಿನ ಸಚಿವರು ಸಮೀಕ್ಷೆಯ ಕುರಿತು ತಮ್ಮ ಅಭಿಪ್ರಾಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಲಿಖಿತವಾಗಿ ಸಲ್ಲಿಸಿದ್ದಾರೆ.

"ಇಂದು ಮತ್ತೊಮ್ಮೆ ಸಚಿವ ಸಂಪುಟ ಸಭೆಯು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯ ಕುರಿತು ಚರ್ಚಿಸಿತು. ಚರ್ಚೆ ಅಪೂರ್ಣವಾಗಿತ್ತು. ಮುಖ್ಯಮಂತ್ರಿಗಳು ಈ ಹಿಂದೆ ಸಂಪುಟ ಸಚಿವರು ತಮ್ಮ ಅಭಿಪ್ರಾಯವನ್ನು ಲಿಖಿತವಾಗಿ ನೀಡುವಂತೆ ಕೇಳಿದ್ದರು ಮತ್ತು ಮೂರು ಅಥವಾ ನಾಲ್ಕು ಸಚಿವರು ಹೊರತುಪಡಿಸಿ ಹೆಚ್ಚಿನ ಸಚಿವರ ತಮ್ಮ ಅಭಿಪ್ರಾಯಗಳು ಮುಖ್ಯಮಂತ್ರಿಗೆ ಲಿಖಿತವಾಗಿ ಸಲ್ಲಿಸಿದ್ದಾರೆ" ಎಂದು ಎಚ್ ಕೆ ಪಾಟೀಲ್ ತಿಳಿಸಿದರು.

ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಎಚ್ ಕೆ ಪಾಟೀಲ್ ಅವರು, "ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಅಥವಾ ಅದರ ನಂತರದ ಸಭೆಯಲ್ಲಿ, ಕೆಲವು ವಿವರಗಳನ್ನು ಪಡೆದು ಅಧ್ಯಯನ ಮಾಡಿದ ನಂತರ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು" ಎಂದು ಹೇಳಿದರು.

ಜಾತಿ ಗಣತಿ ಬಗ್ಗೆ ಸಂಪುಟದಲ್ಲಿ ಪರ, ವಿರುದ್ಧ ಅಭಿಪ್ರಾಯಗಳು ವ್ಯಕ್ತವಾದ ಹಿನ್ನೆಲೆಯಲ್ಲಿ ಎಲ್ಲ ಸಚಿವರಿಗೂ ತಮ್ಮ ನಿಲುವನ್ನು ಲಿಖಿತವಾಗಿ ತಿಳಿಸಲು ಸಿಎಂ ಸಿದ್ದರಾಮಯ್ಯ ಸೂಚಿಸಿದ್ದರು. ಕೇವಲ 11 ಮಂದಿ ಮಾತ್ರ ಲಿಖಿತ ಅಭಿಪ್ರಾಯ ನೀಡಿದ್ದ ಹಿನ್ನೆಲೆಯಲ್ಲಿ ಮೇ 10 ರಂದು ನಡೆದ ಕ್ಯಾಬಿನೆಟ್‌ನಲ್ಲಿ ಯಾವುದೇ ತೀರ್ಮಾನ ತೆಗೆದುಕೊಳ್ಳದೆ ಮುಂದೂಡಲಾಗಿತ್ತು.

## ಅಧ್ಯಾತ್ಮ ಸಂಪತ್ತು ಶಾಶ್ವತ : ರಂಭಾಪುರಿ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.22: ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ ಅದರೊಂದಿಗೆ ಒಂದಿಷ್ಟಾದರೂ ಶಿವಜ್ಞಾನದ ಅರಿವು ಮುಖ್ಯ ಭೌತಿಕ ಸಂಪತ್ತು ಶಾಶ್ವತವಲ್ಲ. ಅಧ್ಯಾತ್ಮ ಸಂಪತ್ತು ಶಾಶ್ವತ ಎಂದು ಬಾಳೆಹೊನ್ನೂರು ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ತಾಲೂಕಿನ ಮೇಹಕರ ಗ್ರಾಮದಲ್ಲಿ ಗುರುವಾರ ಆಯೋಜಿಸಿದ್ದ ಕಟ್ಟಿಮನಿ ಸಂಸ್ಥಾನ ಹಿರೇಮಠದ ರಾಜೇಶ್ವರ ಶಿವಾಚಾರ್ಯರ ಪಟ್ಟಾಧಿಕಾರ ರಜತ ಮಹೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಯಾವ ಸಂಪತ್ತಿಗಾಗಿ ಜೀವ ಜಗತ್ತು ಬದುಕುತ್ತಿದೆಯೋ ಆ ಸಂಪತ್ತಿನ ಪ್ರಾಪ್ತಿಗಾಗಿ ಶ್ರಮಪಡಬೇಕಾಗುತ್ತದೆ. ಪರಿಶ್ರಮ ಮತ್ತು ಪ್ರಯತ್ನದಿಂದ ಸಂಪಾದಿಸಲು ಸಾಧ್ಯ. ಮಾನವ ಜೀವನ ಶ್ರೇಯಸ್ಸಿಗೆ ಮೆಟ್ಟಲುಗಳಾಗಿವೆ. ಸಹನೆಗಿಂತ ದೊಡ್ಡ ತಪಸ್ಸು ಇನ್ನೊಂದಿಲ್ಲ ಮನುಷ್ಯನಲ್ಲಿ ದೃಢತೆ ಇದ್ದರೆ ಯಾರೂ ಏನು ತೊಂದರೆ ಮಾಡಲು ಸಾಧ್ಯವಿಲ್ಲ. ಶ್ರೀ ಜಗದ್ಗುರು ರೇಣುಕಾಚಾರ್ಯರು ಆದ್ಯಾತ್ಮದ ತರಂಗಗಳನ್ನು ಜೀವಾತ್ಮನ ಉನ್ನತಿಗಾಗಿ ಬೋಧಿಸಿದ್ದಾರೆ. ರಾಜೇಶ್ವರ ಶ್ರೀಗಳು ಒಳ್ಳೆಯದನ್ನು ಉಳಿಸುವ ಪ್ರಯತ್ನದಲ್ಲಿ ಶ್ರಮವಹಿಸಿ ಸಾಧನೆ ಮಾಡಿದ್ದಾರೆ. ಧಾರ್ಮಿಕವಾಗಿ ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಚಿಂತಿಸುತ್ತಿರುವ

(2ನೇ ಪುಟ ನೋಡಿ)

## ರನ್ಯಾರಾವ್‌ಗೆ ಪರಮೇಶ್ವರ್ ಶಿಕ್ಷಣ ಸಂಸ್ಥೆ ಸಾಲ ಕೊಟ್ಟಿರಬಹುದು: ರಾಮಲಿಂಗಾ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.22:ರನ್ಯಾರಾವ್, ಪರಮೇಶ್ವರ್ ಶಿಕ್ಷಣ ಸಂಸ್ಥೆಗೆ ಹಣ ಕೊಟ್ಟರೆ ತಪ್ಪಾಗುತ್ತೆ. ಆದ್ರೆ ರನ್ಯಾರಾವ್ ಅವರಿಗೆ ಶಿಕ್ಷಣ ಸಂಸ್ಥೆ ಸಾಲ ಕೊಟ್ಟಿರಬಹುದು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಹೇಳಿದರು.

ವಿಧಾನಸೌಧದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನೀವು ಹೇಳ್ತಿರೋ 40 ಲಕ್ಷದ ಬಗ್ಗೆ ನನಗೆ ಗೊತ್ತಿಲ್ಲ. ರನ್ಯಾರಾವ್ ಪರಮೇಶ್ವರ್‌ಗೆ ಪರಿಚಯ ಇರಬಹುದು. ಅವರ ತಂದೆ ರಾಮಚಂದ್ರರಾವ್ ಐಪಿಎಸ್ ಅಧಿಕಾರಿ. ರನ್ಯಾರಾವ್ ಮದುವೆಗೆ ಎಲ್ಲರೂ ಹೋಗಿದ್ದಾರೆ. ರಾಮಚಂದ್ರ ರಾವ್ ಮಗನ ಮದುವೆಗೂ ಎಲ್ಲ ಹೋಗಿದ್ದಾರೆ. ವಿಪಕ್ಷದವರು ಹೋಗಿದ್ದಾರೆ. ಅದರಲ್ಲಿ ಏನಿದೆ ಎಂದು ಪ್ರಶ್ನಿಸಿದರು.

ಕೇಂದ್ರ ಸರ್ಕಾರವು ಐಟಿ ಹಾಗೂ ಇಡಿಯ ದುರ್ಬಳಕೆ ಮಾಡಿಕೊಳ್ತಿದೆ. ಪರಮೇಶ್ವರ್ ಶಿಕ್ಷಣ ಸಂಸ್ಥೆ ಮೇಲಿನ ಇಡಿ ದಾಳಿ (ಇಆಖಚುಜ) ರಾಜಕೀಯ ಪ್ರೇರಿತ ಎಂದು ಕಿಡಿಕಾರಿದರು.

## ಬಸ್-ದ್ವಿಚಕ್ರ ವಾಹನದ ಮಧ್ಯೆ ಡಿಕ್ಕಿ: ಸಾವು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.22: ತಾಲ್ಲೂಕಿನ ನೀಲಮನಳ್ಳಿ ತಾಂಡಾ ಬಳಿ ಗುರುವಾರ ಸರ್ಕಾರಿ ಬಸ್ ಮತ್ತು ದ್ವಿಚಕ್ರ ವಾಹನದ ಮಧ್ಯೆ ಡಿಕ್ಕಿ ಸಂಭವಿಸಿದ್ದು, ಬೈಕ್ ಸವಾರ ಸ್ಥಳದಲ್ಲಿ ಮೃತಪಟ್ಟಿದ್ದಾನೆ.

ಹುಮನಾಬಾದ್ ತಾಲ್ಲೂಕಿನ ಅಮೀರಾಬಾದ್ ವಾಡಿಯ ಅಹ್ಮದ್ ಮೈನುದ್ದಿನ್ ಫಕೀರ್ (26) ಮೃತ ದುರ್ದೈವಿ. ಮೃತ ವ್ಯಕ್ತಿಯು ಬೀದರ್‌ನಿಂದ ತನ್ನ ಸ್ವಗ್ರಾಮದತ್ತ ತೆರಳುತ್ತಿದ್ದಾಗ ಕಲಬುರಗಿ ಕಡೆಯಿಂದ ಬೀದರ್ ಕಡೆಗೆ ಬರುತ್ತಿದ್ದ ಬಸ್ ಮಧ್ಯೆ ಡಿಕ್ಕಿ ಸಂಭವಿಸಿದ ಪರಿಣಾಮ ಸ್ಥಳದಲ್ಲಿ ಮೃತಪಟ್ಟಿದ್ದಾನೆ. ಈ ಸಂಬಂಧ ಧನ್ನೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪಿಎಸ್‌ಐ ವಿಶ್ವಾರಾಧ್ಯ ಗಣೂರೆ ತಿಳಿಸಿದ್ದಾರೆ.

## ಮೋದಿ ಅಪಮಾನಿಸಿ ಪೋಸ್ಟ್ ಯುವಕ ಪೋಲಿಸ್ ವಶಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.22-ಪ್ರಧಾನಿ ನರೇಂದ್ರ ಮೋದಿ

ಅವರನ್ನು ಕೈದಿಯಂತೆ ಬಿಂಬಿಸಿ ಸಾಮಾಜಿಕ ಜಾಲತಾಣದಲ್ಲಿ ಪೋಟೋ ಹರಿಬಿಟ್ಟಿದ್ದ ಜಿಲ್ಲೆಯ ಕಲಾದಗಿಯ ಯುವಕನನ್ನು ಪೋಲಿಸರು ವಶಕ್ಕೆ ಪಡೆದಿದ್ದಾರೆ.

ಮೊಹ್ಮದಅಜೀಜ್ ಅಬ್ದುಲಸಾಬ್ ರೋಣ(27) ಎಂಬಾತ ಸಾಮಾಜಿಕ ಜಾಲತಾಣದಲ್ಲಿ ಮೋದಿ ಅವರನ್ನು ಕೇಸರಿ ಸಮವಸ್ತ್ರದಲ್ಲಿ ಕೈದಿಯಂತೆ ಹಾಗೂ ಎಐಎಂಎಐಎಂ ಮುಖ್ಯಸ್ಥ ಅಸಾಸುದ್ದೀನ್ ಓವೈಸಿಯನ್ನು ಪೋಲಿಸ್ ವೇಷದಲ್ಲಿ ಚಿತ್ರಿಸಿ ಪೋಟೋ ಹಾಕಿದ್ದ.

ಇದನ್ನು ಗಮನಿಸಿದ ಕಲಾದಗಿ ಪೋಲಿಸರು ಮೊಹ್ಮದಅಜೀಜ್ ವಿರುದ್ಧ ಪ್ರಕರಣ ದಾಖಲಿಸಿಕೊಂಡು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆಂದು ತಿಳಿದುಬಂದಿದೆ.

## ಬೀದರ್ ಜಿಲ್ಲೆಯ 29 ಕೆರೆ ಪುನಶ್ಚೇತನಕ್ಕೆ 77 ಕೋಟಿ ರೂ.

### ಜಿಲ್ಲೆಯ 33 ಉದ್ಯಾನ ಅಭಿವೃದ್ಧಿಗೆ 23 ಕೋಟಿ ರೂ. ಮಂಜೂರು:ಈಶ್ವರ ಬಿ.ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.22: ಬೀದರ್ ಜಿಲ್ಲೆಯಲ್ಲಿರುವ 29 ಕೆರೆಗಳ ಪುನಶ್ಚೇತನಕ್ಕೆ 77 ಕೋಟಿ ರೂ. ಹಾಗೂ 33 ಉದ್ಯಾನವನಗಳ ಅಭಿವೃದ್ಧಿಗೆ 23 ಕೋಟಿ ರೂ. ಗಳನ್ನು ಅಮೃತ್-2 ಅಡಿಯಲ್ಲಿ ಮಂಜೂರು ಮಾಡಲಾಗಿದ್ದು, ಇದನ್ನು ಸಮರ್ಪಕವಾಗಿ ಬಳಕೆ ಮಾಡಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ವಿಕಾಸಸೌಧದ 422ನೇ ಕೊಠಡಿಯಲ್ಲಿಂದು ಪೌರಾಡಳಿತ ಸಚಿವ ರಹೀಂ ಖಾನ್ ಅವರೊಂದಿಗೆ ಬೀದರ್ ಜಿಲ್ಲೆಯ ಕೆರೆಗಳ ಪುನಶ್ಚೇತನ ಮತ್ತು ಉದ್ಯಾನವನ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದ ಅವರು ತ್ವರಿತವಾಗಿ ಈ ಎಲ್ಲ ಕಾಮಗಾರಿ ಆರಂಭಿಸುವಂತೆ ತಿಳಿಸಿದರು.

ಈ ಬಾರಿಯ ವನಮಹೋತ್ಸವದ ವೇಳೆ ಬೀದರ್ ಹವಾಮಾನಕ್ಕೆ ಹೊಂದಿಕೊಳ್ಳುವಂತಹ ಸ್ಥಳೀಯ ಪ್ರಭೇದದ ಗಿಡಗಳನ್ನು ನೆಟ್ಟು ಬೆಳೆಸುವಂತೆ ಎತ್ತರದ ಸಸಿಗಳನ್ನು ನೆಟ್ಟರೆ ಅವು ಹೆಚ್ಚಿನ ಪ್ರಮಾಣದಲ್ಲಿ ಬದುಕಿ ಉಳಿಯುತ್ತವೆ ಹೀಗಾಗಿ ಈ ಬಾರಿ ಎತ್ತರದ ಸಸಿಗಳನ್ನು ನೆಡುವಂತೆ ನಿರ್ದೇಶನ ನೀಡಿದರು.

ಉದ್ಯಾನದಲ್ಲಿ ಪುತ್ಥಳಿಗೆ ಅವಕಾಶವಿಲ್ಲ: ಯಾವುದೇ ಉದ್ಯಾನವನ ಪ್ರದೇಶದಲ್ಲಿ ಅನಧಿಕೃತವಾಗಿ ಯಾವುದೇ ಪುತ್ಥಳಿಯನ್ನು ಸ್ಥಾಪಿಸಲು ಅಥವಾ ದೇವಾಲಯ ನಿರ್ಮಾಣ ಮಾಡಲು ಅವಕಾಶ ನೀಡಬಾರದು. ಉದ್ಯಾನವನಗಳು

(2ನೇ ಪುಟ ನೋಡಿ)

## ಬಾಗಲಕೋಟೆ-ಕುಡಚಿ ಮಾರ್ಗ 2027 ಕ್ಕೆ ಪೂರ್ಣ: ವಿ.ಸೋಮಣ್ಣ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.22-ಶತಮಾನಕ್ಕೆ ಬೇಕಾದಷ್ಟು ರೈಲ್ವೆ ಮೂಲಸೌಕರ್ಯ, ಆಧುನೀಕರಣದ ಕೆಲಸಗಳು ರೇಲ್ವೆ ಇಲಾಖೆಯಲ್ಲಿ ಪ್ರಧಾನಿ ನರೇಂದ್ರ

(2ನೇ ಪುಟ ನೋಡಿ)

## ಕಳ್ಳತನ ಪ್ರಕರಣ ಆರೋಪಿ ಬಂಧನ: 6.37 ಲಕ್ಷ ರೂ. ಮೌಲ್ಯದ ಸ್ವತ್ತು ಜಪ್ತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ : ಮೇ.22: ಜಿಲ್ಲೆಯಲ್ಲಿ ನಡೆದ ಮನೆ ಕಳುವು ಪ್ರಕರಣವನ್ನು ಭೇದಿಸಿ ಒಬ್ಬ ಆರೋಪಿತನ್ನು ಬಂಧಿಸಿ ಆತನಿಂದ 6,37,500 ರೂ. ಮೌಲ್ಯದ ಸ್ವತ್ತನ್ನು ವಶಪಡಿಸಿಕೊಂಡು ಆರೋಪಿಯನ್ನು ನ್ಯಾಯಾಂಗ ಬಂಧಕ್ಕೆ ನೀಡಲಾಗಿದೆ ಎಂದು ಬೀದರ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಪ್ರದೀಪ ಗುಂಟಿ ತಿಳಿಸಿದರು.

ನಗರದ ಮಾರ್ಕೆಟ್ ಪೊಲೀಸ್ ಠಾಣೆಯಲ್ಲಿ ಸರಹದ್ದಿನಲ್ಲಿ ನಡೆದ ಪ್ರಕರಣದಲ್ಲಿ ಒಬ್ಬ ಆರೋಪಿಯನ್ನು ಬಂಧಿಸಿ ಆತನಿಂದ 30 ಗ್ರಾಮ ಬಂಗಾರದ ಬಿಸ್ಕಿಟ್ ಅ.ಕಿ. 2,40,000 ರೂ, 25 ಗ್ರಾಂ ಬಂಗಾರದ ಚಂಪಾಕಲಿ ಕೊರಳಿನ ಸರ ಅ.ಕಿ. 2,00,000 ರೂ., 12 ಗ್ರಾಂ ಬಂಗಾರದ ಲಾಕೇಟ್ ಅ.ಕಿ. 96,000 ರೂ., 05 ಗ್ರಾಂ. ಬಂಗಾರದ ಬೆರಳಿನ ಸುತ್ತುಂಗುರ ಅ.ಕಿ. 40,000 ರೂ., 03 ಗ್ರಾಂ ಬಂಗಾರದ ಪದಕ ಹಾಗೂ ಗುಂಡುಗಳು ಅ.ಕಿ. 24,000 ರೂ. ಹೀಗೆ ಒಟ್ಟು 7.5 ತೊಲೆ ಬಂಗಾರದ ಆಬರಣಗಳು ಅ.ಕಿ. 6,37,500 ರೂ. ಬೆಲೆಬಾಳುವ ಸ್ವತ್ತನ್ನು ಜಪ್ತಿ ಮಾಡಲಾಗಿದೆ ಎಂದರು. ಪ್ರಕರಣವನ್ನು ಪತ್ತೆ ಹಚ್ಚುವಲ್ಲಿ ಪಾಲ್ಗೊಂಡ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಯವರನ್ನು ಪೊಲೀಸ್ ಅಧೀಕ್ಷಕರು ಪ್ರಶಂಸನೀಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಚಂದ್ರಕಾಂತ ಪೂಜಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಧಾರಾಕಾರ ಮಳೆ: ಕೊಚ್ಚಿ ಹೋದ ಸೇತುವೆ, ನಿಂಬೆ ಹಾಳು



ಮಲ್ಲಮ್ಮನುಡಿ ವಾರ್ತೆ ಬೀದರ. ಮೇ. 22:ಬೀದರ್ ಜಿಲ್ಲೆಯಾದ್ಯಂತ ಬುಧವಾರ ರಾತ್ರಿಯಿಂದ ಗುರುವಾರ ಬೆಳಗಿನ ವರೆಗೆ ಧಾರಾಕಾರ ಮಳೆಯಾಗಿದೆ. ಸತತ ಮಳೆಗೆ ಬಸವಕಲ್ಯಾಣ ತಾಲ್ಲೂಕಿನ ಗೌರ ಗ್ರಾಮದಲ್ಲಿ ಸೇತುವೆ ಕೊಚ್ಚಿಕೊಂಡು ಹೋಗಿದ್ದು, ಜನ ಹಾಗೂ ವಾಹನ ಸಂಚಾರ ಸ್ಥಗಿತೊಂಡಿದೆ. ಈ ರಸ್ತೆಯು ಬಸವಕಲ್ಯಾಣ, ಹುಲಸೂರ ಹಾಗೂ ಮಹಾರಾಷ್ಟ್ರದ ಶಹಾಜಹಾನಿ ಔರಾದ್‌ಗೆ ಸಂಪರ್ಕ ಕಲ್ಪಿಸುತ್ತದೆ. ಔರಾದ್ ತಾಲ್ಲೂಕಿನ ಸುಂದಾಳ ಗ್ರಾಮದಲ್ಲಿ ಬಸವರಾಜ ಎಂಬುವರ

ಅರ್ಧ ಎಕರೆ ತೋಟದ ನಿಂಬೆ ಗಿಡಗಳು ಹಾಳಾಗಿವೆ. ಜಿಲ್ಲೆಯ ಹುಮನಾಬಾದ್, ಭಾಲ್ಕಿ ಹಾಗೂ ಔರಾದ್ ನಲ್ಲಿ ಬುಧವಾರವೂ ಮಳೆಯಾಗಿದೆ.

ಬೀದರ್ ನಗರ ಹಾಗೂ ಸುತ್ತಮುತ್ತಲಿನ ಭಾಗಗಳಲ್ಲಿ ದಿನವಿಡೀ ಮಳೆ ಬಿಡುವು ಕೊಟ್ಟಿತ್ತು. ಸಂಜೆ ಪುನಃ ದಟ್ಟ ಕಾರ್ಮೋಡ ಕವಿದು ಮಳೆ ಆರಂಭಗೊಂಡಿದೆ.

ಒಂದನೇ ಪುಟದಿಂದ

# ಜಿಲ್ಲೆಯ 33 ಉದ್ಯಾನ ಅಭಿವೃದ್ಧಿಗೆ 23 ಕೋಟಿ ರೂ. ಮಂಜೂರು:ಈಶ್ವರ ಬಿ.ಖಂಡ್ರೆ

ಉತ್ತಮ ಶ್ವಾಸ ತಾಣಗಳಾಗಿರಬೇಕು. ಇಲ್ಲಿ ಸ್ಥಳೀಯ ಪ್ರಬೇಧದ ಗಿಡಗಳನ್ನು ಬೆಳೆಸಬೇಕು ಎಂದು ಹೇಳಿದರು.

ಚೈನ್ ಲಿಂಕ್ ಫೆನ್ಸ್ ಹಾಕಲು ಸೂಚನೆ:ಜಿಲ್ಲೆಯಲ್ಲಿರುವ 33 ಉದ್ಯಾನವನಗಳಲ್ಲಿ ಯಾವುದೂ ಒತ್ತುವರಿ ಆಗದಂತೆ ತಡೆಯಲು ಹಾಗೂ ಉದ್ಯಾನದಲ್ಲಿನ ಹೂಗಿಡಗಳನ್ನು ದರಕರುಗಳು ತಿನ್ನದಂತೆ ಕಾಪಾಡಲು ಗಟ್ಟಿಮುಟ್ಟಾದ ತಂತಿಬೇಲಿ ಹಾಕುವಂತೆ ಜಿಲ್ಲಾ ಉಸ್ತುವಾರಿ ಸಚಿವರು ಸೂಚಿಸಿದರು.

ಮಕ್ಕಳ ಆಟಿಕೆ ಅಳವಡಿಕೆಗೂ ಸೂಚನೆ:ನಗರ, ಪಟ್ಟಣದ ಉದ್ಯಾನವನಗಳನ್ನು ವಿಶ್ವದರ್ಜೆಯ ಮಟ್ಟದ ಮಾನದಂಡಗಳಿಗೆ ಅನುಗುಣವಾಗಿ ಅಭಿವೃದ್ಧಿಪಡಿಸಬೇಕು, ಮಕ್ಕಳ ಆಟಿಕೆಗಳನ್ನು ಅಳವಡಿಸಿ, ನಿರ್ವಹಣೆ ಮಾಡಬೇಕು ಮತ್ತು ಅಲ್ಲಿರುವ ವೃಕ್ಷಗಳ ಮೇಲೆ ಅವುಗಳ ಪ್ರಭೇದ, ವೈಶಿಷ್ಟ್ಯದ ಫಲಕ ಹಾಕಿ ಮಕ್ಕಳಿಗೆ ಪ್ರಕೃತಿ, ಪರಿಸರದ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಕೆರೆಗಳ ಹೂಳು ತೆಗೆಯಲು ಸೂಚನೆ: ಕೆರೆಗಳ ಸ್ವಚ್ಛತೆ ಅತಿ ಮುಖ್ಯವಾಗಿದೆ. ಕೆರೆಗಳಿಗೆ ತ್ಯಾಜ್ಯ ಜಲ ಸೇರಿದರೆ ಜನ, ಜಾನುವಾರಗಳ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಜಲಚರಗಳು ಸಾವಿಗೀಡಾಗುತ್ತವೆ. ಹೀಗಾಗಿ ಜಿಲ್ಲೆಯ ಎಲ್ಲ 29 ಕೆರೆಗಳ ಹೂಳು ತೆಗೆಯುವಂತೆ ಮತ್ತು ಕೆರೆಗೆ ಸಂಸ್ಕರಣೆ ಆಗದ ತ್ಯಾಜ್ಯ ಜಲ ಹರಿಯಲು ಅವಕಾಶ ನೀಡದಂತೆ ಕ್ರಮ ಕೈಗೊಳ್ಳಲು ಸೂಚಿಸಿದರು.

ಎಸ್.ಟಿ.ಪಿ. ಸ್ಥಾಪನೆ: ನಗರ, ಪಟ್ಟಣಕ್ಕೆ ಹೊಂದಿಕೊಂಡಿರುವ ಕೆರೆಗಳ ಬಳಿ ತ್ಯಾಜ್ಯ ಜಲ ಸಂಸ್ಕರಣಾ ಘಟಕ (ಎಸ್.ಟಿ.ಪಿ.) ಸ್ಥಾಪಿಸಿ, ಜಲ ಶುದ್ಧೀಕರಣವಾದ ಬಳಿಕವಷ್ಟೇ ಕೆರೆಗೆ ಹರಿಸಬೇಕು. ಇದಕ್ಕೆ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿ ಎಂದು ಈಶ್ವರ ಖಂಡ್ರೆ ಸೂಚನೆ ನೀಡಿದರು.

ಈಗಾಗಲೇ ಸ್ಥಾಪಿಸಲಾಗಿರುವ ಎಸ್.ಟಿ.ಪಿ.ಗಳು ಕಾರ್ಯ ನಿರ್ವಹಿಸುತ್ತಿದೆಯೇ ಇಲ್ಲವೇ ಎಂಬುದನ್ನು ಖಾತ್ರಿಪಡಿಸಿಕೊಳ್ಳುವಂತೆ ಸೂಚಿಸಿದ ಅವರು, ಜಲ ಮೂಲಗಳ ನಿಯಮಿತ ಪರಿಶೀಲನೆ ನಡೆಸುವಂತೆಯೂ ತಿಳಿಸಿದರು.

ಭಾಲ್ಕಿಯ ಮಾಸೂಂಪಾಶಾ ಕಾಲೋನಿಯಲ್ಲಿರುವ 8 ಎಕರೆ ಕೆರೆ ಸ್ವಚ್ಛತೆಗೆ ಕ್ರಮ ಕೈಗೊಳ್ಳುವಂತೆ ಹಾಗೂ ಏರಿ ನಿರ್ಮಾಣ ಮಾಡಲು ಸೂಚನೆ ನೀಡಿದರು.

ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ದೀಪಾ ಚೋಳನ್, ಪೌರಾಡಳಿತ ಇಲಾಖೆ ನಿರ್ದೇಶಕ ಪ್ರಭುಲಿಂಗ್ ಕವಳಿಕಟ್ಟಿ ಮತ್ತು ಜಿಲ್ಲೆಯ ಅಧಿಕಾರಿಗಳು ಸಭೆಯಲ್ಲಿ ಭಾಗಿಯಾಗಿದ್ದರು.

# 2027 ಕ್ಕೆ ಪೂರ್ಣ: ವಿ.ಸೋಮಣ್ಣ

ಮೋದಿ ಅವರ ನೇತೃತ್ವದಲ್ಲಿ 10 ವರ್ಷದ ಅವಧಿಯಲ್ಲಿ ಆಗಿವೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದರು.

ಅಮೃತ ಭಾರತ ನಿಲ್ದಾಣ ಯೋಜನೆಯಡಿ ನವೀಕರಣಗೊಂಡಿರುವ ಬಾಗಲಕೋಟೆ ನಗರ ರೈಲು ನಿಲ್ದಾಣ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಬಾಗಲಕೋಟೆ–ಕುಡಚಿ ರೈಲ್ವೆ ಮಾರ್ಗ 2027ಕ್ಕೆ ಪೂರ್ಣಗೊಳ್ಳಲಿದೆ. ಗದಗ–ಹುಟಗಿ ಡಬ್ಲಿಂಗ್ ಕಾಮಗಾರಿ ವೇಗದಲ್ಲಿ ಸಾಗಿದೆ. ಆಲಮಟ್ಟಿ–ಚಿತ್ರದುರ್ಗ ಹೊಸ ಮಾರ್ಗಕ್ಕೆ ಡಿಪಿಆರ್ ಸಿದ್ಧತವಾಗುತ್ತಿದೆ ಎಂದರು.

ಸ್ವಾತಂತ್ರ್ಯ ನಂತರ ಯಾವ ಸರ್ಕಾರಗಳೂ ಮಾಡದಷ್ಟು ಕೆಲಸವನ್ನು ಮೋದಿ ಸರ್ಕಾರ ಮಾಡುತ್ತಿದೆ. ಅಟಲ್‌ಬಿಹಾರಿ ವಾಜಪೇಯಿ ಅವರ ಅವಧಿಯಲ್ಲಿ ರಾಷ್ಟ್ರೀಯ ಹೆದ್ದಾರಿಗಳು ಅಭಿವೃದ್ಧಿಗೊಂಡಂತೆ, ಮೋದಿ ಅವರ ಕಾಲದಲ್ಲಿ ರೈಲ್ವೆ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ ಎಂದು ಸಚಿವ ಸೋಮಣ್ಣ ಹೇಳಿದರು.

ಸಂಸದರಾದ ಪಿ.ಸಿ.ಗದ್ದಿಗೌಡರ ಹಾಗೂ ಗೋವಿಂದ ಕಾರಜೋಳ, ಮಾಜಿ ಸಚಿವ ಮುರುಗೇಶ ನಿರಾಣಿ, ಶಾಸಕರಾದ ಸಿದ್ದು ಸವದಿ, ಹಣಮಂತ ನಿರಾಣಿ, ಪಿ.ಎಚ್.ಪೂಜಾರ, ಮಾಜಿ ಶಾಸಕ ವೀರಣ್ಣ ಚರಂತಿಮಠ, ಹುಬ್ಬಳ್ಳಿ ರೇಲ್ವೆ ವಿಭಾಗದ ವ್ಯವಸ್ಥಾಪಕಿ ಬೆಲಾಮಿನಾ, ಜಿಲ್ಲಾಧಿಕಾರಿ ಕೆ.ಎಂ.ಜಾನಕಿ, ಜಿಪಂ ಸಿಇಒ ಶಶಿಧರ ಕುರೇರ, ಎಸ್ಪಿ ಅಮರನಾಥ ರೆಡ್ಡಿ ಮತ್ತಿತರರು ಇದ್ದರು

# ರಂಭಾಪುರಿ ಶ್ರೀಗಳು

ಶ್ರೀಗಳ ಕಾರ್ಯ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ.

ಇಂದು ರಜತ ಮಹೋತ್ಸವ ಆಚರಿಸಿಕೊಳ್ಳುತ್ತಿರುವ ಶ್ರೀಗಳು ಮುಂದೊಂದು ದಿನ ಸುವರ್ಣ ಮಹೋತ್ಸವ ಆಚರಿಸಿಕೊಳ್ಳುವ ಸೌಭಾಗ್ಯ ಪ್ರಾಪ್ತಿ ಆಗಲೆಂದು ಹಾರೈಸಿದರು.

ಸಂಸದ ಸಾಗರ ಖಂಡ್ರೆ ಮಾತನಾಡಿ, ಮನದ ಶಾಂತಿಗೆ ಧಾರ್ಮಿಕ ಸಮಾರಂಭಗಳ ಅವಶ್ಯಕತೆಯಿದೆ. ರಂಭಾಪುರಿ ಜಗದ್ಗುರುಗಳ ಧರ್ಮಯಜ್ಞ ಮಾನವ ಸಮುದಾಯದ ಮೇಲೆ ಅಪಾರ ಪ್ರಭಾವ ಬೀರುತ್ತದೆ ಎಂದರು.ನೇತೃತ್ವ ವಹಿಸಿದ ರಾಜೇಶ್ವರ ಶಿವಾಚಾರ್ಯರು ಮಾತನಾಡಿ, ಇಂದು ನಮ್ಮ ಜೀವನದ ಅವಿಸ್ಮರಣೀಯವಾದ ಪವಿತ್ರ ದಿನ. ಪೂರ್ವಜ್ಜರು ಮಾಡಿದ ತಪ್ಪಸ್ಸಿನ ಶಕ್ತಿ ನಮ್ಮನ್ನು ಈ ಎತ್ತರಕ್ಕೆ ಬೆಳೆಸಿದೆ. ಒಳ್ಳೆಯದಕ್ಕಿಂತ ಕೆಟ್ಟದು ಬಹುಬೇಗ ಬೆಳೆದು ಅಷ್ಟೇ ಬೇಗ ನಾಶವಾಗುತ್ತದೆ. ಬೆಳಗುವ ಸೂರ್ಯನಿಗೆ ಮಣ್ಣು ಎರಚಿದರೆ ತಾಗದು. ಅದು ಎರಚಿದವನ ಕಣ್ಣಲ್ಲಿ ಬೀಳುವುದು. ಕಸ್ತೂರಿ ಸುಗಂಧವನ್ನು ಯಾರೂ ಹೊರ ಹಾಕಬೇಕಾಗಿಲ್ಲ. ಸದ್ಗುಣವುಳ್ಳ ಸಜ್ಜನರ ಬಾಳು ಸತ್ಪರಂಪರೆಗಳೇ ಧರ್ಮದ ಆತ್ಮ ಈ ದಿಸೆಯಲ್ಲಿ ಮಾಡಿದ ಪ್ರಯತ್ನ ನಮಗೆ ಸಂತೃಪ್ತಿ ತಂದಿದೆ ಎಂದು ತಿಳಿಸಿದರು.ಹುಡುಗಿ ಹಿರೇಮಠದ ವೀರೂಪಾಕ್ಷಲಿಂಗ ಶಿವಾಚಾರ್ಯರು, ಹಾವಗಿಲಿಂಗೇಶ್ವರ ಶಿವಾಚಾರ್ಯರು ಮಾತನಾಡಿದರು. ಈ ಸಂದರ್ಭದಲ್ಲಿ ಸಾವಿರಾರೂ ಭಕ್ತರು ಸೇರಿದ್ದರು.

# ಜಿಲ್ಲಾ ಸಮನ್ವಯ ಸಮಿತಿ ಸಭೆ:ಲಾರ್ವಾ ಸಮೀಕ್ಷೆ ತೀವ್ರಗೊಳಿಸಿ, ಈಡಿಸ್ ಉತ್ಪತ್ತಿ ತಾಣ ನಿರ್ಮೂಲನೆ ಮಾಡಿ ಬಿ.ಫೌಜಿಯಾ ತರನ್ನುಮ್




ಕಲಬುರಗಿ,ಮೇ.22:ಸಾಂಕ್ರಾಮಿಕ ರೋಗ ಡೆಂಗ್ಯೂ ಹರಡಲು ಕಾರಣವಾಗುವ ಈಡಿಸ್ ಸೊಳ್ಳೆಗಳ ಉತ್ಪತ್ತಿ ತಾಣಗಳ ನಿರ್ಮೂಲನೆ ಮಾಡಬೇಕು ಮತ್ತು ಲಾರ್ವಾ ಸಮೀಕ್ಷೆ ತೀವ್ರಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಆರೋಗ್ಯಅಧಿಕಾರಿಗಳಿಗೆ ಸೂಚನೆ ನೀಡಿದರು.ಗುರುವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡೆಂಗ್ಯೂ ರೋಗಗಳ ನಿಯಂತ್ರಣ ಮತ್ತು ಮುಂಜಾಗ್ರತಾ ಕ್ರಮಗಳ ಕುರಿತು ಜರುಗಿದ ಜಿಲ್ಲಾ ಸಮನ್ವಯ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ನಿಟ್ಟಿನಲ್ಲಿ ಗ್ರಾಮ ಪಂಚಾಯತಿ, ಪಟ್ಟಣ ಪಂಚಾಯತಿ,ನಗರಸಭೆ, ಮಹಾನಗರ ಪಾಲಿಕೆಯ ಚುನಾಯಿತ ಸದಸ್ಯರ ಮತ್ತು ವಿವಿಧ ಇಲಾಖೆಯ ಸಹಕಾರ ಪಡೆಯಬೇಕು ಎಂದರು.ಡೆಂಗ್ಯೂ ಜ್ವರವು ಈಡಿಸ್ ಎಂಬ ಜಾತಿಯ ಸೊಳ್ಳೆ ಕಚ್ಚುವುದರಿಂದ ಒಬ್ಬರಿಂದ ಒಬ್ಬರಿಗೆ ಹರಡುವ ರೋಗವಾಗಿದ್ದು, ಈ ಸೊಳ್ಳೆಗಳ ತಿನ್ನುವ ಗಪ್ಪೆ ಮೀನುಗಳನ್ನು ವಿಶೇಷವಾಗಿ ಚಿತ್ತಾಪುರ, ಶಹಾಬಾದ,ಸೇಡಂ ತಾಲೂಕಿನ ಕಲ್ಲು ಗಣಿ ಪ್ರದೇಶದಲ್ಲಿ ನಿಂತ ನೀರಿನಲ್ಲಿ ಬಿಡಬೇಕು. ಇದಲ್ಲದೆ ಬಾವಿ, ನೀರು ನಿಲ್ಲು ತೆಗ್ಗ ಪ್ರದೇಶದಲ್ಲಿ, ವಾಟರ್ ಟ್ಯಾಂಕ್‌ನಲ್ಲಿ ಬಿಡಬಹುದಾಗಿದೆ.

ಇದನ್ನು ಅಭಿಯಾನದ ರೂಪದಲ್ಲಿ ಮಾಡಬೇಕು ಎಂದ ಜಿಲ್ಲಾಧಿಕಾರಿಗಳು, ಲಸಿಕಾಕರಣ ಕಾರ್ಯಕ್ರಮಗಳು ನಿಗದಿಯಂತೆ ಶೇ.100ರಷ್ಟು ಪ್ರಗತಿ ಸಾಧಿಸಬೇಕೆಂದರು.

ಈಡಿಸ್ ಸೊಳ್ಳೆಗಳು ನೀರು ಶೇಖರಣೆಯ ತೊಟ್ಟಿಗಳು, ಬ್ಯಾರಲ್‌ಗಳು,ಡ್ರಮ್‌ಗಳು,ಹೂವಿನ ಕುಂಡ ಮುಂತಾದವುಗಳಲ್ಲದೇ ಮನೆ ಸುತ್ತ ಮುತ್ತ ಬಯಲಲ್ಲಿ ಬಿಸಾಡಿದ ಪಿಂಗಾಣಿ ವಸ್ತುಗಳು, ಪ್ಲಾಸ್ಟಿಕ್ ಕಪ್ಪುಗಳು, ಟೈರ್‌ಗಳು, ತೆಂಗುವಿನ ಚಿಪ್ಪು ಮತ್ತು ಇತರೆ ವಸ್ತುಗಳಲ್ಲಿ ನೀರು ಸಂಗ್ರಹವಾದಾಗ ಉತ್ಪತ್ತಿಯಾಗುತ್ತವೆ. ಹೀಗಾಗಿ ನೀರು ನಿಲ್ಲದಂತೆ ಸಾರ್ವಜನಿಕರಿಗೆ ಮನೆ–ಮನೆ ಹೋಗಿ ಅರಿವು ಮೂಡಿಸಬೇಕು.ಸಾರಿಗೆಸಂಸ್ಥೆಯ ಕಾರ್ಯಾಗಾರ,ಡಿಪೋಗಳಲ್ಲಿನ ಸಿಬ್ಬಂದಿಗಳಿಗೂ ಜಾಗೃತಿ ಮೂಡಿಸಬೇಕು ಮತ್ತು ಬಸ್‌ಗಳಲ್ಲಿ ಪೋಸ್ಟರ್ ಅಂಟಿಸುವ ಮೂಲಕ ವ್ಯಾಪಕ ಪ್ರಚಾರ ಕಾರ್ಯ ಸಹ ಹಮ್ಮಿಕೊಳ್ಳಬೇಕು ಎಂದರು.ಕಸ ಬಿಸಾಡುವವರಿಗೆ ದಂಡ ಹಾಕಿ: ಕಲಬುರಗಿ ಮಹಾನಗರದಲ್ಲಿ ಕಳೆದ ಕೆಲವು ವರ್ಷಗಳಿಂದ ಡೆಂಗ್ಯೂ ಪಾಸಿಟಿವ್ ಪ್ರಕರಣಗಳು ಹೆಚ್ಚು ವರದಿಯಾಗುತ್ತಿದ್ದು, ಇದಕ್ಕೆ ಮೂಲ ಕಾರಣ ಅನೈರ್ಮಲ್ಯ. ಹೀಗಾಗಿ ಮಹಾನಗರ ಪಾಲಿಕೆಯಿಂದ ಸ್ವಚ್ಛತೆ ಅಭಿಯಾನ ಮಾಡುವುದರ ಜೊತೆಗೆ ಕಸ ಹಾಕುವವರ ಮೇಲೆ ದಂಡ ಹಾಕಬೇಕು ಮತ್ತು ರಸ್ತೆ, ನಿವೇಶನದ ಮೇಲಿರುವ ಅನುಪಯುಕ್ತ ಕಟ್ಟಡದ ಅವಶೇಷಗಳನ್ನು ತೆರವುಗೊಳಿಸಬೇಕೆಂದು ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರಿಗೆ ಡಿ.ಸಿ. ಸೂಚಿಸಿದಲ್ಲದೆ, ವಸತಿ ನಿಲಯ, ಶಾಲೆ–ಕಾಲೇಜು ಮತ್ತು ಗ್ರಾಮ ಪಂಚಾಯತಿ, ತಾಲೂಕ ಪಂಚಾಯತಿ, ಪೌರ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸ್ವಚ್ಛತಾ ಅಭಿಯಾನ ಆಯೋಜಿಸಬೇಕು ಎಂದು ತಿಳಿಸಿದರು.ಜಿಲ್ಲಾ ಕೀಟಶಾಸ್ತ್ರಜ್ಞ ಚಾಮರಾಜ ದೊಡ್ಡಮನಿ ಮಾತನಾಡಿ, ಡೆಂಗ್ಯೂ ರೋಗ ಲಕ್ಷಣ, ರೋಗ ಹರಡುವಿಕೆ ಹಾಗೂ ತೆಗೆದುಕೊಳ್ಳಬೇಕಾದ ಕ್ರಮಗಳು ಹಾಗೂ ವಿವಿಧ ಇಲಾಖೆಯ ಸಹಭಾಗಿತ್ವದ ಬಗ್ಗೆ ವಿವರ ನೀಡುತ್ತಾ, ಡೆಂಗ್ಯೂ ರೋಗ ಪತ್ತೆಯಾದಲ್ಲಿ ಕೂಡಲೆ ಚಿಕಿತ್ಸೆ ಒದಗಿಸಲು ಜಿಮ್ಸ್ ಆಸ್ಪತ್ರೆಯಲ್ಲಿ 20, ಪ್ರತಿ ತಾಲೂಕಾ ಆಸ್ಪತ್ರೆಯಲ್ಲಿ ತಲಾ 10 ಹಾಗೂ ಉದಾಯ ಆರೋಗ್ಯ ಕೇಂದ್ರಗಳಲ್ಲಿ ತಲಾ 5 ಹಾಸಿಗೆಗಳು ಡೆಂಗ್ಯೂ ಪೀಡಿತ ರೋಗಿಗಳಿಗೆ ಮೀಸಲಿರಿಸಿದೆ ಎಂದು ತಿಳೀಸಿದರು. ವಿಶ್ವ ಆರೋಗ್ಯ ಸಂಸ್ಥೆಯ ಪೋಲಿಯೋ ಸರ್ವಲೆನ್ಸ್ ಅಧಿಕಾರಿ ಡಾ.ಅನೀಲ ತಾಳಿಕೋಟಿ ಅವರು ಡೆಂಗ್ಯೂ ರೋಗ, ರುಬೆಲ್ಲಾ, ಮೀಸಲ್ಸ್ ಕುರಿತು ವಿಭಾಗದ ಚಿತ್ರಣ ಸಭೆ ಮುಂದಿಟ್ಟರು.

# ವಯಸ್ಕರಿಗೆ ಬಿ.ಸಿ.ಜಿ ಲಸಿಕೆ:ಭಯವಿಲ್ಲದೆ ಲಸಿಕೆ ಹಾಕಿಸಿಕೊಳ್ಳುವಂತೆ ಡಿ.ಸಿ. ಮನವಿ

ಕಲಬುರಗಿ,ಮೇ.22:ಕ್ಷಯರೋಗ ತಡೆಯುವನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮವಾಗಿ ಅಪಾಯದಂಚಿನಲ್ಲಿರುವ 18 ವರ್ಷ ಮತ್ತು ಮೇಲ್ಪಟ್ಟ ವಯಸ್ಕರಿಗೆ ವಯಸ್ಕರ ಬಿ.ಸಿ.ಜಿ ಲಸಿಕೆ ನೀಡಲಾಗುತ್ತಿದೆ. ಇದು ಸುರಕ್ಷಿತವಾಗಿದ್ದು, ಯಾವುದೇ ಅಡ್ಡಿ ಪರಿಣಾಮ ಇರುವುದಿಲ್ಲ. ಅನಗತ್ಯ ಭಯಪಡದೆ ಲಸಿಕೆ ಹಾಕಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಜಿಲ್ಲೆಯ ವಯಸ್ಕರ ಜನತೆಯಲ್ಲಿ ಮನವಿ ಮಾಡಿದ್ದಾರೆ.ಲಸಿಕಾಕರಣ ಕಳೆದ ಮೇ 5 ರಿಂದಲೆ ಆರಂಭವಾಗಿದ್ದು, ಜೂನ್ ಅಂತ್ಯದ ವರೆಗೆ ಇರಲಿದೆ. ಜಿಲ್ಲೆಯಾದ್ಯಂತ ಮನೆ ಮನೆ ಸಮೀಕ್ಷೆ ಮಾಡಿ ಅಪಾಯದಂಚಿನಲ್ಲಿರುವ 4,11,460 ಜನರನ್ನು ಈಗಾಗಲೆ ಗುರುತಿಸಿಸಲಾಗಿದೆ. ಇದರಲ್ಲಿ 55,056 ಜನ ಲಸಿಕೆ ಪಡೆಯಲು ಮೌಖಿಕ ಒಪ್ಪಿಗೆ ಸೂಚಿಸಿದ್ದು, ಈ ಪೈಕಿ ಇದುವರೆಗೆ 19,970 ವಯಸ್ಕರಿಗೆ ಬಿ.ಸಿ.ಜಿ ಲಸಿಕೆ ನೀಡಲಾಗಿದೆ. ಇನ್ನು ಒಪ್ಪಿಗೆ ಸೂಚಿಸದವರು ಕೂಡಲೆ ಒಪ್ಪಿಗೆ ಸೂಚಿಸಿ ಲಸಿಕೆ ಹಾಕಿಸಿಕೊಳ್ಳುಬೇಕೆಂದು ಅವರು ತಿಳಿಸಿದ್ದಾರೆ.ದೇಶದ 23 ರಾಜ್ಯಗಳ 274 ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಕೇಂದ್ರ ಸರ್ಕಾರವು ಈ ಒಂದು ಲಸಿಕಾಕರಣ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಇದರಲ್ಲಿ ಕಲಬುರಗಿ ಸೇರಿ ರಾಜ್ಯದ 16 ಜಿಲ್ಲೆಗಳಲ್ಲಿ ನಡೆಯುತ್ತಿದೆ. ಜಿಲ್ಲೆಯಲ್ಲಿ ಕಾರ್ಯಕ್ರಮ ಯಶಸ್ವಿಗೆ ವಯಸ್ಕರು ಸಹಕರಿಸಬೇಕೆಂದು ಅವರು ಕೋರಿದ್ದಾರೆ.ಯಾರಿಗೆಲ್ಲ ಲಸಿಕೆ?: ಕಳೆದ 5 ವರ್ಷಗಳಲ್ಲಿ ಕನಿಷ್ಠ ಒಂದು ಬಾರಿಯಾದರೂ ಕ್ಷಯರೋಗವನ್ನು ಹೊಂದಿ ಗುಣಮುಖರಾದವರು,ಕ್ಷಯರೋಗಿಗಳ ನಿಕಟ ಸಂಪರ್ಕದಲ್ಲಿರುವವರು,ಪ್ರಸ್ತುತ ಕ್ಷಯರೋಗಿಗಳ ಸಂಪರ್ಕದಲ್ಲಿರುವವರು ಮತ್ತು ಜನವರಿ 2021 ರಿಂದ ನೀಕ್ಷಯ್ ತಂತ್ರಾಂಶದಲ್ಲಿ ದಾಖಲಾಗಿರುವ ರೋಗಿಗಳ ಸಂಪರ್ಕದಲ್ಲಿರುವವರು, 60 ವರ್ಷ ಅಥವಾ ಮೇಲ್ಪಟ್ಟ ವಯಸ್ಸಿನ ವ್ಯಕ್ತಿಗಳು, ಮಧುಮೇಹ (ಸಕ್ಕರೆ ಕಾಯಿಲೆ) ದಿಂದ ಬಳಲುತ್ತಿರುವವರು, ಪ್ರಸ್ತುತ ಹಾಗೂ ಹಿಂದೆ ಧೂಮಪಾನ ಸೇವನೆ ಮಾಡಿರುವವರು ಹಾಗೂ ಅಪೌಷ್ಟಿಕತೆಯಿಂದ ಬಳಲುತ್ತಿರುವವರಿಗೆ ವಯಸ್ಕರ ಬಿ.ಸಿ.ಜಿ ಲಸಿಕೆ ನೀಡಲಾಗುತ್ತದೆ.

ಇನ್ನು ಕ್ಷಯರೋಗದಿಂದ ಬಳಲುತ್ತಿದ್ದು, ಚಿಕಿತ್ಸೆ ಮುಗಿದ 4 ವಾರಗಳ ನಂತರ ವಯಸ್ಕರ ಬಿಸಿಜಿ ಲಸಿಕೆಯನ್ನು ಪಡೆಯಬಹುದಾಗಿದೆ. ಅನಾರೋಗ್ಯದಿಂದ ಬಳಲಿ ಗುಣಮುಖರಾದವರಿಗೆ ವೈದ್ಯಕೀಯ ಸಲಹೆ ಮೇರೆಗೆ ಹಾಗೂ ರಕ್ತ ವರ್ಗಾವಣೆ ಮಾಡಿಕೊಂಡ 3 ತಿಂಗಳ ಅವಧಿ ಪೂರೈಸಿದವರಿಗೆ ವಯಸ್ಕರ ಬಿಸಿಜಿ ಲಸಿಕೆ ನೀಡಲು ವಿಶೇಷವಾಗಿ ಪರಿಗಣಿಸಲಾಗುತ್ತಿದೆ. ಇವರಿಗೆ ಲಸಿಕೆ ಇಲ್ಲ: 18 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ, ಒಪ್ಪಿಗೆ ನೀಡದವರಿಗೆ, ಹೆಚ್.ಐ.ವಿ ರೋಗದಿಂದ ಬಳಲುತ್ತಿರುವವರಿಗೆ, ಮಾರಣಾಂತಿಕ ಕಾಯಿಲೆಯಿಂದ ಬಳಲುತ್ತಿರುವವರಿಗೆ, ರೋಗ ನಿರೋಧಕ ಶಕ್ತಿ ಕಡಿಮೆಯಿರುವವರಿಗೆ ಹಾಗೂ ಅಂಗಾಂಗಗಳನ್ನು ಕಸಿ ಮಾಡಿಕೊಂಡಿರುವವರಿಗೆ, ಗರ್ಭಿಣಿ ಹಾಗೂ ಹಾಲುಣಿಸುವ ಮಹಿಳೆಯರಿಗೆ, ಕಳೆದ 3 ತಿಂಗಳುಗಳಲ್ಲಿ ರಕ್ತವರ್ಗಾವಣೆ ಇತಿಹಾಸ ಹೊಂದಿರುವವರಿಗೆ, ಹೆಚ್.ಐ.ವಿ ಸೋಂಕಿಗೆ ಒಳಗಾಗುವ ಹೆಚ್ಚಿನ ಅಪಾಯಕ್ಕೆ ಕಾರಣವಾಗುವ ಇತಿಹಾಸ ಹೊಂದಿರುವವರಿಗೆ ಹಾಗೂ ಯಾವುದೇ ಕಾರಣದಿಂದ ಪ್ರಸ್ತುತ ಅನಾರೋಗ್ಯದಿಂದ ಬಳಲುತ್ತಿರುವವರಿಗೆ ಬಿ.ಸಿ.ಜಿ ಲಸಿಕೆ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ.

# ಜಾತಿ ಜನಗಣತಿ ಸಮೀಕ್ಷೆ ವಿಫಲ, ಸಾರ್ವಜನಿಕ ಸರ್ವೇಯೊಂದಿಗೆ ಸಮಾಜದ ಮಾಹಿತಿ ಪಡೆಯಲಿ:ಬಸವರಾಜ ಪವಾರ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 22 : ರಾಜ್ಯ ಸರ್ಕಾರ ಜನಗಣತಿ ದಿ ಮೇ.05 ರಿಂದ 25ರವರೆಗೆ ಮಾಡುವಂತೆ ಆದೇಶಸಿತ್ತು ಆದರೆ ಸಮೀಕ್ಷೆ ಕಾರ್ಯ ಪ್ರಾಮಾಣೀಕವಾಗಿ ಮಾಡದೇ ಕೇವಲ ಕಾಲ ಹರಣ ಮಾಡಿ ಪರಿಶಿಷ್ಟ ಜಾತಿಯ ಕೆಲ ಸಮುದಾಯಗಳ ಓಲೈಕೆಗಾಗಿ ಜಾತಿಜನಗಣತಿ ಮಾಡುತ್ತಿರುವುದು ಸರ್ಕಾರ ಜಾಣ ಕುರುಡ ನೀತಿ ಅನುಸರಿಸುತ್ತಿದೆ ಎಂದು ಬಂಜಾರ ಸಮಾಜದ ಬೀದರ ಜಿಲ್ಲಾಧ್ಯಕ್ಷ ಬಸವರಾಜ ಪವಾರ ವಕೀಲರು ಪತ್ರಿಕಾ ಪ್ರಕಟಣೆಯಲ್ಲಿ ಆಪಾದಿಸಿದ್ದಾರೆ.

ಜಾತಿ ಜನಗಣತಿದಾರರು ಪರಿಶಿಷ್ಟ ಜಾತಿಗಳ ಅಡಿಯಲ್ಲಿರುವ ಬಂಜಾರ –ಲಂಬಾಣಿ ಸಮಾಜದವರ ತಾಂಡಾಗಳಲ್ಲಿನ –ಕಂದಾಯ ಗ್ರಾಮಗಳಲ್ಲಿನ ಬಂಜಾರವರ ಮನೆ ಮನೆಗಳಿಗೆ ಹೋಗಿರುವುದಿಲ್ಲ. ಮತ್ತು ನಗರ ಪ್ರದೇಶಗಳಲ್ಲಿಯು ಸಮೀಕ್ಷೆ ಕಾರ್ಯ ಮಾಡಿರುವುದಿಲ್ಲ. ಇದರಿಂದ ಜಾತಿ ಜನಗಣತಿ ಕಾರ್ಯ ವಿಫಲಗೊಂಡಿರುವುದಲ್ಲದೆ ಎಸ್ಸಿ ಬಂಜಾರ – ಲಂಬಾಣಿ ಜನಾಂಗದ ಪರಿಪೂರ್ಣ ಮಾಹಿತಿ ಪಡೆದಿರುವುದಿಲ್ಲ. ಇದರಿಂದ ಸರ್ಕಾರದಿಂದ ಸಿಗುವ ಸಕಲ ಸೌಲತ್ತುಗಳು ದೊರಕುವುದಿಲ್ಲ. ಗಣತಿದಾರರು ನೆಟವರ್ಕ–ಸರ್ವರ್ ಬೀಜಿಯಿಂದ ಗಣತಿದಾರರ ಮೊಬೈಲ್



ಫೋನ್‌ಗಳಲ್ಲಿ ಸರ್ವರ್ ತೆರೆಯದೇ ಇದ್ದುದರಿಂದ ಮತ್ತು ಈ ಕುರಿತು ಎಸ್ಸಿ ಒಳ ಮೀಸಲಾತಿ ಸಮಾಜ ಬಾಂಧವರಿಗೆ ವಿಷಯ ಗೊತ್ತಾಗದೇ ಇರುವುದರಿಂದ ಸಮೀಕ್ಷೆ ಆಗಿರುವುದಿಲ್ಲ. ಶಿಕ್ಷಕ ವೃಂದದ ಗಣತಿದಾರರು ಈ ಕಾರ್ಯ ಮಾಡಲು ಸರ್ವರ್‌ನ ತೀವ್ರ ಅಡಚಣೆಯು ಕಾರಣವಾಗಿರುವುದೆಂದು ತಿಳಿದು ಬಂದಿರುತ್ತದೆ. ಇದರಿಂದ ಸಮಾಜಕ್ಕೆ ಅನ್ಯಾಯವಾಗಿದ್ದು ಜಾತಿಯ ಮತ್ತು ಕುಟುಂಬಕ್ಕೆ ಸಂಬಂಧಿಸಿ ಆರ್ಥಿಕ ಸಾಮಾಜಿಕ ಶೈಕ್ಷಣಿಕ ಸೇರಿದಂತೆ ಸರ್ವಾಂಗೀಣ ಪ್ರಗತಿಗೆ ದಾರಿ ಯಾಗುವ ಈ ಸಮೀಕ್ಷೆ ಕುಂಠಿತ ಮಾಡಿದೆ ಎಂಬುವುದು ಬೇರೆ ಹೇಳಬೇಕಾಗಿಲ್ಲ.

ಈ ತತಕ್ಷಣವೇ ರಾಜ್ಯ ಸರ್ಕಾರ ಜಾತಿ ಜನಗಣತಿ ಸಮೀಕ್ಷೆ ದಿನಾಂಕದ ಅವಧಿ ವಿಸ್ತರಿಸಿ ಪೂರ್ಣ ಪ್ರಮಾಣದ ಪ್ರಮಾಣಿಕ ಗುರುತು ಮಾಡುವ, ಮಾಹಿತಿ ಪಡೆಯುವ ಕಾರ್ಯವಾಗಬೇಕು. ಅಥವಾ ಸಮಸ್ತ ರಾಜ್ಯದ ಸಾರ್ವಜನಿಕ ಜನಗಣತಿಯೊಂದಿಗೆ ಪರಿಶಿಷ್ಟರ ಲಂಬಾಣೀ ಬಂಜಾರ ಸಮಾಜದ ಗಣತಿ ಮಾಡುವಂತಾಗಲಿ. ಆವಾಗ ಮಾತ್ರ ಲಂಬಾಣಿ ಕೋಡ್ ಸಂಖ್ಯೆ –017.2 ರಂತೆ ಒಳ ಮೀಸಲಾತಿಯಲ್ಲಿ ಸಂವಿಧಾನ ಅನುಚ್ಛೇದ–341ರ ಪ್ರಕಾರ ಪರಿಶಿಷ್ಟರ ಮೀಸಲಾತಿಯಲ್ಲಿ ಬಂಜಾರ ಸಮಾಜಕ್ಕೆ ಪೂರ್ಣ ಲಾಭ ದೊರಕಬಹುದಾಗಿದೆ ಆದ್ದರಿಂದ ಸರ್ಕಾರ ಈ ನಿಟ್ಟಿನಲ್ಲಿ ಸರ್ಕಾರವು ಪುನಃ ಸಮೀಕ್ಷೆಗಾಗಿ ಕ್ರಮ ಕೈಗೊಳ್ಳಬೇಕೆಂದು ಬಸವರಾಜ ಪವಾರ ವಕೀಲರು ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

# ಮನ್ನಳ್ಳಿ: ಎನ್‌ಎನ್‌ಎಸ್ ಶಿಬಿರಕ್ಕೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 22 : ಬೀದರ್ ತಾಲ್ಲೂಕಿನ ಮನ್ನಳ್ಳಿ ಗ್ರಾಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರ ಈಚೆಗೆ ಆರಂಭಗೊಂಡಿತು.



ಸಸಿಗೆ ನೀರೆರೆದು ಶಿಬಿರಕ್ಕೆ ಚಾಲನೆ ನೀಡಿದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು, ದೇಶದ ಪ್ರಗತಿಯಲ್ಲಿ ಯುವಕರ ಪಾತ್ರ ಬಹಳ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಸದ್ಯ ತಂತ್ರಜ್ಞಾನದ ಯುಗ ಇದೆ. ತಂತ್ರಜ್ಞಾನ ಬಲ್ಲವರಿಗೆ ಎಲ್ಲೆಡೆ ಬೇಡಿಕೆ ಇದೆ. ಹೀಗಾಗಿ ಎ.ಐ. ತಂತ್ರಜ್ಞಾನ, ಡಿಜಿಟಲ್ ತಂತ್ರಜ್ಞಾನ ಸೇರಿದಂತೆ ವಿವಿಧ ತಂತ್ರಜ್ಞಾನಗಳನ್ನು ಅರಿಯಬೇಕು ಎಂದು ತಿಳಿಸಿದರು. ವ್ಯಕ್ತಿತ್ವ ನಿರ್ಮಾಣದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಪಾತ್ರದ ಕುರಿತು ನಿವೃತ್ತ ಪ್ರಾಚಾರ್ಯರಾದ ಮಧುಕರ ದೇಶಪಾಂಡೆ, ಗಂಗಾಧರ ಕೋರಿ ಮಾತನಾಡಿದರು. ಎನ್‌ಎನ್‌ಎಸ್ ಸಂಯೋಜಕ ಡಾ. ಪೃಥ್ವಿರಾಜ ಹಾಲಪ್ಪಗೋಳ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಮೋಜಿನ ಜಾತ್ರೆ ಹಾಗೂ ಜಾನಪದ ಉತ್ಸವ ನಿಮಿತ್ತ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಕಾಲೇಜಿನ ಪ್ರಾಚಾರ್ಯ ಪ್ರೊ. ಧನರಾಜ ಬಿರಾದಾರ ಅಧ್ಯಕ್ಷತೆ ವಹಿಸಿದ್ದರು. ಎಪಿಎಂಸಿ ಮಾಜಿ ಅಧ್ಯಕ್ಷ ಅನಿಲ್ ಪನ್ನಾಳೆ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕಾಶಿಬಾಯಿ ಬಕ್ಕಪ್ಪ, ಪ್ರಮುಖರಾದ ಮಲ್ಲಿಕಾರ್ಜುನ, ವಿಜಯಕುಮಾರ, ಅಬ್ದುಲ್ ಎಸ್, ಡಾ. ರಾಜಕುಮಾರ ಟಿ, ಡಾ. ಜಯಶೀಲಾ, ಶಿವಕುಮಾರ ಬಿರಾದಾರ, ಸುರೇಂದ್ರಸಿಂಗ್, ದಶವಂತ ಬಂಡೆ, ಡಾ. ಶಾಜಿಯಾ ಅಂಜುಮ್, ಮಮತಾ ಮತ್ತಿತರರು ಇದ್ದರು.

ಸವಿತಾ ಪಾಟೀಲ ನಿರೂಪಿಸಿದರು.

# ರಸ್ತೆ ಡಿವೈಡರ್, ಕಳಪೆ ಕಾಮಗಾರಿ ಮಾಡಿ ಹಗಲು ದರೋಡೆಗೆ ಯತ್ನ: ಮಹಾಂತೇಶ್ ಜಮಾದಾರ್

ಮಲ್ಲಮ್ಮ ನುಡಿ ವಾರ್ತೆ

ಅಫಜಲಪೂರ:ಮೇ.22: ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಅಂದಾಜು 8 ಲಕ್ಷ 80 ಸಾವಿರ ರೂಪಾಯಿ ವೆಚ್ಚದಲ್ಲಿ ನಡೆಯುತ್ತಿರುವ ರಸ್ತೆ ಡಿವೈಡರ ಕಾಮಗಾರಿ ಸಂಪೂರ್ಣವಾಗಿ ಅವೈಜ್ಞಾನಿಕವಾಗಿದ್ದು ಮಾನ್ಯ ಶಾಸಕರು ಇತ್ತ ಕಡೆ ಗಮನ ಹರಿಸಿ ಗುಣಮಟ್ಟದ ರಸ್ತೆ ಡಿವೈಡರ್ ನಿರ್ಮಿಸಬೇಕು ಎಂದು ರಾಜ್ಯ ರೈತ ಸಂಘ ಹಸಿರು ಸೇನೆಯ ಕಲಬುರಗಿ ಕಲಬುರಗಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹಾಂತೇಶ್ ಜಮಾದಾರ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಅವರು, 3 ಕೋಟಿ ರೂಪಾಯಿ ವೆಚ್ಚದಲ್ಲಿ ರಸ್ತೆ ಅಗಲೀಕರಣ ಹಾಗೂ ಚರಂಡಿ ದುರಸ್ಥಿ ಹಾಗೂ ರಸ್ತೆಯ ಮದ್ಯದಲ್ಲಿ ಡಿವೈಡರ ಸೇರಿದಂತೆ ಅನೇಕ ಕಾಮಗಾರಿಗಳು ಮಾನ್ಯ ಶಾಸಕರು ಕೈಗೊಂಡಿದ್ದಾರೆ ಆದರೆ ಆ ಎಲ್ಲ ಕಾಮಗಾರಿಗಳು ವೈಜ್ಞಾನಿಕವಾಗಿ ಎಷ್ಟರ ಮಟ್ಟಿಗೆ ನಡೆಯುತ್ತಿದೆ ಎಂಬುದು ಮಾನ್ಯ



ಶಾಸಕರು ಒಂದು ಬಾರಿಯೂ ಗಮನ ಹರಿಸಿಲ್ಲ, ಡಿವೈಡರ ಕಾಮಗಾರಿ ಕಳಪೆ ಮಟ್ಟದಲ್ಲಿ ಮಾಡುತ್ತಿರುವದರಿಂದ ಜನರು ಚೀ,ಥು,ಎಂದು ಕ್ಯಾಕರಿಸಿ ಉಗಿಯುತ್ತಿದ್ದಾರೆ,ಗುತ್ತಿಗೆದಾರರು ಹಗಲು ದರೋಡೆ ಮಾಡುತ್ತಿದ್ದಾರೆ ಎಂದರು.ಅಷ್ಟೇ ಅಲ್ಲದೆ ಪುರಸಭೆಯ ಅಧ್ಯಕ್ಷರು ಹಾಗೂ ಅಧಿಕಾರಿಗಳು ಕಣ್ಮುಚ್ಚಿ ಕುಳಿತಿರುವದು ಎಷ್ಟರ ಮಟ್ಟಿಗೆ ಸರಿ..?ಮಾನ್ಯ ಶಾಸಕರು ಆತ್ಮಸಾಕ್ಷಿಗೆ ಅನುಗುಣವಾಗಿಯಾದರು ಉತ್ತಮ ಕಾಮಗಾರಿ ಮಾಡಬೇಕು.ರಸ್ತೆಯ ಮಧ್ಯದಲ್ಲಿ ನಿರ್ಮಾಣವಾಗುತ್ತಿರುವ ಡಿವೈಡರ್ ಕಾಮಗಾರಿ ಕಾಟಾಚಾರಕ್ಕೆ ನಿರ್ಮಾಣ ಮಾಡಿ ಕೈ ತೊಳೆದುಕೊಳ್ಳುವ ಯೋಜನೆಯಾಗಿದೆ, ಮಾನ್ಯ ಪುರಾಸಭೆ ಅಧಿಕಾರಿಗಳಿಗೆ ಯಾವ ರೀತಿಯಲ್ಲಿ ಉತ್ತಮ ಗುಣಮಟ್ಟದ ರಸ್ತೆ ಡಿವೈಡರ ನಿರ್ಮಿಸಬೇಕು ಎಂಬುವ ಕನಿಷ್ಠ ಜ್ಞಾನವು ಇಲ್ಲಾ, ಮಾನ್ಯ ಶಾಸಕರಿಗೆ ನಾವು ಕೇಳಿಕೊಳ್ಳುವದಿಷ್ಟೇ ತಾಲೂಕಿನಲ್ಲಿ ಸಂಪೂರ್ಣ ಗುಣಮಟ್ಟದ ರಸ್ತೆ ಡಿವೈಡರ್ ನಿರ್ಮಿಸಿ, ಇಲ್ಲವಾದರೆ ತಾಲೂಕು ರಾಜ್ಯ ರೈತ ಸಂಘ ಹಸಿರು ಸೇನೆಯಿಂದ ಕಳಪೆ ಮಟ್ಟದ ಡಿವೈಡರನ್ನು ಜೇಸಿಬಿ ಯಂತ್ರದಿಂದ ತೆರವುಗೊಳಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

# ಸಿಡಿಲು ಬಡಿದು ಮೃತ ರೈತನ ಕುಟುಂಬಸ್ಥರಿಗೆ : ನಿತಿನ್ ಗುತ್ತೇದಾರ್ ಸಾಂತ್ವನ

ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಮೇ.22:ತಾಲೂಕಿನ ಕರ್ಜಗಿ ಗ್ರಾಮದಲ್ಲಿ ಸಿಡಿಲಿಗೆ ರೈತ ಬಲಿಯಾಗಿದ್ದು, ಸರ್ಕಾರ ಮೃತ ರೈತನ ಕುಟುಂ ಬಕ್ಕೆ ಹೆಚ್ಚಿನ ಪರಿಹಾರ ನೀಡಲಿ ಎಂದು ಮಾಜಿ ಜಿ.ಪಂ ಅಧ್ಯಕ್ಷ, ಬಿಜೆಪಿ ಮುಖಂಡ ನಿತೀನ್ ಗುತ್ತೇದಾರ ಮನವಿ ಮಾಡಿದ್ದಾರೆ.ಬುಧವಾರದಂದು ಕರ್ಜಗಿ ಗ್ರಾಮದಲ್ಲಿನ ಮೃತ ರೈತ ನಬಿಲಾಲ್ ಚೌಧರಿ ಅವರ ನಿವಾಸಕ್ಕೆ ಭೇಟಿ ನೀಡಿ



ಕುಟುಂಬಸ್ಥರಿಗೆ ಸಾಂತ್ವನ ಹೇಳಿ ಮಾತನಾಡಿದ ಅವರು, ರೈತ ನಬಿಲಾಲ್ ಕುಟುಂಬಕ್ಕೆ ಆಸರೆಯಾಗಿ ದ್ದರು, ಅವರ ಅಕಾಲಿಕ ಅಗಲಿಕೆಯಿಂದ ಕುಟುಂಬಕ್ಕೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ಹೀಗಾಗಿ ಸರ್ಕಾರ ಮೃತ ರೈತನ ಕುಟುಂಬಕ್ಕೆ ಪರಿಹಾರ ನೀಡಬೇಕು, ಸಾಲ ಮನ್ನಾ ಮಾಡಬೇಕು ಎಂದರು. ಈ ಸಂದರ್ಭದಲ್ಲಿ ರಾಜಕು ಮಾರ ಜಿಡಗಿ, ಗ್ರಾಮದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಪ್ರಧಾನಿ ಮೋದಿ ಮೌನ ಪ್ರಶ್ನಿಸಿದ ಕಾಂಗ್ರೆಸ್



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ, ಮೇ 22 (ಪಿಟಿಐ)– ಭಾರತ ಮತ್ತು ಪಾಕಿಸ್ತಾನ ನಡುವಿನ ಇತ್ತೀಚಿನ ಸಂಘರ್ಷವನ್ನು ವ್ಯಾಪಾರದ ಮೂಲಕ ಬಗೆಹರಿಸಿಕೊಂಡಿದ್ದೇನೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳುತ್ತಿರುವುದನ್ನು ಕಾಂಗ್ರೆಸ್ ಪುನರಾವರ್ತಿಸಿದೆ. ಪ್ರಧಾನಿ ನರೇಂದ್ರ ಮೋದಿ ಒಮ್ಮೆಯೂ ಈ ಹೇಳಿಕೆಯನ್ನು ತಿರಸ್ಕರಿಸಿಲ್ಲ ಮತ್ತು ಈ ಮೌನದ ಅರ್ಥವೇನು ಎಂದು ಪ್ರಶ್ನಿಸಿದೆ.

ಆಪರೇಷನ್ ಸಿಂಧೂರ್ ಅನ್ನು ನಿಲ್ಲಿಸಲಾಗಿದೆ ಎಂದು ಅಧ್ಯಕ್ಷ ಟ್ರಂಪ್ ಹೇಳಿಕೊಂಡಿರುವುದು ಇದು ಎಂಟನೇ ಬಾರಿ ಎಂದು ಕಾಂಗ್ರೆಸ್ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಮುಖ್ಯಸ್ಥ ಪವನ್ ಖೇರಾ ಹೇಳಿದ್ದಾರೆ. ಆಪರೇಷನ್ ಸಿಂಧೂರ್ ಅನ್ನು ಕೊನೆಗೊಳಿಸಲು ಭಾರತವನ್ನು ಒತ್ತಾಯಿಸಲು ವ್ಯಾಪಾರವನ್ನು ಬಳಸಿದ್ದೇನೆ ಎಂದು ಅವರು ಹೇಳಿಕೊಳ್ಳುತ್ತಾರೆ. ಪ್ರಧಾನಿ ಮೋದಿ ಈ ಹೇಳಿಕೆಯನ್ನು ಒಮ್ಮೆಯೂ ತಿರಸ್ಕರಿಸಿಲ್ಲ. ಈ ಮೌನದ ಅರ್ಥವೇನು? ಎಂದು ಖೇರಾ ಎಕ್ಸ್ ನಲ್ಲಿ ಪೋಸ್ಟ್‌ನಲ್ಲಿ ಹೇಳಿದ್ದಾರೆ.

ದಕ್ಷಿಣ ಆಫ್ರಿಕಾದ ಭೇಟಿ ನೀಡಿದ ಅಧ್ಯಕ್ಷ ಸಿರಿಲ್ ರಾಮಾಫೋಸಾ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ ಓವಲ್ ಕಚೇರಿಯಲ್ಲಿ ತಮ್ಮ ಹೇಳಿಕೆಗಳಲ್ಲಿ ಟ್ರಂಪ್, ನಾವು ಪಾಕಿಸ್ತಾನ ಮತ್ತು ಭಾರತದೊಂದಿಗೆ ಏನು ಮಾಡಿದ್ದೇವೆ ಎಂದು ನೋಡಿದರೆ ನಾವು ಅದನ್ನು ಸಂಪೂರ್ಣವಾಗಿ ಇತ್ಯರ್ಥಪಡಿಸಿದ್ದೇವೆ ಮತ್ತು ನಾನು ಅದನ್ನು ವ್ಯಾಪಾರದ ಮೂಲಕ ಇತ್ಯರ್ಥಪಡಿಸಿದೆ ಎಂದು ನಾನು ಭಾವಿಸುತ್ತೇನೆ ಎಂದು ಹೇಳಿದರು.

ಪಾಕಿಸ್ತಾನವು ಕೆಲವು ಅತ್ಯುತ್ತಮ ಜನರನ್ನು ಮತ್ತು ಕೆಲವು ನಿಜವಾಗಿಯೂ ಒಳ್ಳೆಯ, ಮಹಾನ್ ನಾಯಕರನ್ನು ಹೊಂದಿದೆ. ಮತ್ತು ಭಾರತವು ನನ್ನ ಸ್ನೇಹಿತ ಮೋದಿ ಎಂದು ಟ್ರಂಪ್ ಹೇಳಿದರು, ಇದಕ್ಕೆ ದಕ್ಷಿಣ ಆಫ್ರಿಕಾದ ಅಧ್ಯಕ್ಷರು, ಮೋದಿ, ಪರಸ್ಪರ ಸ್ನೇಹಿತ ಎಂದು ಉತ್ತರಿಸಿದರು.

ಅವರು ಒಬ್ಬ ಒಳ್ಳೆಯ ವ್ಯಕ್ತಿ ಮತ್ತು ನಾನು ಅವರಿಬ್ಬರನ್ನೂ ಕರೆದಿದ್ದೇನೆ. ಇದು ಒಳ್ಳೆಯದು, ಎಂದು ಟ್ರಂಪ್ ಹೇಳಿದರು. ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆಯನ್ನು ಪರಿಹರಿಸಲು ತಾವು ಸಹಾಯ ಮಾಡಿರುವುದಾಗಿ ಅಮೆರಿಕ ಅಧ್ಯಕ್ಷರು ಪದೇ ಪದೇ ಹೇಳಿಕೊಳ್ಳುತ್ತಿದ್ದಾರೆ.

ಏಪ್ರಿಲ್ 22 ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ ಘಟನೆಗೆ ಪ್ರತಿಕ್ರಿಯೆಯಾಗಿ ಭಾರತ ಮೇ 7 ರ ಆರಂಭದಲ್ಲಿ ಭಯೋತ್ಪಾದಕ ಮೂಲಸೌಕರ್ಯಗಳ ಮೇಲೆ ಆಪರೇಷನ್ ಸಿಂಧೂರ್ ಅಡಿಯಲ್ಲಿ ನಿಖರವಾದ ದಾಳಿಗಳನ್ನು ನಡೆಸಿತು. ಭಾರತದ ಕಾರ್ಯಾಚರಣೆಯ ನಂತರ, ಪಾಕಿಸ್ತಾನವು ಮೇ 8, 9 ಮತ್ತು 10 ರಂದು ಭಾರತೀಯ ಸೇನಾ ನೆಲೆಗಳ ಮೇಲೆ ಉಗ್ರ ಪ್ರತಿದಾಳಿ ನಡೆಸಿತು. ನಾಲ್ಕು ದಿನಗಳ ತೀವ್ರ ಗಡಿಯಾಚೆಗಿನ ಡ್ರೋನ್ ಮತ್ತು ಕ್ಷಿಪಣಿ ದಾಳಿಯ ನಂತರ ಮಿಲಿಟರಿ ಮುಖಾಮುಖಿಯನ್ನು ಕೊನೆಗೊಳಿಸಲು ಭಾರತ ಮತ್ತು ಪಾಕಿಸ್ತಾನ ಮೇ 10 ರಂದು ಒಪ್ಪಂದಕ್ಕೆ ಬಂದವು.

ಮೇ 10 ರಂದು, ವಾಷಿಂಗ್ಟನ್ ಮಧ್ಯಸ್ಥಿಕೆಯಲ್ಲಿ ದೀರ್ಘ ರಾತ್ರಿಯ ಮಾತುಕತೆಯ ನಂತರ ಭಾರತ ಮತ್ತು ಪಾಕಿಸ್ತಾನ ಪೂರ್ಣ ಮತ್ತು ತಕ್ಷಣದ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಟ್ರಂಪ್ ಘೋಷಿಸಿದರು.

# ಸಿಂಧೂರ ಅಳಿಸಿದವರನ್ನು ಮಣ್ಣಲ್ಲಿ ಮುಚ್ಚಿದ್ದೇವೆ : ಪ್ರಧಾನಿ ಮೋದಿ



ಮಲ್ಲಮ್ಮ ನುಡಿ ವಾರ್ತೆ

ಬಿಕನೇರ್, ಮೇ22– ಜಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ನರಮೇಧಕ್ಕೆ ಪ್ರತೀಕಾರವಾಗಿ ಭಾರತೀಯ ಸೇನಾ ಪಡೆ ನಡೆಸಿದ ಆಪರೇಷನ್ ಸಿಂಧೂರ್ ಕಾರ್ಯಾಚರಣೆಯಲ್ಲಿ ಕೇವಲ 22 ನಿಮಿಷದಲ್ಲಿ ಸೇಡು ತೀರಿಸಿಕೊಂಡಿದ್ದೇವೆಣಟಜಜಜಟಜಜ ಎಂದು ಪ್ರಧಾನಿ ನರೇಂದ್ರಮೋದಿ ಕೊಂಡಾಡಿದ್ದಾರೆ.

ಪಾಕಿಸ್ತಾನ ಹಾಗೂ ಪಿಒಕೆ ಮೇಲೆ ನಡೆದ ಆಪರೇಷನ್ ಸಿಂಧೂರ್ ನಂತರ ರಾಜಸ್ಥಾನದ ಬಿಕನೇರ್‌ನಲ್ಲಿ ಮಾತನಾಡಿದ ಮೋದಿ ಅವರು, ಏ.22ರ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಭಾರತವು 22 ನಿಮಿಷದಲ್ಲೆ ಸೇಡು ತೀರಿಸಿಕೊಂಡಿದೆ. ಇದು ನಮ ಸೇನಾ ಪಡೆಯ ತಾಕತ್ತು ಎಂದು ಬಣ್ಣಿಸಿದರು.

ಏ.22ರ ದಾಳಿಗೆ ಪ್ರತಿಯಾಗಿ ನಾವು ಭಯೋತ್ಪಾದಕರ 9 ಅಡಗುತಾಣಗಳನ್ನು 22 ನಿಮಿಷದಲ್ಲಿ ನಾಶಪಡಿಸಿದೆವು. ಸಿಂಧೂರವು ಪುಡಿಯಾಗಿ ಬದಲಾದರೆ ಏನಾಗುತ್ತದೆ ಎಂಬುದಕ್ಕೆ ವಿಶ್ವಕ್ಕೆ ಮತ್ತು ನಮ ಶತ್ರುಗಳಿಗೆ ತೋರಿಸಿದ್ದೇವೆ ಎಂದು ಸೇನಾಪಡೆಯ ಕಾರ್ಯಾಚರಣೆ ಬಗ್ಗೆ ಕೊಂಡಾಡಿದರು. ನನ್ನ ರಕ್ತನಾಳಗಳಲ್ಲಿ ಕುದಿಯುತ್ತಿರುವುದು ರಕ್ತವಲ್ಲ. ಅದು ಸಿಂಧೂರ ಎಂದು ಮೋದಿ ಹೇಳುತ್ತಿದ್ದಂತೆ ಜನಸ್ತೊಮದಿಂದ ಮೋದಿ.. ಮೋದಿ.. ಎಂಬ ಜೈಕಾರದ ಘೋಷಣೆಗಳು ಮೊಳಗಿದವು. ಏ.22 ರಂದು ನಮ ಸಹೋದರಿಯರ ಧರ್ಮವನ್ನು ಕೇಳಿ ಭಯೋತ್ಪಾದಕರು ಅಮಾನುಷವಾಗಿ ಪ್ರವಾಸಿಗರನ್ನು ಕೊಂದು ಹಾಕಿದರು. ಅವರ ಹಣೆಯಲ್ಲಿದ್ದ ಸಿಂಧೂರವನ್ನು ಅಳಿಸಿ ಹಾಕಿದ್ದಕ್ಕೆ 140 ಕೋಟಿ ಭಾರತೀಯರು ಕಣ್ಣೀರು ಹಾಕಿದರು. ನಾವು ಅದೇ ಸಿಂಧೂರದ ಮೂಲಕವೇ ಭಯೋತ್ಪಾದಕರಿಗೆ ಮುಟ್ಟಿ ನೋಡಿಕೊಳ್ಳುವಂತೆ ಮಾಡಿದ್ದೇವೆ. ಭಾರತದ ತಂಟೆಗೆ ಬರುವ ಮುನ್ನ ನೂರು ಬಾರಿ ಯೋಚಿಸಿ ಎಂದು ಪಾಕ್‌ಗೆ ಎಚ್ಚರಿಕೆ ಕೊಟ್ಟರು.

ವಾಯುಸೇನೆ, ನೌಕಾಸೇನೆ ಮತ್ತು ಭೂಸೇನೆಗಳಿಗೆ ನಾವು ಮುಕ್ತ ಸ್ವಾತಂತ್ರ್ಯ ನೀಡಿದ್ದೇವೆ. ಸಿಂಧೂರವನ್ನು ಅಳಿಸಿ ಹಾಕಿದ ಪಾತಕಿಗಳನ್ನು ನೆಲದಲ್ಲೆ ಹೂತುಹಾಕಿ ಎಂದು ಹೇಳಿದ್ದೆವು. ಅದರಂತೆ ಸಶಸ್ತ್ರ ಪಡೆಗಳು ಅದೇ ಕೆಲಸವನ್ನು ಮಾಡಿವೆ ಎಂದು ಪ್ರಸಂಶಿಸಿದರು.

ಸಿಂಧೂರವನ್ನು ಅಳಿಸಲು ಹೊರಟವರಿಗೆ ಸೇನಾಪಡೆ ತಕ್ಕ ಶಾಸ್ತಿ ಮಾಡಿದೆ. ಭಾರತದಲ್ಲಿ ರಕ್ತ ಚೆಲ್ಲುವವರ ಆಟ ಮುಗಿದಿದೆ. ಭಾರತವು ನಮ ಆಟವನ್ನು ನೋಡಿ ಮೌನವಾಗಿರುತ್ತದೆ ಎಂದುಕೊಂಡವರಿಗೆ ಮುಟ್ಟಿ ನೋಡಿಕೊಳ್ಳುವ ಹಾಗೆ ಪಾಠ ಕಲಿಸಿದ್ದೇವೆ. ಇದು ನಮ ಸೇನಾಪಡೆಯ ತಾಕತ್ತು. ಇಡೀ ವಿಶ್ವವೇ ಆಪರೇಷನ್ ಸಿಂಧೂರವನ್ನು ಕೊಂಡಾಡುತ್ತಿದೆ ಎಂದರು.

ಭಾರತವು ಎಲ್ಲದಕ್ಕೂ ಮೌನವಾಗಿರುತ್ತದೆ ಎಂದವರಿಗೆ ಉತ್ತರ ಕೊಟ್ಟಿದ್ದೇವೆ. ತಮ ಶಸಾಶಸ್ತ್ರ ಬಗ್ಗೆಯ ಹೆಮೆ ಪಡೆದುತ್ತಿದ್ದವರು ಇಂದು ಅದರ ಅವಶೇಷಗಳಲ್ಲೆ ಹೂತುಹೋಗಿದ್ದಾರೆ. ಜನದಲ್ಲೂ ಅವರು ನಮ ಕಡೆ ಬರಲು ಹಲವು ಬಾರಿ ಯೋಚಿಸುವಂತಾಗಿದೆ.

ನಾವು ಯಾವುದೇ ರಾಷ್ಟದ ಪರಮಾಣುಗಳಿಗೆ ಹೆದರುವುದಿಲ್ಲ. ಹಾಗಂತ ಪರಿಸ್ಥಿತಿ ಕೈ ಮೀರಿದರೆ ಸುಮನೆ ಕೂರುವುದಿಲ್ಲ. ಕ್ರಿಯೆಗೆ ಪ್ರತಿಕ್ರಿಯೆ ಇರುತ್ತದೆ ಎಂದು ಮೋದಿಯವರು ಪರೋಕ್ಷವಾಗಿ ಶತ್ರು ರಾಷ್ಟಕ್ಕೆ ಎಚ್ಚರಿಕೆ ಕೊಟ್ಟರು.

ರೈಲ್ವೆ ಟಿಕೆಟ್ ಇಲ್ಲವೆಂದು ಮೃತರ ಪರಿಹಾರ ನಿರಾಕರಣೆ

# ಒಪ್ಪಲಾಗದು; 8 ಲಕ್ಷ ರೂ. ನೀಡಲು



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ರೈಲ್ವೆ ಅಪಘಾತ ಪ್ರಕರಣದಲ್ಲಿ ಮೃತಪಟ್ಟ ವ್ಯಕ್ತಿಯ ಜೇಬಿನಲ್ಲಿ ರೈಲ್ವೆ ಟಿಕೆಟ್ ದೊರಕಲಿಲ್ಲವೆಂಬ ಕಾರಣಕ್ಕೆ ಆತನ ಸಂಬಂಧಿಗಳಿಗೆ ಪರಿಹಾರ ನೀಡುವಂತಿಲ್ಲ ಎಂಬ ವಾದ ತಳ್ಳಿ ಹಾಕಿರುವ ಹೈಕೋರ್ಟ್, ಪತ್ನಿ ಹಾಗೂ ಮಕ್ಕಳಿಗೆ 8 ಲಕ್ಷ ರೂ. ಪರಿಹಾರಕ್ಕೆ ಆದೇಶಿಸಿದೆ.

ಹತ್ತು ವರ್ಷಗಳ ಹಿಂದೆ ಆಕಸ್ಮಿಕವಾಗಿ ಚಲಿಸುವ ರೈಲಿನಿಂದ ಬಿದ್ದು ಮೃತಪಟ್ಟಿದ್ದ ವಿಜಯಪುರದ ಅಮಿನಾಸಾಬ್ ಮುಲ್ಲಾ ಅವರ ಪತ್ನಿ ಹಾಗೂ ಮಕ್ಕಳಿಗೆ ಪರಿಹಾರ ನೀಡುವಂತೆ ನ್ಯಾ. ಹಂಚಾಟೆ ಸಂಜೀವ್ ಕುಮಾರ್ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ. ದಾಖಲೆಗಳನ್ನು ಹಾಗೂ ರೈಲ್ವೆ ಕ್ಲೆಮ್ ಟ್ರಿಬ್ಯುನಲ್ ಆದೇಶ ಪರಿಶೀಲಿಸಿದ ನ್ಯಾಯಪೀಠ, " 2015ರ ಏಪ್ರಿಲ್ 6 ರಂದು ವಿಜಯಪುರ ಮತ್ತು ಮಿಂಚಿನಹಾಳ ರೈಲು ನಿಲ್ದಾಣಗಳ ಮಧ್ಯೆ ರೈಲ್ವೆ ಟ್ರ್ಯಾಕ್‌ನಲ್ಲಿ ಒಬ್ಬ ಪುರುಷನ ಮೃತದೇಹ ಪತ್ತೆಯಾಗಿದೆ ಎಂದು ರೈಲ್ವೆ ಲೋಕೊ ಪೈಲಟ್ ವಾಕಿಟಾಕಿ ಮೂಲಕ ಸಂದೇಶ ನೀಡಿದ್ದರು ಮತ್ತು ಆ ಸಂಬಂಧ ಎಫ್‌ಐಆರ್ ಕೂಡ ದಾಖಲಾಗಿತ್ತು. ಅಲ್ಲದೆ, ಮರಣೋತ್ತರ ಪರೀಕ್ಷಾ ವರದಿಯಲ್ಲಿ ಶಾಕ್‌ನಿಂದ ಹಲವು ಅಂಗಗಳಿಗೆ ಗಾಯಗಳಾಗಿ ಸಾವನ್ನಪ್ಪಿರುವುದಾಗಿ ಹೇಳಲಾಗಿದೆ. ಎಲ್ಲಾ ದಾಖಲೆಗಳು ಮೃತನು ರೈಲ್ವೆ ಅಪಘಾತದಲ್ಲೆ ಸಾವನ್ನಪ್ಪಿರುವುದಾಗಿ ಖಚಿತಪಡಿಸುತ್ತವೆ " ಎಂದು ಹೇಳಿದೆ. 'ಬಹುಶಃ ಮರಣೋತ್ತರ ಪರೀಕ್ಷೆ ಸಂದರ್ಭದಲ್ಲಿ ಟಿಕೆಟ್ ಕಳೆದು ಹೋಗಿರಬಹುದು. ಆದರೆ, ಟಿಕೆಟ್ ಜೇಬಿನಲ್ಲಿ ಇರಲಿಲ್ಲ ಎಂಬ ಕಾರಣಕ್ಕೆ ನ್ಯಾಯಮಂಡಳಿ ಪರಿಹಾರಕ್ಕೆ ಅರ್ಹನಲ್ಲವೆಂದು ಹೇಳುವಂತಿಲ್ಲ. ಸಹಜವಾಗಿ ಮೃತನ ಕುಟುಂಬದವರು ಆಘಾತಕ್ಕೆ ಒಳಗಾಗಿದ್ದರಿಂದ ಆ ಸಂದರ್ಭದಲ್ಲಿ ಅವರು ಟಿಕೆಟ್ ಬಗ್ಗೆ ಆಲೋಚಿಸಿ ಅದನ್ನು ಸಂಗ್ರಹಿಸಿಟ್ಟುಕೊಂಡು ಅದನ್ನು ನಂತರ ಸಲ್ಲಿಸದೇ ಇರಬಹುದು. ಹಾಗೆಂದ ಮಾತ್ರಕ್ಕೆ ಮೃತನ ಕುಟುಂಬ ಪರಿಹಾರಕ್ಕೆ ಅರ್ಹವಲ್ಲವೆಂದು ಹೇಳಲಾಗದು" ಎಂದು ನ್ಯಾಯಾಲಯ ಆದೇಶ ನೀಡಿದೆ.

ಅಮಿನಾಸಾಬ್ ಮುಲ್ಲಾ 2015ರ ಏಪ್ರಿಲ್ 6 ರಂದು ವಿಜಯಪುರ ರೈಲು ನಿಲ್ದಾಣದಲ್ಲಿ ಮಹಾರಾಷ್ಟ್ರದ ಲಿಂಬಾಲಾಗೆ ತೆರಳಲು ಟಿಕೆಟ್ ಖರೀದಿಸಿ ಅಲ್ಲಿಯೇ ರೈಲನ್ನೇರಿದ್ದರು. ಆದರೆ ಚಲಿಸುವ ರೈಲಿನಲ್ಲಿ ಅವರು ಆಕಸ್ಮಿಕವಾಗಿ ಬಿದ್ದು ಸ್ಥಳದಲ್ಲಿಯೇ ಸಾವನ್ನಪ್ಪಿದ್ದರು.

ಆ ಘಟನೆ ಹಿನ್ನೆಲೆಯಲ್ಲಿ ಮೃತರ ಕುಟುಂಬ ಪರಿಹಾರ ನೀಡುವಂತೆ ರೈಲ್ವೆ ಕ್ಲೆಮ್ ಟ್ರಿಬ್ಯುನಲ್ ಮೊರೆಹೋಗಿದ್ದರು. ಆದರೆ, ನ್ಯಾಯಮಂಡಳಿ ಅಪಘಾತದಲ್ಲಿ ಅಮಿನಾಸಾಬ್ ಸಾವನ್ನಪ್ಪಿರುವ ಬಗ್ಗೆ ಯಾವುದೇ ಮಾಹಿತಿ ರೈಲ್ವೆ ಇಲಾಖೆಗೆ ನೀಡಿಲ್ಲ ಮತ್ತು ಸಾವನ್ನಪ್ಪಿರುವ ಪ್ರಯಾಣಿಕರ ಜೇಬಿನಲ್ಲಿ ಟಿಕೆಟ್ ದೊರೆತಿಲ್ಲ. ಹಾಗಾಗಿ, ಪರಿಹಾರ ನೀಡಲು ಸಾಧ್ಯವಿಲ್ಲ ಎಂದು ನಿರಾಕರಿಸಿತ್ತು. ಹಾಗಾಗಿ, ಮೃತನ ಪತ್ನಿ ಹಾಗೂ ಮಕ್ಕಳು ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದರು.

# ಚಿತ್ತಾಪುರ: ವಿವಿಧ ಐಟಿಐ ವೃತ್ತಿಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.22–ಚಿತ್ತಾಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಆಗಸ್ಟ್–2024ನೇ ಸಾಲಿನ ಐ.ಟಿ.ಐ. ವಿವಿಧ ವೃತ್ತಿಗಳಿಗೆ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು, ಎಸ್.ಎಸ್.ಎಲ್.ಸಿ. ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಚಿತ್ತಾಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಸಿ.ಟಿ.ಎಸ್. ಅಡಿಯಲ್ಲಿ ಎಲೆಕ್ಟ್ರಿಶಿಯನ್ ಮತ್ತು ಫಿಟ್ಟರ್ ಹಾಗೂ ಟಾಟಾ ಯೋಜನೆಯಡಿ ಸಿ.ಎನ್.ಸಿ. ಮಶಿನಿಂಗ್ ಟೆಕ್ನಿಶಿಯನ್, ವರ್ಚುಯಲ್ ಅನಾಲೈಸಿಸ್ ಆಂಡ್ ಡಿಸೈನರ್, ಮೆಕ್ಯಾನಿಕ್ ಎಲೆಕ್ಟ್ರಿಕ್ ವಹಿಕಲ್, ಇಂಡಸ್ಟ್ರೀಯಲ್ ರೋಬೋಟೈಸ್ ಆಂಡ್ ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್, ಮ್ಯಾನುಫ್ಯಾಕ್ಚರಿಂಗ್ ಪ್ರೊಸೆಸ್ ಕಂಟ್ರೋಲ್ ಆಂಡ್ ಅಟೋಮೇಶನ್ ಟೆಕ್ನಿಶಿಯನ್ ಹಾಗೂ ಇಂಜನಿಯರಿಂಗ್ ಡಿಸೈನ್ ಟೆಕ್ನಿಶಿಯನ್ ವೃತ್ತಿಗಳಿಗೆ ಪ್ರವೇಶ ಪಡೆಯಬಹುದಾಗಿದೆ.

ಅರ್ಹ ಅಭ್ಯರ್ಥಿಗಳು www. cite.karnataka.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಮೇ 25ರೊಳಗಾಗಿ ಅರ್ಜಿ ಸಲ್ಲಿಸಬೇಕು ಅಥವಾ ಸಂಸ್ಥೆಗೆ ಕಚೇರಿ ವೇಳೆಯಲ್ಲಿ ಖುದ್ದಾಗಿ ಭೇಟಿ ನೀಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಚಿತ್ತಾಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಹಾಗೂ ಮೊಬೈಲ್ ಸಂಖ್ಯೆ 7899543288, 9036235666, 9483089777 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಯಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.22.–ಸಮಾಜ ಕಲ್ಯಾಣ ಇಲಾಖೆಯಿಂದ ಕಲಬುರಗಿ ತಾಲ್ಲೂಕಿನ ಅಧೀನದಲ್ಲಿ ನಡೆಯುತ್ತಿರುವ 2025–26ನೇ ಸಾಲಿಗೆ ಕಲಬುರಗಿ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಯಲ್ಲಿ ಖಾಲಿ ಇರುವ ಸ್ಥಾನಗಳಿಗೆ ಪ್ರವೇಶ ಪಡೆಯಲು ಅರ್ಹ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್–1) ಅವರು ತಿಳಿಸಿದ್ದಾರೆ.

ಈ ವಸತಿ ಶಾಲೆಯಲ್ಲಿ 1 ರಿಂದ 5ನೇ ತರಗತಿಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಹಾಗೂ ಕಲಬುರಗಿ ಸಂತ್ರಾಸವಾಡಿಯ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಯಿಂದ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ 2025ರ ಮೇ 31 ರೊಳಗಾಗಿ ವಸತಿ ಶಾಲೆಯಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಸಂತ್ರಾಸವಾಡಿಯಲ್ಲಿನ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರವ ವಸತಿ ಶಾಲೆಯ ಮುಖ್ಯ ಗುರುಗಳನ್ನು ಹಾಗೂ ಮೊಬೈಲ್ ಸಂಖ್ಯೆ 9538038289 ಗೆ ಸಂಪರ್ಕಿಸಲು ಕೋರಲಾಗಿದೆ.

# ಅರ್ಜುಣಗಿ: ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.22– ಅಫಜಲಪುರ ತಾಲೂಕಿನ ಅರ್ಜುಣಗಿ ಮೊರಾರ್ಜಿ ದೇಸಾಯಿ ಮಾದರಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ಖಾಲಿಯಿರುವ ಈ ಕೆಳಕಂಡ ವಿಷಯಗಳ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಅರ್ಜುಣಗಿ ಮೊರಾರ್ಜಿ ದೇಸಾಯಿ ಮಾದರಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರು ತಿಳಿಸಿದ್ದಾರೆ.

ಕನ್ನಡ ಮತ್ತು ಆಂಗ್ಲ ಭಾಷಾ ವಿಷಯಗಳ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅಭ್ಯರ್ಥಿಗಳು ಎಂ.ಎ., ಬಿ.ಇಡ್. ವಿದ್ಯಾರ್ಹತೆ ಹೊಂದಿರಬೇಕು. ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ ಹಾಗೂ ಜೀವಶಾಸ್ತ್ರ ವಿಷಯಗಳ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಎಮ್.ಎಸ್ಸಿ., ಬಿ.ಇಡ್. ವಿದ್ಯಾರ್ಹತೆ ಹೊಂದಿರಬೇಕು. ಕಡ್ಡಾಯವಾಗಿ ಟಿ.ಇ.ಟಿ. ಉತ್ತೀರ್ಣರಾಗಿರಬೇಕು. ತಾವು ಬೋಧಿಸುವ ವಿಷಯದಲ್ಲಿ ಸ್ನಾತ–ಕೋತ್ತರ ಪದವೀಧರರಾಗಿರಬೇಕು. ಅರ್ಜಿ ಸಲ್ಲಿಸಲು 2025ರ ಮೇ 30 ಕೊನೆಯ ದಿನವಾಗಿದೆ.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಅರ್ಜುಣಗಿ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರ ಮೊಬೈಲ್ ಸಂಖ್ಯೆ 9449906618 ಗೆ ಸಂಪರ್ಕಿಸಲು ಕೋರಲಾಗಿದೆ.

# ಬೆಂಗಳೂರು–ಬೀದರ್ ವಿಶೇಷ ರೈಲು ಕಲಬುರಗಿ ಮತ್ತು ಶಹಾಬಾದ್ ರೈಲು ನಿಲ್ದಾಣಗಳಲ್ಲಿ ನಿಲುಗಡೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.22–ಕೇಂದ್ರ ರೈಲ್ವೆ ಸೋಲಾಪುರ ವಿಭಾಗದಿಂದ ಕಲಬುರಗಿ ಮತ್ತು ಶಹಾಬಾದ್ ರೈಲ್ವೆ ನಿಲ್ದಾಣಗಳಲ್ಲಿ ಖಜಗಿಖಿ ಬೆಂಗಳೂರು–ಬೀದರ್ ವಿಶೇಷ ರೈಲನ್ನು ನಿಲುಗಡೆ ಸೌಲಭ್ಯ ಕಲ್ಪಿಸಲಾಗಿದೆ ಎಂದು ಸೋಲಾಪುರ ವಿಭಾಗದ ಕೇಂದ್ರ ರೈಲ್ವೆಯ ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಈ ವಿಶೇಷ ರೈಲು ಖಜಗಿಖಿ ಬೆಂಗಳೂರು–ಬೀದರ್ (6 ಟ್ರಿಪ್‌ಗಳು) 06589 ವಿಶೇಷ ರೈಲುಗಳು ಖಜಗಿಖಿ ಬೆಂಗಳೂರಿನಿಂದ ಮೇ 22, ಮೇ 24 ಹಾಗೂ ಮೇ 26 ರಂದು ರಾತ್ರಿ 21:15 ಕ್ಕೆ ಹೊರಟು ಮರುದಿನ ಬೆಳಿಗ್ಗೆ 10.15 ಕ್ಕೆ ಬೀದರಿಗೆ ತಲುಪಲಿವೆ. ಅದೇ 06590 ವಿಶೇಷ ರೈಲು (3 ಟ್ರಿಪ್‌ಗಳು) ಬೀದರ್‌ನಿಂದ ಮೇ 23, ಮೇ 25 ಮತ್ತು ಮೇ 27 ರಂದು ಮಧ್ಯಾಹ್ನ 12 ಗಂಟೆಗೆ ಹೊರಟು ಮರುದಿನ ಬೆಳಿಗ್ಗೆ 3 ಗಂಟೆಗೆ ಖಜಗಿಖಿ ಬೆಂಗಳೂರಿಗೆ ಆಗಮಿಸಲಿದೆ.

ಈ ವಿಶೇಷ ರೈಲು ಹುಮನಾಬಾದ್, ಕಲಬುರಗಿ, ಶಹಾಬಾದ್, ಯಾದಗಿರಿ, ಕೃಷ್ಣ, ರಾಯಚೂರು, ಮಂತ್ರಾಲಯ ರಸ್ತೆ, ಅದೋನಿ, ಗುಂತಕಲ್, ಅನಂತಪುರ, ಧರ್ಮಾವರಂ, ಹಿಂದೂಪುರ ಮತ್ತು ಯಲಹಂಕ ಮೂಲಕ ಸಂಚರಿಸಲಿದೆ.

ರೈಲು ಟಿಕೇಟ್ ಬುಕಿಂಗ್ ಮತ್ತಿತರ ಹೆಚ್ಚಿನ ಮಾಹಿತಿಯನ್ನು www.irctc.co.in ವೆಬ್‌ಸೈಟ್ ಹಾಗೂ UTS ವ್ಯವಸ್ಥೆಯ ಮೂಲಕ, ಈ ವಿಶೇಷ ರೈಲುಗಳ ಸಮಯ ಮತ್ತು ನಿಲುಗಡೆಗಳಿಗಾಗಿ ಹೆಚ್ಚಿನ ಮಾಹಿತಿಗಾಗಿ www.enquiry.indianrail.gov.in ಗೆ ಭೇಟಿ ನೀಡಿ ಅಥವಾ ಓಖಿಇಖ ಅಪ್ಲಿಕೇಶನ್ ಡೌನ್‌ಲೋಡ್ ಮಾಡಿಕೊಂಡು ಪಡೆಯಬಹುದಾಗಿದೆ ಕೇಂದ್ರ ರೈಲ್ವೆ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಸಹಾಯಧನ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.22–ಚಿತ್ತಾಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಆಗಸ್ಟ್–2024ನೇ ಸಾಲಿನ ಐ.ಟಿ.ಐ. ವಿವಿಧ ವೃತ್ತಿಗಳಿಗೆ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು, ಎಸ್.ಎಸ್.ಎಲ್.ಸಿ. ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಚಿತ್ತಾಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಸಿ.ಟಿ.ಎಸ್. ಅಡಿಯಲ್ಲಿ ಎಲೆಕ್ಟ್ರಿಶಿಯನ್ ಮತ್ತು ಫಿಟ್ಟರ್ ಹಾಗೂ ಟಾಟಾ ಯೋಜನೆಯಡಿ ಸಿ.ಎನ್.ಸಿ. ಮಶಿನಿಂಗ್ ಟೆಕ್ನಿಶಿಯನ್, ವರ್ಚುಯಲ್ ಅನಾಲೈಸಿಸ್ ಆಂಡ್ ಡಿಸೈನರ್, ಮೆಕ್ಯಾನಿಕ್ ಎಲೆಕ್ಟ್ರಿಕ್ ವಹಿಕಲ್, ಇಂಡಸ್ಟ್ರೀಯಲ್ ರೋಬೋಟೈಸ್ ಆಂಡ್ ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್, ಮ್ಯಾನುಫ್ಯಾಕ್ಚರಿಂಗ್ ಪ್ರೊಸೆಸ್ ಕಂಟ್ರೋಲ್ ಆಂಡ್ ಅಟೋಮೇಶನ್ ಟೆಕ್ನಿಶಿಯನ್ ಹಾಗೂ ಇಂಜನಿಯರಿಂಗ್ ಡಿಸೈನ್ ಟೆಕ್ನಿಶಿಯನ್ ವೃತ್ತಿಗಳಿಗೆ ಪ್ರವೇಶ ಪಡೆಯಬಹುದಾಗಿದೆ.

ಅರ್ಹ ಅಭ್ಯರ್ಥಿಗಳು ತಿತಿತಿ. cite.karnataka.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಮೇ 25ರೊಳಗಾಗಿ ಅರ್ಜಿ ಸಲ್ಲಿಸಬೇಕು ಅಥವಾ ಸಂಸ್ಥೆಗೆ ಕಚೇರಿ ವೇಳೆಯಲ್ಲಿ ಖುದ್ದಾಗಿ ಭೇಟಿ ನೀಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಚಿತ್ತಾಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಹಾಗೂ ಮೊಬೈಲ್ ಸಂಖ್ಯೆ 7899543288, 9036235666, 9483089777 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಜಿಲ್ಲೆಕಲಬುರಗಿಕ್ರೈಂ ಸುದ್ದಿಗಳುಸುದ್ದಿರಾಜ್ಯ

# ಪೋಕ್ಸೋ ಪ್ರಕರಣದ ಆರೋಪಿಗೆ ಗಲ್ಲು ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ; ಕಲಬುರಗಿ:ಏ.22–: ಅಪ್ರಾಪ್ತ ಬಾಲಕಿಯೊರ್ವಳ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಿ ಮೃತದೇಹವನ್ನು ಬಾವಿಗೆ ಎಸೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲ್ಲಿನ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ (ವಿಶೇಷ ಪೊಕ್ಸೋ) ನ್ಯಾಯಾಲಯ ಆರೋಪಿಗೆ ಸೋಮವಾರ ಗಲ್ಲು ಶಿಕ್ಷೆ ಹಾಗೂ 1 ಲಕ್ಷ ರೂ. ದಂಡ ವಿಧಿಸಿ ಆದೇಶ ಹೊರಡಿಸಿದೆ.

ಆಳಂದ ತಾಲ್ಲೂಕಿನ ದೇವಂತಗಿ ಗ್ರಾಮದ ಗುಂಡೇರಾವ ಚೋಪಡೆ (28) ಗಲ್ಲುಶಿಕ್ಷೆಗೆ ಒಳಗಾದ ಯುವಕ ಎಂದು ಗುರುತಿಸಲಾಗಿದೆ. ಆಳಂದ ತಾಲ್ಲೂಕಿನ ಗ್ರಾಮವೊಂದರ ಬಾಲಕಿ, 2023ರ ಜುಲೈ 15ರಂದು ಪುಸ್ತಕ ತರಲು ಮತ್ತೊಂದು ಗ್ರಾಮಕ್ಕೆ ನಡೆದುಕೊಂಡು ಹೋಗುತ್ತಿದ್ದ ವೇಳೆ ಅಪರಾಧಿ ಗುಂಡೇರಾವ ಬಲವಂತವಾಗಿ ಅವಳನ್ನು ಕಬ್ಬಿನ ಗದ್ದೆಗೆ ಎಳೆದೊಯ್ದು ಅತ್ಯಾಚಾರ ಎಸಗಿದ ನಂತರ ಅವಳ ಉಸಿರುಗಟ್ಟಿಸಿ ಕೊಲೆಗೈದು ಪಕ್ಕದ ಹೊಲದ ಬಾವಿಯಲ್ಲಿ ಮೃತದೇಹವನ್ನು ಹಾಕಿದ್ದನು. ಈ ಬಗ್ಗೆ ಆಳಂದ ತಾಲೂಕಿನ ನಿಂಬರ್ಗಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದ ತನಿಖಾಧಿಕಾರಿ ಭಾಸು ಚವ್ಹಾಣ ಹಾಗೂ ಸಿಬ್ಬಂದಿ,ಪ್ರಕರಣದ ತನಿಖೆ ನಡೆಸಿ ನ್ಯಾಯಾಲಯಕ್ಕೆ ಆರೋಪಿ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

# ಕಾಣೆಯಾದ ಯುವಕನ ಪತ್ತೆಗೆ ಮನವಿ

ಕಲಬುರಗಿ, ಮೇ.22–ಸೇಡಂ ತಾಲೂಕಿನ ಮೇದಕ ಗ್ರಾಮದ 31 ವರ್ಷದ ಶಂಕ್ರಪ್ಪ ತಂದೆ ಸಣ್ಣ ನರಸಪ್ಪ ಬಿಚ್ಚಾಲ್ ಇವರು ದಿನಾಂಕ: 18–02–2025 ರಂದು ಬೆಳಿಗ್ಗೆ 10.30 ಗಂ–ಟೆಗೆ ಗುಳಿಗೆ (ಮಾತ್ರೆ) ತರಲು ಕಲಬುರಗಿಗೆ ಹೋಗಿ ಬರುತ್ತೇನೆ ಎಂದು ಹೇಳಿ ಮರಳಿ ಮನೆಗೆ ಬಾರದೇ ಕಾಣೆಯಾಗಿರುತ್ತಾರೆ ಎಂದು ಕಲಬುರಗಿ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

ಈ ಕುರಿತು ಮುಧೋಳ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ. 35/2025 ಕಲಂ ರನ್ವಯ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ. ಯುವಕನು 5.8 ಅಡಿ ಎತ್ತರ ಇದ್ದು, ಈ ಯುವಕನು ಸ್ವಲ್ಪ ಮಾನಸಿಕ ಅಸ್ವಸ್ಥನಾಗಿದ್ದು, ಕೋಲು ಮುಖ, ಸಾಧಾರಣ ಗೋಧಿ ಬಣ್ಣ, ಸಾಧಾರಣ ತಳ್ಳನೆಯ ಮೈಕಟ್ಟು, ಉದ್ದು ಮೂಗು, ಅಗಲವಾದ ಹಣೆ, ಸಾಧಾರಣ ಕಪ್ಪು ಕೂದಲು ಇದ್ದು, ಕನ್ನಡ ಮತ್ತು ತೆಲಗು ಭಾಷೆಯನ್ನು ಮಾತನಾಡುತ್ತಾರೆ. ಬೂದು ಬಣ್ಣದ ಉದ್ದನೆಯ ತೋಳಿನ ಅಂಗಿ ಹಾಗೂ ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ.

ಈತನ ಸುಳಿವು ಸಿಕ್ಕಲ್ಲಿ ಕೂಡಲೇ ಮುಧೋಳ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08441–220811, ಚಿಂಚೋಳಿ ಪೊಲೀಸ್ ಉಪಾಧ್ಯಕ್ಷರ ದೂರವಾಣಿ ಸಂಖ್ಯೆ 08475–273100, ಪೊಲೀಸ್ ಇನ್ಸ್‌ಪೆಕ್ಟರ್ ಇವರ ಮೊಬೈಲ್ ಸಂಖ್ಯೆ 9480803594 ಹಾಗೂ ಕಲಬುರಗಿ ಪೊಲೀಸ್ ಕಂಟ್ರೋಲ್ ರೂಮ್ ಸಂ–ಖ್ಯೆ 9480803500 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಮುಂಬೈ–ರಾಯಚೂರು ಹಾಗೂ ರಾಯಚೂರು–ಪುಣೆ ಮಾರ್ಗಗಳಲ್ಲಿ ವಿಶೇಷ ರೈಲುಗಳ ಸಂಚಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.22.– ಕೇಂದ್ರ ರೈಲ್ವೆ ಸೋಲಾಪುರ ವಿಭಾಗದಿಂದ ಪ್ರಯಾಣಿಕರ ಬೇಡಿಕೆ ಹಾಗೂ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿವಾರಿಸಲು ಕೇಂದ್ರ ರೈಲ್ವೆಯು ಸೋಲಾಪುರ ವಿಭಾಗದಿಂದ ಎಲ್.ಟಿ.ಟಿ. ಮುಂಬೈ–ರಾಯಚೂರು ಹಾಗೂ ರಾಯಚೂರು–ಪುಣೆ ಮಾರ್ಗಗಳಲ್ಲಿ ಒನ್ ವೇ ವಿಶೇಷ ರೈಲುಗಳು ಸಂಚರಿಸಲಿವೆ. ಈ ವಿಶೇಷ ರೈಲುಗಳು ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗದ ನಿಲ್ದಾಣಗಳಲ್ಲಿ ನಿಲುಗಡೆಯಾಗಲಿವೆ.

ಎಲ್.ಟಿ.ಟಿ. (ಐಖಿಖಿ) ಮುಂಬೈ–ರಾಯಚೂರು ವಿಶೇಷ ರೈಲು (3 ಟ್ರಿಪ್‌ಗಳು). ರೈಲು ಸಂಖ್ಯೆ 01107 ವಿಶೇಷ ರೈಲು ಇದೇ ಮೇ 22 ಮತ್ತು ಮೇ 24 ರಂದು ಮಧ್ಯಾಹ್ನ 15.30ಕ್ಕೆ ಎಲ್.ಟಿ.ಟಿ. (LTT) ಮುಂಬೈನಿಂದ ಹೊರಟು ಮರುದಿನ ಬೆಳಿಗ್ಗೆ 05.30 ಕ್ಕೆ ರಾಯಚೂರು ತಲುಪಲಿದೆ. (2 ಟ್ರಿಪ್‌ಗಳು). ರೈಲು ಸಂಖ್ಯೆ 01108 ಮೇ 23 ರಂದು ಮಧ್ಯಾಹ್ನ 15:00 ಗಂಟೆಗೆ ರಾಯಚೂರಿನಿಂದ ಹೊರಟು ಮರುದಿನ ಬೆಳಿಗ್ಗೆ 4 ಗಂಟೆಗೆ ಎಲ್‌ಟಿಟಿ ಮುಂಬೈಗೆ ಆಗಮಿಸಲಿದೆ. (1 ಟ್ರಿಪ್). ಈ ರೈಲು ಥಾಣೆ, ಕಲ್ಯಾಣ, ಲೋನಾವಾಲಾ, ಪುಣೆ, ದೌಂಡ್, ಕುರ್ದುವಾಡಿ, ಸೋಲಾಪುರ, ಕಲಬುರಗಿ, ವಾಡಿ, ನಾಲವಾರ, ಯಾದಗಿರಿ ಮತ್ತು ಕೃಷ್ಣ ಮೂಲಕ ಸಂಚರಿಸಲಿದೆ.

ರಾಯಚೂರು–ಪುಣೆ ಒನ್ ವೇ ಸ್ಪೇಷಲ್ (1 ಟ್ರಿಪ್): ರೈಲು ಸಂಖ್ಯೆ 01110 ಒನ್ ವೇ ಸ್ಪೆಷಲ್ ಮೇ 25 ರಂದು ಮಧ್ಯಾಹ್ನ 3 ಗಂಟೆಗೆ ರಾಯಚೂರಿನಿಂದ ಹೊರಟು ಮರುದಿನ ಬೆಳಿಗ್ಗೆ 12:25 (00:25) ಗಂ–ಟೆಗೆ ಪುಣೆಗೆ ಆಗಮಿಸಲಿದೆ. (1 ಟ್ರಿಪ್) ಈ ರೈಲು ಕೃಷ್ಣ, ಯಾದಗಿರಿ, ನಾಲವಾರ, ವಾಡಿ, ಕಲಬುರಗಿ, ಸೋಲಾಪುರ, ಕುರ್ದುವಾಡಿ ಮತ್ತು ದೌಂಡ್ ಮೂಲಕ ಸಂಚರಿಸಲಿದೆ.

ರೈಲು ಟಿಕೇಟ್ ಬುಕಿಂ–ಗ್ ಮತ್ತಿತರ ಹೆಚ್ಚಿನ ಮಾಹಿತಿಯನ್ನು www.irctc.co.in ವೆಬ್‌ಸೈಟ್ ಹಾಗೂ UTS ವ್ಯವಸ್ಥೆಯ ಮೂಲಕ, ಈ ವಿಶೇಷ ರೈಲುಗಳ ಸಮಯ ಮತ್ತು ನಿಲುಗಡೆಗಳಿಗಾಗಿ ಹೆಚ್ಚಿನ ಮಾಹಿತಿಗಾಗಿ www.enquiry.indian-rail.gov.in ಗೆ ಭೇಟಿ ನೀಡಿ ಅಥವಾ NTES ಅಪ್ಲಿಕೇಶನ್ ಡೌನ್‌ಲೋಡ್ ಮಾಡಿಕೊಂಡು ಪಡೆಯಬಹುದಾಗಿದೆ ಕೇಂದ್ರ ರೈಲ್ವೆ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಹಿರಿಯ ನಾಗರಿಕರಿಗೆ ಸಲಕರಣೆ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.22:ತಾಲ್ಲೂಕಿನ ಮಂದಕನಳ್ಳಿ ಗ್ರಾಮದಲ್ಲಿ ಹಿರಿಯ ನಾಗರಿಕರು ಹಾಗೂ ಅಂಗವಿಕಲರಿಗೆ ಈಚೆಗೆ ವಿವಿಧ ಸಲಕರಣೆಗಳನ್ನು ಉಚಿತವಾಗಿ ವಿತರಿಸಲಾಯಿತು.

ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು, ವ್ಹೀಲ್ ಚೇರ್,ಸ್ನಾನ ಕುರ್ಚಿ,ಆಧಾರ ಬಡಿಗೆ, ಸೊಂಟದ ಪಟ್ಟಿ, ಕೊರಳ ಪಟ್ಟಿ, ಮೊಳಕಾಲು ಪಟ್ಟಿ, ಮೊಳಕೈ ಪಟ್ಟಿ ಹಾಗೂ ಇತರ ಸಲಕರಣೆಗಳ ವಿತರಣೆಗೆ ಸಾಂಕೇತಿಕವಾಗಿ ಚಾಲನೆ ನೀಡಿದರು.

ಹಿರಿಯ ನಾಗರಿಕರು ಹಾಗೂ ಅಂಗವಿಕಲರನ್ನು ಗುರುತಿಸಿ ಪ್ರಧಾನಮಂತ್ರಿ ದಿವ್ಯಾಶಾ ಕೇಂದ್ರದಿಂದ ವಿವಿಧ ಸಲಕರಣೆಗಳನ್ನು ಕೊಡಿಸಿದ ಬೀದರ್ ಮೈನಾರಿಟಿ ಸ್ಪೋರ್ಟ್ಸ್ ಅಸೋಸಿಯೇಷನ್ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.ಹಿರಿಯ ನಾಗರಿಕರು, ಅಂಗವಿಕರು ಹಾಗೂ ಇತರರಿಗೆ ಕೇಂದ್ರ ಸರ್ಕಾರದ ಅನೇಕ ಯೋಜನೆಗಳು ಇವೆ. ಅರ್ಹರು ಯೋಜನೆಗಳ ಪ್ರಯೋಜನ ಪಡೆಯಬೇಕು ಎಂದು ತಿಳಿಸಿದರು.

ಪಿಕೆಪಿಎಸ್ ಮಾಜಿ ಅಧ್ಯಕ್ಷ ರಮೇಶ ಶೆಟ್ಟಿಗುಂಡಿ ಹಾಗೂ ಇತರರ ಸಹಕಾರದೊಂದಿಗೆ ಒಂದು ತಿಂಗಳ ಹಿಂದೆ ಪ್ರಧಾನಮಂತ್ರಿ ದಿವ್ಯಾಶಾ ಕೇಂದ್ರದಿಂದ ಸಲಕರಣೆಗಳ ವಿತರಣೆಗಾಗಿ ಮಂದಕನಳ್ಳಿ, ಕಂಗನಕೋಟ್,ಶಮಶೇರನಗರ, ಶಮಶೇರನಗರ ತಾಂಡಾ ಹಾಗೂ ಮಂದಕನಳ್ಳಿ ತಾಂಡಾದ 465 ಜನರ ತಪಾಸಣೆ ಮಾಡಲಾಗಿತ್ತು. ಮೊದಲ ಹಂತದಲ್ಲಿ 203 ಜನರಿಗೆ ಸಲಕರಣೆಗಳನ್ನು ವಿತರಿಸಲಾಗಿದೆ ಎಂದು ಬೀದರ್ ಮೈನಾರಿಟಿ ಸ್ಪೋರ್ಟ್ಸ್ ಅಸೋಸಿಯೇಷನ್ ಅಧ್ಯಕ್ಷ ಮುಬಾರಕ್ ಮಂದಕನಳ್ಳಿ ಹೇಳಿದರು.

ಎರಡನೇ ಹಂತದಲ್ಲಿ ಉಳಿದ ಫಲಾನುಭವಿಗಳಿಗೂ ಸಕಲರಣೆ ವಿತರಿಸಲಾಗುವುದು ಎಂದು ತಿಳಿಸಿದರು.

ಬೀದರ್ ಮೈನಾರಿಟಿ ಸ್ಪೋರ್ಟ್ ಅಸೋಸಿಯೇಷನ್ ವತಿಯಿಂದ ವಿವಿಧ ಸಾಮಾಜಿಕ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಬೀದರ್‌ನ ಮೇಗೂರ ನೇತ್ರ ಆಸ್ಪತ್ರೆ ಸಹಯೋಗದಲ್ಲಿ 100 ಜನರ ಉಚಿತ ನೇತ್ರ ತಪಾಸಣೆ ಮಾಡಲಾಗಿದೆ ಎಂದು ಹೇಳಿದರು.

ಎಂ.ಡಿ. ಸಿರಾಜೊದ್ದೀನ್ ಚಿಂಚೋಳಿಕರ್ ಅಧ್ಯಕ್ಷತೆ ವಹಿಸಿದ್ದರು.

ಮುಖಂಡ ನಾಗಭೂಷಣ ಕಮಠಾಣ,ಗ್ರಾಮ ಪಂಚಾಯಿತಿ ಅಧ್ಯಕ್ಷ ಸಲೀಮುದ್ದೀನ್ ಚಿಂಚೋಳಿಕರ್,

ಪಿಡಿಒ ಕುಮುದಾ,ಪಿಕೆಪಿಎಸ್ ಅಧ್ಯಕ್ಷ ನಯುಮ್ ಪಟೇಲ್, ಮಾಜಿ ಅಧ್ಯಕ್ಷ ಕಾಶೀನಾಥ ಗೌರಶೆಟ್ಟಿ, ಪಿಕೆಪಿಎಸ್ ಮಾಜಿ ಅಧ್ಯಕ್ಷ ರಮೇಶ ಶೆಟ್ಟಿಗುಂಡಿ, ಎಂ.ಡಿ. ರಿಯಾಜುದ್ದಿನ್ ಚಿಂಚೋಳಿಕರ್,ಗಂಗಾಧರ ಗೌರಶೆಟ್ಟಿ,ರಾಜು ಮುಕ್ತೆದಾರ್, ಸಚಿನ್ ಬಾವಿದೊಡ್ಡಿ ಮತ್ತಿತರರು ಉಪಸ್ಥಿತರಿದ್ದರು. ಪ್ರಧಾನಮಂತ್ರಿ ದಿವ್ಯಾಶಾ ಕೇಂದ್ರ ಹಾಗೂ ಬೀದರ್ ಮೈನಾರಿಟಿ ಸ್ಪೋರ್ಟ್ಸ್ ಅಸೋಸಿಯೇಷನ್ ವತಿಯಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

# ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಜೀವ ವೈವಿಧ್ಯ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.22:ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಪದವಿ ಮಹಾವಿದ್ಯಾಲಯದಲ್ಲಿ ಸಸ್ಯಶಾಸ್ತ್ರ ವಿಭಾಗದಿಂದ ರಾಷ್ಟ್ರೀಯ ಜೀವ ವೈವಿಧ್ಯ ದಿನವನ್ನು ಸಸಿಗೆ ನೀರೆರೆಯುವುದರ ಮುಖಾಂತರ ಕಾರ್ಯಕ್ರಮವನ್ನು ನಿವೃತ್ತ ಪ್ರಾಧ್ಯಾಪಕರಾದ ಶ್ರೀ ಎಸ್.ವಿ. ಕಲ್ಮಠ ಅವರ ಅಮೃತ ಹಸ್ತದಿಂದ ಉದ್ಘಾಟಿಸಿ ಮಾತನಾಡುತ್ತಾ ಇಂದು ನಮ್ಮ ರಾಜ್ಯದ ಪಶ್ಚಿಮ ಘಟ್ಟಗಳು ಜೀವನಾಡಿಯಾಗಿವೆ. ಹಸಿರನ್ನು ಉಳಿಸಿದಾಗ ನಮ್ಮ ಮುಂದಿನ ಪೀಳಿಗೆ ಉಸಿರಿರುವವರೆಗೂ ತೊಂದರೆಯಾಗದಂತೆ ಜೀವಿಸಬಹುದು ಹಾಗೂ ಭೂಮಿಯಲ್ಲಿ ಜಲಚಕ್ರದಂತೆ ಪ್ರಾಣಿಗಳು ಒಂದರ ಮೇಲೊಂದು ಅವಲಂಬಿತವಾಗಿವೆ ಆಗ ಮಾತ್ರ ಸೃಷ್ಟಿಗೆ ಒಂದು ಮೌಲ್ಯ ಬರುತ್ತದೆ ಆದರೆ, ಇಂದಿನ ಆಧುನಿಕ ಯುಗದಲ್ಲಿ ಮಾನವನ ಕುಕೃತ್ಯಗಳಿಂದ ಸಸ್ಯಸಂಕುಲ, ಪಕ್ಷಿ ಸಂಕುಲ, ಪ್ರಾಣಿಸಂಕುಲ ನಾಶವಾಗುತ್ತಿದೆ. ಕೆಲವೊಂದು ಸಸ್ಯಗಳು ಅವನತಿಯ ಹಂತಕ್ಕೆ ಬಂದಿವೆ ಅವುಗಳನ್ನು ರಕ್ಷಣೆ ಮಾಡುವುದು ಪ್ರತಿಯೊಬ್ಬ ವಿದ್ಯಾರ್ಥಿ ಮತ್ತು ಮಾನವನ ಕರ್ತವ್ಯ ಎಂದು ಕಿವಿ ಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಇರುವುದೊಂದೇ ಭೂಮಿ ಇದನ್ನು ರಕ್ಷಣೆ ಮಾಡುವುದು ಪ್ರತಿಯೊಬ್ಬರ ಪ್ರಮುಖ ಆದ್ಯತೆಯಾಗಿರಬೇಕು. ಈ ಸುಂದರ ಭೂಮಿಯನ್ನು ಜೀವ ಸಂಕುಲ ಉಳಿಸಿ ಬೆಳೆಸುವುದರ ಜೊತೆಗೆ ಅವುಗಳ ರಕ್ಷಣೆ ಮಾಡುವುದು ಪ್ರತಿಯೊಬ್ಬ ನಾಗರೀಕನ ಕರ್ತವ್ಯ ಎಂದು ನುಡಿದರು. ಈ ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಮಾತನಾಡುತ್ತಾ "ಸಸ್ಯಂ ರಮ್ಯಂ ಸುಂದರಂ" ಈ ಭೂಮಿ ಕೇವಲ ಮಾನವ ನಿರ್ಮಿತ ಕಟ್ಟಡಗಳಿಂದ ಸುಂದರವಾಗಿಲ್ಲ ಪ್ರಕೃತಿ ನೀಡಿದ ಸಸ್ಯ, ಪಕ್ಷಿ ಪ್ರಾಣಿ ಕಲರವದಿಂದ ಸುಂದರವಾಗಿದೆ ಇದನ್ನು ರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯ ಸಸ್ಯಗಳು ಇಂಗಾಲದ ಡೈಆಕ್ಸೈಡ್ ಸ್ವೀಕರಿಸಿ ಮಾನವನಿಗೆ ಪ್ರಾಣವಾಯುವಾದ ಆಮ್ಲಜನಕವನ್ನು ನೀಡುತ್ತವೆ. ಆದ್ದರಿಂದ ಸೃಷ್ಟಿಗೆ ನಾವು ಎಷ್ಟು ಕೃತಜ್ಞತೆ ಸಲ್ಲಿಸಿದರು ಕಡಿಮೆ ನಾವು ಸಾಲು ಮರದ ತಿಮ್ಮಕ್ಕ, ಸುಂದರಲಾಲ್ ಬಹುಗುಣ ಇವರ ಆದರ್ಶವನ್ನು ಇಟ್ಟುಕೊಂಡು ನಿಮ್ಮ ನಿಮ್ಮ ಜನ್ಮದಿನದಂದು ಒಂದು ಸಸಿ ನೆಟ್ಟು ಅದನ್ನು ಮರವಾಗುವವರೆಗೆ ಮಕ್ಕಳ ಹಾಗೆ ಪೋಷಿಸಬೇಕು ಆಗ ಮಾತ್ರ ಪರಿಸರದಲ್ಲಿ ಮಾನವ ಸ್ವೇಚ್ಛೆಯಾಗಿ ಜೀವನ ನಡೆಸಲು ಸಾಧ್ಯವೆಂದು ವಿಸಾರ್ವಿಂಕ್ವಾಗಿ ನುಡಿದರು.

ಕಾರ್ಯಕ್ರಮದ ಆರಂಭದಲ್ಲಿ ಪ್ರಾಸ್ತಾವಿಕವಾಗಿ ಸಸ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಸೂರ್ಯವಂಶಿ ಪೂಜಾ ಮಾತನಾಡಿದರು ಹಾಗೂ ಬೀದರಿನ ಹಲವಾರು ಮಹಾವಿದ್ಯಾಲಯಗಳ ವಿದ್ಯಾರ್ಥಿಗಳಿಗೆ ಸ್ಪರ್ಧೆಗಳು ಏರ್ಪಡಿಸಿ ವಿಜೇತ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ಮತ್ತು ಬಹುಮಾನ ವಿತರಿಸಲಾಯಿತು. ಈ ಕಾರ್ಯಕ್ರಮದ ಸವಿನೆನಪಿಗಾಗಿ ಮುಖ್ಯ ಅತಿಥಿಗಳಿಂದ ಮಹಾವಿದ್ಯಾಲಯದ ಆವರಣದಲ್ಲಿ ಸಸಿಗಳನ್ನು ನೆಡಲಾಯಿತು.

ಕಾರ್ಯಕ್ರಮದ ಮೊದಲಿಗೆ ಕು. ಭುವನೇಶ್ವರಿ ಬಿ.ಎಸ್ಸಿ.IVನೇ ಸೆಮಿಸ್ಟರ ಪ್ರಾರ್ಥನೆ ಗೀತೆ ಹಾಡಿದರೆ, ಸ್ವಾಗತವನ್ನು ಶ್ರೀಮತಿ ನಾಗೇಶ್ವರಿ ಸ್ವಾಮಿ ಮಾಡಿದರೆ, ಶ್ರೀ ಅನೀಲಕುಮಾರ ಜಾಧವ ನಿರೂಪಿಸಿದರೆ, ಕು. ಶಾಹಿಸ್ತಾ ಬೇಗಂ ಬಿ.ಎಸ್ಸಿ IVನೇ ಸೆಮಿಸ್ಟರ ವಂದಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿ, ವಿದ್ಯಾರ್ಥಿನಿಯರು,ಪ್ರಾಧ್ಯಾಪಕರು, ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಸಂಯುಕ್ತ ರಸಗೊಬ್ಬರ ಬಳಕೆ ಮಾಡಲು ರೈತಬಾಂಧವರಲ್ಲಿ ಮನವಿ

ಬೀದರ : ಮೇ.22: ರೈತರು ಕೇವಲ ಒಂದೇ ಸಂಸ್ಥೆಯ ರಸಗೊಬ್ಬರ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ, ಮಾರುಕಟ್ಟೆಯಲ್ಲಿರುವ ವಿವಿಧ ಶ್ರೇಣಿಯ (ಗ್ರೇಡ್) ಸಾರಜನಕ, ರಂಜಕ ಮತ್ತು ಪೊಟ್ಯಾಸ್ ಯುಕ್ತ ರಸಗೊಬ್ಬರಗಳನ್ನು ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬಹುದಾಗಿದೆ. ಎಣ್ಣೆ ಕಾಳು ಬೆಳೆಗಳಿಗೆ ಸೂಕ್ತವಾದ ಗಂಧಕ ಒದಗಿಸುವ 20-20-0-13 ಹಾಗೂ ಪೊಟ್ಯಾಶ್ ಒದಗಿಸುವ ಇತರೆ ಸಂಯುಕ್ತ ರಸಗೊಬ್ಬರಗಳಾದ 15:15:15, 14:28:14, 19:19:19, 20:10:10, 12:32:16 ಇತ್ಯಾದಿಗಳನ್ನು ಡಿಎಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಬಳಕೆ ಮಾಡಲು ಬೀದರ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೈತರು ಬೆಳೆಗಳಿಗೆ ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯ ಹಾಗೂ ಡಿಎಪಿಯನ್ನು ರೂಢಿಗತವಾಗಿ ಬಳಸುತ್ತಿದ್ದು ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ. ಆದರೆ ಬೆಳೆಗಳಿಗೆ ಬರ ಮತ್ತು ರೋಗನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಶ್ ಲಭ್ಯವಿರುವುದಿಲ್ಲ.ಬೀದರ ತಾಲ್ಲೂಕಿನಲ್ಲಿ ಮುಂಗಾರು ಬೆಳೆಗಳಾದ ಸೋಯಾ ಅವರೆ, ತೊಗರಿ, ಹೆಸರು, ಉದ್ದು ಮತ್ತು ಹೈಬ್ರಿಡ್ ಜೋಳ ಬೆಳೆಗಳನ್ನು ಬೆಳೆಯಲಾಗುತ್ತಿದ್ದು, ಈ ಬೆಳೆಗಳ ಬೆಳವಣಿಗೆ ಮತ್ತು ಅಭಿವರದ್ಧಿಗೆ 17 ಪೋಷಕಾಂಶಗಳ ಅಗತ್ಯವಿರುತ್ತದೆ. ಪೋಷಕಾಂಶಗಳಿಗೆ ಭೂಮಿಯೇ ಮುಖ್ಯ ಆಧಾರ. ಮಣ್ಣಿನಿಂದ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯುವುದಿಲ್ಲ. ಬೆಳೆಗಳಿಗೆ ಬೇಕಾಗುವ ಈ ಬಾಹ್ಯ ಪೋಷಕಾಂಶಗಳನ್ನು ಸಾವಯವ (ಕೊಟ್ಟಿಗೆ ಗೊಬ್ಬರ, ಹಸಿರೆಲೆ ಗೊಬ್ಬರ, ಹಿಂಡಿ ಇತ್ಯಾದಿ) ಮತ್ತು ರಸಗೊಬ್ಬರಗಳಿಂದ ಒದಗಿಸಬೇಕಾಗಿರುತ್ತದೆ. ರಸಗೊಬ್ಬರಗಳಲ್ಲಿ ಪೋಷಕಾಂಶಗಳು ಹೆಚ್ಚಿನ ಪ್ರಮಾಣದಲ್ಲಿ ಮತ್ತು ನೇರವಾಗಿ ದೊರೆಯುವ ರೂಪದಲ್ಲಿದ್ದು ಅವುಗಳ ಬಳಕೆ ಅಗತ್ಯವಾಗಿರುತ್ತದೆಂದು ಅವರು ತಿಳಿಸಿದ್ದಾರೆ.

# ಅಕ್ಕ ಅನ್ನಪೂರ್ಣ ತಾಯಿ ಸ್ಮರಣೋತ್ಸವ ಇಂದಿನಿಂದ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 22 : ಲಿಂಗಾಯತ ಮಹಾಮಠದ ವತಿಯಿಂದ ನಗರದ ಬಸವಗಿರಿಯಲ್ಲಿ ಮೇ 23 ಮತ್ತು 24 ರಂದು ಅಕ್ಕ ಅನ್ನಪೂರ್ಣ ತಾಯಿ ಪ್ರಥಮ ಸ್ಮರಣೋತ್ಸವ ಜರುಗಲಿದೆ.

ಬೆಳಿಗ್ಗೆ 7.30ಕ್ಕೆ ಬಸವಕಲ್ಯಾಣದ ಜಗದ್ಗುರು ಸಿದ್ಧರಾಮ ಸ್ವಾಮೀಜಿ ಸಾನಿಧ್ಯದಲ್ಲಿ ಸಾಮೂಹಿಕ ವಚನ ಪಾರಾಯಣ ಹಾಗೂ ಅನುಭಾವ ಗೋಷ್ಠಿ ನಡೆಯಲಿದೆ. ಬಸವಕಲ್ಯಾಣದ ಅನುಭವ ಮಂಟಪದ ಸಂಚಾಲಕ ಶಿವಾನಂದ ಸ್ವಾಮೀಜಿ, ಭಾಲ್ಕಿಯ ಮಹಾಲಿಂಗ ಸ್ವಾಮೀಜಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಭಾಲ್ಕಿಯ ಬಸವಲಿಂಗ ಸ್ವಾಮೀಜಿ,ಸಿದ್ರಾಮಪ್ಪ ಕಪಲಾಪುರ ಸಮ್ಮುಖ, ಪರುಷಕಟ್ಟೆಯ ಚನ್ನಬಸವಣ್ಣ ಅಧ್ಯಕ್ಷತೆ ವಹಿಸುವರು. ಧಾರವಾಡದ ಬಸವರಾಜ ಹಡಪದ ಷಟಸ್ಥಲ ಧ್ವಜಾರೋಹಣ ಮಾಡುವರು.

ಸಂಜೆ 5ಕ್ಕೆ ಜಗದ್ಗುರು ಚನ್ನಬಸವಾನಂದ ಸ್ವಾಮೀಜಿ ಸ್ಮರಣೋತ್ಸವವನ್ನು ಉದ್ಘಾಟಿಸುವರು.

ಬಸವಕಲ್ಯಾಣದ ಬಸವಪ್ರಭು ಸ್ವಾಮೀಜಿ ಅನುಭಾವ ಮಂಡಿಸುವರು. ಭಾತಂಬ್ರಾದ ಜಗದ್ಗುರು ಶಿವಯೋಗೀಶ್ವರ ಸ್ವಾಮೀಜಿ ಸಾನಿಧ್ಯ,ಧಾರವಾಡದ ಡಾ. ಬಸವಾನಂದ ಸ್ವಾಮೀಜಿ, ಬೇಲೂರಿನ ಪಂಚಾಕ್ಷರಿ ಸ್ವಾಮೀಜಿ, ಸಿಂಧನಕೇರಾದ ಹೊನ್ನಲಿಂಗ ಸ್ವಾಮೀಜಿ ಸಮ್ಮುಖ, ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ ಅಧ್ಯಕ್ಷತೆ ವಹಿಸುವರು. ಬಳ್ಳಾರಿಯ ಶಿವಪ್ರಕಾಶ ಅಂಗಡಿ ವಿಶೇಷ ಆಮಂತ್ರಿತರಾಗಿ ಪಾಲ್ಗೊಳ್ಳುವರು.

24 ರಂದು ಬೆಳಿಗ್ಗೆ 8.30ಕ್ಕೆ ಪಾಪನಾಶ ಗೇಟ್‌ನಿಂದ ಬಸವಗಿರಿ ವರೆಗೆ ವಚನ ವಿಜಯೋತ್ಸವ ಪಥ ಸಂಚಲನ ನಡೆಯಲಿದೆ. ಬೆಳಿಗ್ಗೆ 11ಕ್ಕೆ ಅಕ್ಕ ಅನ್ನಪೂರ್ಣ ತಾಯಿ ಸ್ಮರಣೋತ್ಸವ ನಡೆಯಲಿದೆ.

ಕೂಡಲಸಂಗಮದ ಬಸವ ಧರ್ಮ ಪೀಠಾಧ್ಯಕ್ಷೆ ಮಾತೆ ಡಾ. ಗಂಗಾದೇವಿ 'ಅನ್ನಪೂರ್ಣ' ಯೋಜನೆಗೆ ಚಾಲನೆ ನೀಡುವರು. ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು ಸಾನಿಧ್ಯ, ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ ನೇತೃತ್ವ, ಆಳಂದದ ಕೋರಣೇಶ್ವರ ಸ್ವಾಮೀಜಿ ಸಮ್ಮುಖ, ನೀಲಮ್ಮನ ಬಳಗದ ನೀಲಮ್ಮ ರೂಗನ್ ಅಧ್ಯಕ್ಷತೆ ವಹಿಸುವರು.

ವಿಜಯಪುರದ ಡಾ. ಜೆ.ಎಸ್. ಪಾಟೀಲ ಮುಖ್ಯ ಅನುಭಾವ ಮಂಡಿಸುವರು. ಹೈಕೋರ್ಟ್ ನ್ಯಾಯವಾದಿ ಸಂತೋಷ್ ಎಸ್, ನಾಗರಾಳೆ ಮುಖ್ಯ ಅತಿಥಿ-ಯಾಗಿ, ಖೇಳಗಿಯ ಶಿವಲಿಂಗ ಸ್ವಾಮೀಜಿ, ಕಲಬುರಗಿಯ ಮಾತೆ ಪ್ರಭುಶ್ರೀ, ನಿಡವಂಚಾದ ಮಾತೆ ಮೈತ್ರಾದೇವಿ ವಿಶೇಷ ಆಮಂತ್ರಿತರಾಗಿ ಭಾಗವಹಿಸುವರು.

ಸಂಜೆ 4.30ಕ್ಕೆ ವಿಶೇಷ ಅನುಭಾವ ಹಾಗೂ ಸಮಾರೋಪ ಸಮಾರಂಭ ಜರುಗಲಿದೆ. ಹುಲಸೂರಿನ ಡಾ. ಶಿವಾನಂದ ಸ್ವಾಮೀಜಿ,ಭಾಲ್ಕಿಯ ಗುರುಬಸವ ಪಟ್ಟದ್ದೇವರು ಸಾನಿಧ್ಯ, ಗುರಮಠಕಲ್‌ನ ಶಾಂತವೀರ ಗುರು ಮುರುಘರಾಜೇಂದ್ರ ಸ್ವಾಮೀಜಿ, ಬೇಲೂರಿನ ಶಿವಕುಮಾರ ಸ್ವಾಮೀಜಿ ಸಮ್ಮುಖ, ಕಲಬುರಗಿ ಜಿ.ಪಂ. ಮುಖ್ಯ ಯೋಜನಾಧಿಕಾರಿ ಶರಣಬಸವ ಮಠಪತಿ ಅಧ್ಯಕ್ಷತೆ ವಹಿಸುವರು. ವಿಶ್ರಾಂತ ಜಿಲ್ಲಾ ನ್ಯಾಯಾಧೀಶ ಸುಭಾಷಚಂದ್ರ ನಾಗರಾಳೆ ಮುಖ್ಯ ಅತಿಥಿ, ಠಾಣಾಕುಶನೂರಿನ ಸಿದ್ಧಲಿಂಗ ಸ್ವಾಮೀಜಿ, ಸಾಯಗಾಂವನ ಶಿವಾನಂದ ಸ್ವಾಮೀಜಿ,ಹುಡಗಿಯ ಚನ್ನಮಲ್ಲದೇವರು ವಿಶೇಷ ಆಮಂತ್ರಿತರಾಗಿ ಪಾಲ್ಗೊಳ್ಳುವರು ಎಂದು ಲಿಂಗಾಯತ ಮಹಾ ಮಠದ ಪ್ರಕಟಣೆ ತಿಳಿಸಿದೆ.

# ಬೀದಿ ದೀಪ ರಿಪೇರಿ ಮಾಡಿ ಕರವೇ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.22:ಬೀದರ ನಗರಾದ್ಯಂತ ಹಾಳಾಗಿರುವ ರಸ್ತೆ, ಬೀದಿ ದೀಪಗಳನ್ನು ದುರಸ್ಥಿ ಮಾಡಬೇಕು ಹಾಗೂ ಚರಂಡಿಗಳನ್ನು ಶುಚಿಗೊಳಿಸಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣಶೆಟ್ಟಿ ಬಣ) ಆಗ್ರಹಿಸಿದೆ.

ಈ ಕುರಿತು ಗುರುವಾರ ನಗರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಬರೆದ ಮನವಿಪತ್ರವನ್ನು ಜಿಲ್ಲಾಡಳಿತಕ್ಕೆ ಸಲ್ಲಿಸಿ, ಕಳೆದ ಒಂದು ವಾರದಿಂದ ನಿರಂತರವಾಗಿ ಸುರಿಯುತ್ತಿರುವ ರಭಸದ ಮಳೆಗೆ ಬೀದರ್ ನಗರಾದ್ಯಂತ ಇರುವ ಸಾರ್ವಜನಿಕ ರಸ್ತೆಗಳು ಸಂಪೂರ್ಣವಾಗಿ ಕಿತ್ತುಹೋಗಿದ್ದು, ಅದರಲ್ಲಿ ಮಳೆ ನೀರು ನಿಂತು ವಾಹನ ಚಾಲಕರಿಗೆ ವಾಹನ ಚಲಾಯಿಸುವುದಕ್ಕೆ ಮತ್ತು ಪಾದಚಾರಿಗಳಿಗೆ ನಡೆದಾಡಲು ತುಂಬಾ ತೊಂದರೆ ಆಗುತ್ತಿದೆ. ಸ್ವಲ್ಪ ಆಯಾ ತಪ್ಪಿದಲ್ಲಿ ಕೆಸರಿನಲ್ಲಿ ಬಿಳುವ ಸಂಭವಿದೆ.

ನಗರದ ಡಾ.ಅಂಬೇಡ್ಕರ್ ಕಾಲೋನಿ ಹತ್ತಿರ, ಸಚಿವ ರಹೀಮ್ಖಾನ್ ಫಾರ್ಮ ಹೌಸ್, ನಗರದಿಂದ ಸುಮಾರು 7 ಕಿ.ಮೀ ಅಂತರದಲ್ಲಿರುವ ಕಮಠಾಣಾ ಗ್ರಾಮಕ್ಕೆ ಹೋಗುವ ರಸ್ತೆ ನಡುವೆ ಇರುವ ಬೆಳ್ಳೂರು ಕಮಾನ್ದಿಂದ ಜಮೀಸ್ತಾನಪೂರ ಕ್ರಾಸ್ ವರೆಗೆ ಇರುವ 2 ಕೀ. ಮೀ ರಸ್ತೆ ಸಂಪೂರ್ಣವಾಗಿ ಹಾಳಾಗಿದ್ದು ರಾತ್ರಿ ಹೊತ್ತಿನಲ್ಲಿ ಈ ರಸ್ತೆಯ ಮೇಲೆ ಸಂಚಾರ ಮಾಡಬೇಕಾದರೆ ಜೀವವನ್ನು ಕೈಯಲ್ಲಿ ಹಿಡಿದುಕೊಂಡು ಹೋಗುವಂತಹ ಸ್ಥಿತಿ ನಿರ್ಮಾಣವಾಗಿದೆ.

ಗುನ್ನಳ್ಳಿ ಗ್ರಾಮಕ್ಕೆ ಹೋಗುವ ರಸ್ತೆ ಕೂಡ ಕೆಟ್ಟು ಹೋಗಿದೆ. ಚಿದ್ರಿ ರಸ್ತೆಯಲ್ಲಿರುವ ಕೇಂದ್ರ ಶಾಲೆಯ ಕಂಪೌಂಡ ಪಕ್ಕದಿಂದ ಹಳೆ ಆದರ್ಶ ಕಾಲೋನಿ ಮೂಲಕ ರೈಲ್ವೆ ಗೇಟ್ ವರೆಗೆ ಇದ್ದ ರಸ್ತೆಯನ್ನು ಪೂರ್ಣವಾಗಿ ಮಾಡದೆ ಅರ್ಧ ರಸ್ತೆಯನ್ನು ಮಾಡಲಾಗಿದೆ.

ನಗರಾದ್ಯಂತ ಇರುವ ಬೀದಿ ದೀಪಗಳು ಕೆಟ್ಟಿವೆ. ಹೀಗಾಗಿ ರಾತ್ರಿ ಹೊತ್ತಿನಲ್ಲಿ ವಾಹನ ಚಾಲಕರಿಗೆ ವಾಹನ ಚಲಾಯಿಸಲು ಮತ್ತು ಪಾದಚಾರಿಗಳಿಗೆ ನಡೆದಾಡಲು ತೊಂದರೆ ಅನುಭವಿಸುತ್ತಿದ್ದಾರೆ. ಚರಂಡಿಗಳು ತುಂಬಿರುವ ಕಾರಣ ಮಳೆ ನೀರು ಚರಂಡಿ ಮೂಲಕ ಹರಿದು ಹೋಗುವುದಕ್ಕೆ ಆಗದ ಕಾರಣ ಸದರಿ ನೀರು ರಸ್ತೆಗೆ ಹರಿದು ರಸ್ತೆಯ ಮೇಲೆ ಕೆಸರು ಆಗುತ್ತಿದ್ದು ಇದ-ರಿಂದ ಸಾರ್ವಜನಿಕರು ಕಷ್ಟ ಅನುಭವಿಸುವಂತಾಗಿದೆ.

ಹೀಗಾಗಿ ಸಾರ್ವಜನಿಕರ ಹಿತದೃಷ್ಟಿಯಿಂದ ಹಾಳಾಗಿರುವ ರಸ್ತೆಗಳನ್ನು ಕೂಡಲೇ ದುರಸ್ತಿ ಮಾಡಬೇಕು. ಬೀದಿ ದೀಪಗಳನ್ನು ಸರಿಪಡಿಸಬೇಕು. ಚರಂಡಿಗಳನ್ನು ಶುಚಿಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ.

ವೇದಿಕೆ ಜಿಲ್ಲಾ ಅಧ್ಯಕ್ಷ ಪೀಟರ್ ಚಿಟಗುಪ್ಪ, ಉಪಾಧ್ಯಕ್ಷ ಪ್ರಲ್ಹಾದ್ ಚಿಟ್ಟಾವಾಡಿ, ಪ್ರಧಾನ ಕಾರ್ಯದರ್ಶಿ ರಮೇಶ ಮರ್ಜಾಪುರ, ಸಂಚಾಲಕ ಬಸವರಾಜ್ ನಂದಗಾಂವ, ಪ್ರಮುಖರಾದ ನೀಲೇಶ್ ರಾಠೋಡ್, ನಾಗೇಶ ರಾಯಣ್ಣೋರ, ಮೋಸಿನ್ ಪಟೇಲ್, ವಿಲಾಸ ಪಾಟೀಲ್, ಧನರಾಜ ಎನ್. ಚಿಟ್ಟಾವಾಡಿ, ಸಚಿನ್ ಕುದುರೆ, ಯೋಹಾನ್ ಮಿಸೆ, ಶಿವು ಚಿಟ್ಟಾವಾಡಿ,ಶಿವಕುಮಾರ ಎಸ್. ಮಾಮುಡಗಿ, ರಾಜಗೊಂಡ ಚಿಟ್ಟಾವಾಡಿ ಇತರರಿದ್ದರು.

# ಐಟಿಐ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಬೀದರ : ಮೇ.22:ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಹುಮನಾಬಾದನಲ್ಲಿ ಅಗಸ್ಟ್-2025 ನೇ ಶೈಕ್ಷಣಿಕ ಸಾಲಿನ ಮೇರಿಟ್-ಕಂ-ರಿಸರ್ವೇಶನ್ ಆಧಾರಿತ ಪ್ರವೇಶಾತಿಗಾಗಿ ಎಸ್. ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾಗಿರುವ 14 ವರ್ಷ ಮೇಲ್ಪಟ್ಟ ವಯೋಮಿತಿಯ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಹುಮನಾಬಾದ ಸಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತ ಅಭ್ಯರ್ಥಿಗಳು ಇಲಾಖೆಯ ವೆ???ಸೆಟ್ www.cite.karnataka.gov.in ಮೂಲಕ ದಿನಾಂಕ: 28-05-2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ 9449041472, 9448100294, 7483148185 ಹಾಗೂ 9448150536 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# 24 ರಂದು ಬಸವ ಜಯಂತ್ಯುತ್ಸವ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.22:ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಜಿಲ್ಲಾ ಘಟಕದ ವತಿಯಿಂದ ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಮೇ 24 ರಂದು ಬೆಳಿಗ್ಗೆ 11.30ಕ್ಕೆ ಬಸವ ಜಯಂತ್ಯುತ್ಸವ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸುವರು. ಬಸವ ಸೇವಾ ಪ್ರತಿಷ್ಠಾನದ ಡಾ.ಗಂಗಾಂಬಿಕೆ ಅಕ್ಕ ಸಾನಿಧ್ಯ, ಹರಳಯ್ಯ ಸಮಾಜದ ಪ್ರಧಾನ ಕಾರ್ಯದರ್ಶಿ ರಾಜಕುಮಾರ ಟೆಳೆಕರ್ ಹಲಬರ್ಗಾ ಅಧ್ಯಕ್ಷತೆ ವಹಿಸುವರು. ಕಲಬುರಗಿಯ ಸಾಹಿತಿ ಡಾ. ಕಾವ್ಯಶ್ರೀ ಮಹಾಗಾಂವಕರ್ ವಿಶೇಷ ಉಪನ್ಯಾಸ ನೀಡುವರು.

ಮುಖ್ಯ ಅತಿಥಿಗಳಾಗಿ ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್, ಸಂಸದ ಸಾಗರ್ ಖಂಡ್ರೆ, ಅತಿಥಿಗಳಾಗಿ ಬಿಡಿಎ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್,ಗುರುನಾನಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಬಲಬೀರಸಿಂಗ್, ಬಸವ ಕೇಂದ್ರದ ಜಿಲ್ಲಾ ಘಟಕದ ಅಧ್ಯಕ್ಷ ಶರಣಪ್ಪ ಮಿಠಾರೆ, ಮರಾಠ ಸಮಾಜದ ಮುಖಂಡ ಅಶೋಕ ಸೋನಜಿ,ಲಿಂಗಾಯತ ಸಮಾಜ ಯುವ ಒಕ್ಕೂಟದ ರಾಜ್ಯ ಅಧ್ಯಕ್ಷ ಆನಂದ ದೇವಪ್ಪ, ಪ್ರಮುಖರಾದ ಅನಿಲಕುಮಾರ ಬೆಲ್ದಾರ್, ರಮೇಶ ಡಾಕುಳಗಿ, ಗಂಧರ್ವ ಸೇನಾ, ಡಾ. ದೇವಿದಾಸ ತುಮಕುಂಟೆ, ಬಾಬುರಾವ್ ಪಾಸ್ವಾನ್, ದಿಗಂಬರ್ ಮಡಿವಾಳ, ಒಕ್ಕೂಟದ ಗೌರವಾಧ್ಯಕ್ಷ ಬಸವರಾಜ ಮಾಳಗೆ, ಉಪಾಧ್ಯಕ್ಷ ತಾನಾಜಿ ಸಗರ್, ಪ್ರಧಾನ ಕಾರ್ಯದರ್ಶಿ ಜಗನ್ನಾಥ ಅಲಗೊಲ್ ಪಾಲ್ಗೊಳ್ಳುವರು ಎಂದು ಒಕ್ಕೂಟದ ಜಿಲ್ಲಾ ಘಟಕದ ಅಧ್ಯಕ್ಷ ಡಾ. ರಾಜಶೇಖರ ಸೇಡಂಕರ್ ತಿಳಿಸಿದ್ದಾರೆ.

# ಜಿಪಂ ಸಿಇಓ ಅವರಿಗೆ ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘ ಮನವಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವಸಿಬ್ಬಂದಿಗಳ ಕಳೆದ 05 ತಿಂಗಳ ಬಾಕಿ ವೇತನ ಪಾವತಿಸುವಂತೆಜಿಲ್ಲಾಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಅವರಿಗೆ

ನರೇಗಾ ನೌಕರರಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ

ಘಟಕದಿಂದ ಗುರುವಾರ ಮನವಿ ಸಲ್ಲಿಸಲಾಯಿತು.

ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಜಿಲ್ಲಾಪಂಚಾಯತ್, ತಾಲೂಕು ಪಂಚಾಯತ್, ಗ್ರಾಮ ಪಂಚಾಯತ್ ಹಂತದಲ್ಲಿ ವಿವಿಧ ಸ್ಥರಗಳಲ್ಲಿ ಕಳೆದ ಹಲವಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದೇವೆ. ಕೊಪ್ಪಳ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಎಡಿಪಿಸಿ, ಡಿಐಇಸಿ, ಡಿಎಂಐಎಸ್, ಅಕೌಂಟ್ ಮ್ಯಾನೇಜರ್, ತಾಂತ್ರಿಕ ಸಂಯೋಜಕರು, ಎಂ.ಐ.ಎಸ್. ಸಂಯೋಜಕರು, ಐ.ಇ.ಸಿ. ಸಂಯೋಜಕರು, ಆಡಳಿತ ಸಹಾಯಕರು, ಜಿ.ಪಂ., ತಾ.ಪಂ. ಮತ್ತು ಅನುಷ್ಠಾನ ಇಲಾಖೆಯ ಡಿಇಓಗಳು, ತಾಂತ್ರಿಕ ಸಹಾಯಕರು (ಸಿವ್ಹಿಲ್, ಕೃಷಿ, ಅರಣ್ಯ, ತೆ-ೂಟಗಾರಿಕೆ) ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 120 ಕ್ಕೂ ಹೆಚ್ಚು ಸಿಬ್ಬಂದಿಗಳಿಗೆ ಜನೇವರಿ-2025ರ ಮಾಹೆಯಿಂದ ವೇತನ ಪಾವತಿಯಾಗಿರುವುದಿಲ್ಲ. ಇದರಿಂದ ಎಲ್ಲ ನೌಕರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುತ್ತಾರೆ. ವೇತನ ಪಾವತಿ ಆಗದೇ ಇರುವುದರಿಂದ ಕುಟುಂಬ ನಿರ್ವಹಣೆ, ದಿನಸಿ ಖರೀದಿ, ಮಕ್ಕಳ ಶಾಲಾ ಪ್ರವೇಶಾತಿ, ಕುಟುಂಬ ಸದಸ್ಯರ ವೈದ್ಯಕೀಯ ವೆಚ್ಚಗಳು, ಮನೆ ಬಾಡಿಗೆ, ಪ್ರಯಾಣ ವೆಚ್ಚಗಳು, ಸಾಲಗಳ ಮರುಪಾವತಿ, ಇ.ಎಂ.ಐ ಸೇರಿದಂತೆ ಅನೇಕ ರೀತಿಯ ಖರ್ಚುಗಳನ್ನು ನಿಭಾಯಿಸಲು ತೀವ್ರತೊಂದರೆ ಉಂಟಾಗಿರುತ್ತದೆ.

ಸಕಾಲದಲ್ಲಿವೇತನಪಾವತಿಯಾಗದೇ ಇರುವುದರಿಂದ ತುಂಬಾ ಸಮಸ್ಯೆಗಳು ಎದುರಾಗಿವೆ. ಈಗಾಗಲೇ ಶಾಲಾ ಪ್ರವೇಶಾತಿಗಳು ಪ್ರಾರಂಭಗೊಂಡಿದ್ದು, ಮಕ್ಕಳ ಶಾಲೆಯ ಫೀ ಕಟ್ಟಲು ಸಹ ಹಣವಿಲ್ಲವಾಗಿದೆ. ಪ್ರತಿಯೊಬ್ಬ ನರೇಗಾ ನೌಕರರು ಸಮಸ್ಯೆ ಎದುರಿಸುತ್ತಿದ್ದು, ಕೂಡಲೇ ನರೇಗಾ ನೌಕರರ ಬಾಕಿ ವೇತನ ಪಾವತಿಸುವಂತೆ ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ

ಘಟಕದ ಪದಾಧಿಕಾರಿಗಳು ಕೋರಿದರು.

ಈ ವೇಳೆ, ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಅಧ್ಯಕ್ಷರಾದ ಕೊಟ್ರೇಶ ಜವಳಿ, ಉಪಾಧ್ಯಕ್ಷರಾದ ಶರಣಯ್ಯ, ಕನಕಪ್ಪ ಚಲವಾದಿ, ಎಲ್ಲ ಪದಾಧಿಕಾರಿಗಳು ಹಾಗೂ ಎಲ್ಲ ನೌಕರರು ಹಾಜರು ಇದ್ದರು.

# ಮೇ 25 ರಂದು ರಾಜ್ಯಮಟ್ಟದ "ಆರತಕ್ಷತೆ ಕವಿಗೋಷ್ಠಿ"

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತು ಕೊಪ್ಪಳ ವತಿಯಿಂದ ಆರತಕ್ಷತೆ ಕವಿಗೋಷ್ಠಿ ಸಮಾರಂಭವು 2025ರ ಮೇ 25 ರಂದು ಬೆಳಿಗ್ಗೆ 10 ರಿಂದ 2 ಗಂಟೆಯವರೆಗೆ, ಶ್ರೀಮಹಾಂತಯ್ಯನ ಮಠ ಕಲ್ಯಾಣ ಮಂಟಪ, ಲಕ್ಷ್ಮಿ ಶಿವೆ ಟಾಕೀಸ್ ಹಿಂಭಾಗ, ಕೊಪ್ಪಳದಲ್ಲಿನಡೆಯಲಿದೆ. ಹಿರಿಯ ಪತ್ರಕರ್ತ ರಮೇಶ ಸುರ್ವೆಯವರ ಜೇಷ್ಠ ಪುತ್ರ, ಸುರ್ವೆ ಪತ್ರಿಕೆ ಸಂಪಾದಕ ಚಿ॥ ರಾ॥ ಕಿಶನ್ ಸುರ್ವೆ ಮತ್ತು ಚಿ॥ಸೌ॥ ತೇಜಸ್ವಿ ಅವರ ವಿವಾಹ ಆರತಕ್ಷತೆ ನಿಮಿತ್ಯ, ರಾಜ್ಯಮಟ್ಟದಲ್ಲಿ ಈ ಆರತಕ್ಷತೆ ಕವಿಗೋಷ್ಠಿ ಹಮ್ಮಿಕೊಂಡಿದ್ದು, ವಿವಾಹಕ್ಕೆ ಸಂಭಂಧಿಸಿದ ಕವಿತೆ ಅಥವಾ ನಿಮ್ಮಇಷ್ಟದ ಸ್ವರಚಿತ ಕವನಗಳನ್ನುಓದಬಹುದಾಗಿದೆ.

ಶ್ರೀಮತಿ ಗಂಗಮ್ಮ ಹಿರೇಮಠ ಸಾಹಿತಿಗಳು, ಉಪನ್ಯಾಸಕರು, ಸಿದ್ದಾಪುರ ಇವರು ಕವಿಗೋಷ್ಠಿಯನ್ನು ಉದ್ಘಾಟಿಲಿದ್ದು, ಡಾ. ಭಾಗ್ಯಜ್ಯೋತಿ ಸಹಪ್ರಾಧ್ಯಾಪಕರು ಸ.ಪ್ರ.ದ.ಕಾಲೇಜು ಕೊಪ್ಪಳ ಇವರು ಕವಿಗೋಷ್ಠಿಯ ಅಧ್ಯಕ್ಷತೆಯನ್ನು ವಹಿಸಿದ್ದಾರೆ. ಮುಖ್ಯಅತಿಥಿಗಳಾಗಿಡಾ. ರಾಜೇಂದ್ರ ಗಡಾದ ಹಿರಿಯ ಸಾಹಿತಿಗಳು ಗದಗ, ಡಾ. ಸಿದ್ಧಲಿಂಗಪ್ಪ ಕೊಟ್ನೇಕಲ್ ಸಾಹಿತಿಗಳು, ಸಂಶೋಧಕರು, ಕೊಪ್ಪಳ, ಶೇಖರಗೌಡ ಮಾಲಿಪಾಟೀಲ್ ಮಾಜಿ ಅಧ್ಯಕ್ಷರು, ಕಸಾಪ, ಕೊಪ್ಪಳ, ರವಿತೇಜ ಅಬ್ಬಿಗೇರಿ ಮಾಜಿ ಅಧ್ಯಕ್ಷರು, ಕಸಾಪ, ಕೊಪ್ಪಳ, ಜಿ.ಎಸ್. ಗೋನಾಳ ರಾಜ್ಯಾಧ್ಯಕ್ಷರು ಸಿರಿ ಗನ್ನಡ ವೇದಿಕೆ ಬೆಂಗಳೂರು, ರಮೇಶ ಸುರ್ವೆ ಹಿರಿಯ ಪತ್ರಕರ್ತರು ಬೆಂಗಳೂರು

ಕವಿಗೋಷ್ಠಿಯಲ್ಲಿ ಹಿರಿಯ ಕವಿಗಳಾದ ಡಾ. ಮಹಾಂತೇಶ್ ಮಲ್ಲನಗೌಡರ, ರವಿತೇಜ ಅಬ್ಬಿಗೇರಿ , ಡಾ. ರಾಜೇಂದ್ರ ಎಸ್. ಗಡಾದ, ಡಾ. ಸಿದ್ಧಲಿಂಗಪ್ಪ ಕೊಟ್ನೇಕಲ್, ಜಿ.ಎಸ್. ಗೋನಾಳ, ಟಿ.ಕೆ ಗಂಗಾಧರ ಪತ್ತಾರ, ಬೀರಪ್ಪ ಶಂಭೋಜಿ, ಶಾರದಾ ರಜಪೂತ ಸಿಂಗ್, ಅನ್ನಪೂರ್ಣ ಮಹೇಶ್ ಸೇರಿ ಮುಂತಾದವರು ಉಪಸ್ಥಿತರಿರುತ್ತಾರೆ.

ಕಡ್ಡಾಯವಾಗಿ ಬೆಳಿಗ್ಗೆ 10 ರಿಂದ ಮದ್ಯಾಹ್ನ 2 ಗಂಟೆ ತನಕ ಕವಿಗಳು ಸಭಾಂಗಣದಲ್ಲಿ ಇರಬೇಕು. ಕಾರ್ಯಕ್ರಮದ ಕೊನೆಯಲ್ಲಿ ಕವಿತೆ ವಾಚಿಸಿದ ಪ್ರತಿ ಕವಿಗಳಿಗೆ "ಕರ್ನಾಟಕ ಕವಿಭೂಷಣ ರಾಜ್ಯ ಪ್ರಶಸ್ತಿ" ಹಾಗೂ "ಬಹುಜನರ ಕವಿತೆಗಳು" ಕವನ ಸಂಕಲನವನ್ನು ಕಾಣಿ-ಕೆಯಾಗಿ ನೀಡಲಾಗುವುದು. ಮದ್ಯಹ್ನ 1.30 ರಿಂದ 2.30 ರವರಿಗೆ ಭೋಜನ ವ್ಯವಸ್ಥೆ ಇರುತ್ತದೆ.

ಆಸಕ್ತಕವಿಗಳುಭಾಗವಹಿಸುವವರು ತಮ್ಮ ಹೆಸರನ್ನು ಕೆಳಕಂಡ ಪದಾಧಿಕಾರಿಗಳ ವಾಟ್ಸಾಪ್‌ನಲ್ಲಿ ನೋಂದಾಯಿಸಿಕೊಳ್ಳಿ.

ರುದ್ರಪ್ಪ ಭಂಡಾರಿ ಮೊ: 78159 85505, ಮಹಾಂತೇಶ್ ಮಲ್ಲನಗೌಡರ ಮೊ: 94486 34014, ಶಿವಪ್ರಸಾದ್ ಹಾದಿಮನಿ ಮೊ: 79967 90189, ಡಾ. ಮಹಾಂತೇಶ್ ನೆಲಾಗಣಿ ಮೊ: 9964811198, ಜಿ.ಎಸ್ ಗೋನಾಳ ಮೊ: 94480 25067 , ಡಾ. ರಾಜೇಂದ್ರಗಡಾದ ಮೊ: 99457 01680, ಉಮೇಶ್ ಸುರ್ವೆ ಮೊ: 78920 94599.

ನಿಮ್ಮ ಹೆಸರನ್ನು ಮೇಲ್ಕಂಡ ವಾಟ್ಸಾಪ್ ನಂಬರ್‌ನಲ್ಲಿ ನೊಂದಾಯಿಸಬಹುದು ಎಂದು ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ರುದ್ರಪ್ಪ ಭಂಡಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರ್ಮಿಕ ಇಲಾಖೆಯಿಂದಲೆ ಕಾರ್ಮಿಕರಿಗೆ ಯೋಜನೆಗಳ ಮರೀಚಿಕೆ -ಪ್ರದೀಪ ಅಣಿಬಿ.



ಶಹಾಪುರ,

ಕಾರ್ಮಿಕ ಇಲಾಖೆಯಿಂದ ಜಾರಿಯಲ್ಲಿರುವ ಹಲವಾರು ಸರ್ಕಾರಿ ಯೋಜನೆಗಳು ಬಡವರಿಗೆ ದುರ್ಭಲರಿಗೆ ತಲುಪದೆ ಉಳ್ಳವರ ಪಾಲಾಗುತ್ತಿವೆ, ಕಾರ್ಮಿಕರ ಮಕ್ಕಳಿಗೆ ಮದುವೆ ಸಾಹಾಯಧನ, ಕಾರ್ಮಿಕರಿಗೆ ವೃತ್ತಿ ತರಬೇತಿಗಳು, ಮತ್ತು ಸಾಮಾನುಗಳ ವಿತರಣೆ, ಕಾರ್ಮಿಕರಿಗೆ ವಿಮಾ ಯೋಜನೆ, ಮತ್ತು ಕಾರ್ಮಿಕ ವಯೋವೃದ್ದರಿಗೆ ಮಾಹಾಶಾಸನ, ಆರೋಗ್ಯ ಸಾಹಾಯಧನ, ಕಾರ್ಮಿಕರು ಮೃತಪಟ್ಟಲ್ಲಿ ಅವರಿಗೆ ಕಾರ್ಮಿಕ ಇಲಾಖೆಯಿಂದ ಸಾಹಾಯಧನ ಮಂಜೂರಿ ಹೀಗೆ ಹಲವಾರು ಯೋಜನೆಗಳು ಜಾರಿಯಲ್ಲಿದ್ದರೂ ಇಂದು ಕಚೇರಿಯಲ್ಲೆ ಕರ್ತವ್ಯ ನಿರ್ವಹಣೆಮಾಡುವ ಅಧಿಕಾರಿಗಳ ಪಾಲಾಗುತ್ತಿವೆ, ಹಲವಾರು ಯೊಜನೆಗಳು ಗೊತ್ತಾಗದೆ ಕಾರ್ಮಿಕರು ದುರ್ಭಲರು, ಅಘಘಾತಗಳಲ್ಲಿ ಶಾಶ್ವತ ಅಂಗವೀಕಲರಾಗಿದ್ದವರು ಗೋಳಾಡುತ್ತಿದ್ದಾರೆ, ಮದುವೆಗೆಂದು ಸಾಹಾಯಧನ ಅರ್ಜಿ ಸಲ್ಲಿಸಿದರೂ ವರ್ಷನುಗಟ್ಟಲೆ ಕಚೇರಿಗೆ ಸುತ್ತಾಡಿದರೂ ಕೆಲಸ ಮಾಡದೆ ಅಧಿಕಾರಿಗಳು ಸತಾಹಿಸುತ್ತಿದ್ದಾರೆ, ಎಂದು ಆರೋಪಿಸಿದ ಸರ್, ಎಮ್, ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷರಾದ ಪ್ರದೀಪ ಅಣಿಬಿ ನೇತೃತ್ವದಲ್ಲಿ ಕಾರ್ಮಿಕ ಮಂತ್ರಿ ಸಂತೋಷಲಾಡ ರವರಿಗೆ ತಹಿಸಿಲ್ದಾರವರ ಮುಖಾಂತರ ಮನವಿ ಸಲ್ಲಿಸಲಾಯಿತು, ಈ ಸಂಧರ್ಭದಲ್ಲಿ ರಾಜಪ್ಪ ಗುತೆ-ದಾರ, ಮೌನೇಶ ಜಾರಕಿಹೊಳಿ, ಬೋಜಪ್ಪಮುಂಡಾಸ್. ಅಂಬ್ರೇಶ ಕಟ್ಟಿಮನಿ, ಮಲ್ಲು ದರಿಯಾಪುರ, ಮೌನೇಶ ಬೇವಿನಳ್ಳಿ, ಆಂಜನೇಯ ಹಳಿಸಗರ ಏರಿದಂತೆ ಹಲವಾರು ಜನರು ಹಾಜರಿದ್ದರು,.

# ಬಿತ್ತನ ಬೀಜ, ಗೊಬ್ಬರ ಕೊರತೆಯಾಗದಂತೆ ನಿಗಾ ವಹಿಸಿ-ಎಂ ಎನ್ ಕುಕನೂರ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ಮುಂಗಾರುಬಿತ್ತನೆಗೆಅವಶ್ಯಕವಿರುವ ಬಿತ್ತನೆ ಬೀಜ ಹಾಗೂ ಗೊಬ್ಬರಗಳ ದಾಸ್ತಾನು ಕೊರತೆಯಾಗದಂತೆ ಅಧಿಕಾರಿಗಳು ನಿಗ ವಹಿಸಬೇಕು ಎಂದು ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನಾ ರಾಷ್ಟ್ರಾಧ್ಯಕ್ಷ ಎಂ. ಎನ್ ಕುಕನೂರು ಹೇಳಿದರು.

ಪಟ್ಟಣದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನಾ ರಾಷ್ಟ್ರಾಧ್ಯಕ್ಷ ಎಂ ಎನ್ ಕುಕನೂರು ಮಾತನಾಡುತ್ತಾ ಕುಕನೂರು ಯಲಬುರ್ಗಾ ತಾಲೂಕಿನ ಬಹುತೇಕ ಪ್ರದೇಶ ಮಳೆಯಾಧಾರಿತವಾಗಿದ್ದು ಮುಂಗಾರು ಬಿತ್ತನೆಗೆ ಸದ್ಯ ಮಳೆ ಉತ್ತಮವಾಗಿ ಸುರಿದ್ದಿದ್ದು ರೈತರು ಕೃಷಿ ಚಟುವಟಿಕೆಗಾಗಿ ತಮ್ಮ ಜಮೀನನ್ನುಹದಗೊಳಿಸುವನಿಟ್ಟಿನಲ್ಲಿ ಇನ್ನೇನು ಕಾರ್ಯಪ್ರವೃತ್ತರಾಗುತ್ತಾರೆ ಆದ್ದರಿಂದ ಸರ್ಕಾರದಿಂದ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಹಾಗೂ ಗೊಬ್ಬರಗಳನ್ನು ಪೂರೈಕೆ ಮಾಡುವ ರೈತ ಸಂಪರ್ಕ ಕೇಂದ್ರಗಳಲ್ಲಿ ಅಧಿಕಾರಿಗಳು ನಿಗ ವಹಿಸಿ ಅಗತ್ಯಕ್ಕಿಂತ ಅಲ್ಪ ಪ್ರಮಾಣದ ಹೆಚ್ಚಿನ ದಾಸ್ತಾನವನ್ನು ಕೇಂದ್ರಗಳಲ್ಲಿ ಇಡುವುದರಿಂದ ರೈತರಿಗೆ ಅನುಕೂಲಕರವಾಗಿ ಉತ್ತಮ ಬೆಳೆ ಬೆಳೆಯಲು ಅನುಕೂಲವಾಗುತ್ತದೆ ಆದ್ದ-ರಿಂದ ಯಾವುದೇ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ಹಾಗೂ ಗೊಬ್ಬರದ ಕೊರತೆಯಾಗದಂತೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ನಿಗ ವಹಿಸುವುದರೊಂದಿಗೆ ರೈತ ಪರ ಕಾರ್ಯದಲ್ಲಿ ಕೈಜೋಡಿಸಬೇಕು ಎಂದು ಆಗ್ರಹ ಪಡಿಸಿದರು.

ಈ ವೇಳೆಯಲ್ಲಿ ಚಂದ್ರಕಾಂತ್ ಪಾಟೀಲ್ ರಾಜ್ಯ ಉಪಾಧ್ಯಕ್ಷರು, ಯಶೋದಾ ಸಿ ರಾಜ್ಯ ಉಪಾಧ್ಯಕ್ಷರು ಮಹಿಳಾ ಘಟಕ, ಮಂಜುಳಾ ರಾಮೇಗೌಡ ಮೈಸೂರು ಜಿಲ್ಲಾ ಉಪಾಧ್ಯಕ್ಷರು, ಪಿಡ್ಡನಗೌಡ ಮಾಲಿ ಪಾಟೀಲ್ ಕೊಪ್ಪಳ ಜಿಲ್ಲಾ ಕಾರ್ಯಧ್ಯಕ್ಷರು, ಬಸವರಾಜ ಅಡವಿ, ರಾಜೇಶ್ ಸಣ್ಣಕ್ಕಿ, ಮಾಜಿದ್ ಖಾನ್ ಮುಲ್ಲಾ, ಮೆಹಬೂಬ್ ಮಾಳೆಕೊಪ್ಪ, ಹನುಮೇಶ್, ಹೊನ್ನಪ್ಪ, ಬಶೀರ್ ಅಹಮದ್ ಖಾನ್ ಮುಲ್ಲಾ, ವೆಂಕಟೇಶ್ ಇಳಿಗೇರ್, ಬರ್ಮಣ್ಣ, ಅಂಬರೀಶ್, ಮತ್ತು ಇತರರು ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನಾ. ರಿ. ದೆಹಲಿ ಸೇರಿದಂತೆ ಅನೇಕರು ಇದ್ದರು.

# ಇಬ್ಬರು ಬಾಲಕಿಯರ ದುರ್ಮರಣ; ಪರಿಹಾರಕ್ಕೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ.22: ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಮೋಟ್ನಳ್ಳಿ ಗ್ರಾಮದಲ್ಲಿ ಇಬ್ಬರು ಬಾಲಕಿಯರು, ಬಟ್ಟೆ ಒಗೆಯಲು ಹೋಗಿ ಬಾವಿಯಲ್ಲಿ ಕಾಲು ಜಾರಿ ಬಿದ್ದು, ಮೃತಪಟ್ಟಿದ್ದು, ಕಡು ಬಡವ ಕುಟುಂಬವಿದ್ದು, ಮೃತ ಬಾಲಕಿಯರ ಕುಟುಂಬಕ್ಕೆ ಮಾನವೀಯ ದೃಷ್ಟಿಯಿಂದ ಪರಿಹಾರ ಧನ ನೀಡುವಂತೆ ಕನ್ನಡ ರಕ್ಷಣಾ ವೇದಿಕೆ ಜಿಲ್ಲಾ ಘಟಕ ಒತ್ತಾಯಿಸಿದೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ ಕರವೇ ಜಿಲ್ಲಾಧ್ಯಕ್ಷ ನಾಗಪ್ಪ ಹೊನಗೇರಾ ಮಾತನಾಡಿ, ಹಿಂದುಳಿದ ಉಪ್ಪಾರ ಜಾತಿಗೆ ಸೇರಿದ್ದು, ದಿ:15-05-2025 ರಂದು ಮೋಟ್ನಳ್ಳಿ ಗ್ರಾಮದಲ್ಲಿ ವಿದ್ಯುತ್ ಇಲ್ಲದೇ ಇರುವುದರಿಂದ ಎರಡು ದಿನದಿಂದ ನೀರು ಬರದೇ ಇರುವ ಕಾರಣ ಬಟ್ಟೆ ಒಗೆಯಲು ಊರಿನ ಬಾವಿಗೆ ಹೋದ ಬಾಲಕಿಯರಾದ 1) ಕು.ವಸಂತಮ್ಮ ತಂ/ ಲಕ್ಷ್ಮಣ, ಪಿಯುಸಿ ವ್ಯಾಸಂಗ, ಸಾಂ ಮೋಟ್ನಳ್ಳಿ, ಇವರ ಸಂಬಂಧಿ (ಅತ್ತೆ ಮಗಳು) ಬಾಲಕಿಯಾದ




2)ನವಿತಾ ತಂ/ ಮಾಣಿಕಪ್ಪ ತೆಲಂಗಾಣ ಇದ್ದು, ಈಕೆಯ ಎಸ್.ಎಸ್.ಎಲ್.ಸಿ. ಪ್ರಸಕ್ತ ಸಾಲಿನಲ್ಲಿ ಶೇ. 98% ಅಂಕ ಪಡೆದಿದ್ದು, ಇವರಿಬ್ಬರು ಬಟ್ಟೆ ಒಗೆಯಲು ಹೋದಾಗ ಆಕಸ್ಮಿಕವಾಗಿ ಕಾಲು ಜಾರಿ ಬಿದ್ದು ಮೃತಪಟ್ಟಿರುತ್ತಾರೆ.

ಸದರಿಯವರ ಕುಟುಂಬ ತುಂಬಾ ಕಡು ಬಡತನದಿಂದ ಕೂಡಿದ್ದು, ಆರ್ಥಿಕವಾಗಿ ಅತೀ ಹಿಂದುಳಿದ ಕುಟುಂಬವಾಗಿದ್ದು, ಇಬ್ಬರು ಬಾಲಕಿಯರು ಮುಂದೆ ಉನ್ನತವ್ಯಾಸಂಗಮಾಡಿ, ಕುಟುಂಬ ಸಾಕುವ ಕನಸು ಕಂಡಿದ್ದು, ಈಗ ಅವರ ಕುಟುಂಬ ಕಣ್ಣೀರಿನಲ್ಲಿ ಕೈ ತೊಳೆಯುತ್ತಿದೆ.

ಆದಕಾರಣ ತಾವು ದಯಮಾಡಿ, ಮಾನವೀಯತೆ ದೃಷ್ಟಿಯಿಂದ ಸದರಿಯವರ ಕುಟುಂಬಕ್ಕೆ ಸೂಕ್ತ ಪರಿಹಾರ ಧನ ಒದಗಿಸಿ ಕಡು ಬಡ ಕುಟುಂಬಕ್ಕೆ ಆಸರೆಯಾಗಿದ್ದ ಮಕ್ಕಳನ್ನು ಕಳೆದುಕೊಂಡ ಕುಟುಂಬಕ್ಕೆ ಸರ್ಕಾರದಿಂದ ಸಿಗತಕ್ಕಂಥ ಸೌಲತ್ತು ಒದಗಿಸಿ ಕೊಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಆನಂದ ಬಂದಳ್ಳಿ ಹೊನಗೇರಾ, ರಮೇಶ ಮೋಟ್ನಳ್ಳಿ, ಅಲ್ಲಾವುದ್ದಿನ್ ಮೊಟ್ನಳ್ಳಿ, ಮಲ್ಲಪ್ಪ ಗಂಗಾನಗರ, ಲಕ್ಷ್ಮಣ ಮೊಟ್ನಳ್ಳಿ, ಆದಪ್ಪ ಹೊನಗೇರಿ, ಬಸವರಾಜ ಹೊನಗೇರಿ, ರಾಮಣ್ಣ ಹೊನಗೇರಿ, ನಾಗಪ್ಪ ಮೊಟ್ನಳ್ಳಿ, ಅಶೋಕ ಮೊಟ್ನಳ್ಳಿ, ಮಹಾದೇವ ಮೊಟ್ನಳ್ಳಿ, ಶರಣು ಮೋಟ್ನಳ್ಳಿ ಸೇರಿದಂತೆ ಅನೇಕರು ಇದ್ದರು.

# ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಕಲಬುರಗಿ,ಮೇ.22- ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನ ಗುಂಡಗುರ್ತಿ ಮತ್ತು ನಾಗಾವಿ ಹಾಗೂ ಅಫಜಲಪುರ ತಾಲೂಕಿನ ಅರ್ಜುಣಗಿ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜುಗಳಲ್ಲಿ ಕೆಳಕಂಡ ವಿಷಯಗಳ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಗುಂಡಗುರ್ತಿ ಮೊರಾರ್ಜಿ ದೇಸಾಯಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರು ತಿಳಿಸಿದ್ದಾರೆ.

ಗುಂಡಗುರ್ತಿ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜಿನಲ್ಲಿ ಕನ್ನಡ, ಭೌತಶಾಸ್ತ್ರ, ರಸಾಯನಶಾಸ್ತ್ರ ವಿಷಯಗಳ ತಲಾ ಒಂದು ಅತಿಥಿ ಉಪನ್ಯಾಸಕರ ಹುದ್ದೆಗೆ, ನಾಗಾವಿ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜಿನಲ್ಲಿ ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರ ತಲಾ ಒಂದು ಅತಿಥಿ ಉಪನ್ಯಾಸಕರ ಹುದ್ದೆಗೆ ಹಾಗೂ ಅರ್ಜುಣಗಿ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ, ಇಂಗ್ಲೀಷ, ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ ಹಾಗೂ ಜೀವಶಾಸ್ತ್ರ ತಲಾ ಒಂದು ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳು ಎಂ.ಎ., ಬಿ.ಇಡ್. ಹಾಗೂ ಎಮ್.ಎಸ್ಸಿ., ಬಿ.ಇಡ್. ವಿದ್ಯಾರ್ಹತೆ ಹೊಂದಿರಬೇಕು. ಮೂರು ವರ್ಷಗಳ ಅನುಭವ ಹೊಂದಿರಬೇಕು.

ಪ್ರತಿ ಮಾಹೆ 18150 ರೂ.ಗಳ ವೇತನ ನೀಡಲಾಗುತ್ತದೆ. ನಿಗದಿತ ಅರ್ಜಿನಮೂನೆಯನ್ನುಗುಂಡರ್ಗುತಿ, ನಾಗಾವಿ, ಅರ್ಜುಣಗಿಗಳಲ್ಲಿರುವ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜುಗಳಿಂದ ಪಡೆದು ಭರ್ತಿ ಮಾಡಿ 2025ರ ಮೇ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9902568306, 9483408131, 9449906618 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ವಿದ್ಯುತ ಮಾರ್ಗದ ಸಮೀಪ ಹೋಗದಂತೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.22-ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ ಗಣಗಾಪುರ(ನಿಂಬರ್ಗಾ) ಗ್ರಾಮದಲ್ಲಿ ಹೊಸದಾಗಿ ಸ್ಥಾಪಿಸಲಾಗುತ್ತಿರುವ ಉದ್ದೇಶಿತ 2*100 ಎಮ್.ವಿ.ಎ., 220/110/11ಕೆ.ವ್ಹಿ ವಿದ್ಯುತ್ ಸ್ವೀಕರಣಾ ಕೇಂದ್ರದ ಯೋಜನೆಯ ಭಾಗವಾದ ಹಾಲಿ ಇರುವ 400/220ಕೆ.ವ್ಹಿ ಘರತಾಬಾದ ವಿದ್ಯುತ್ ಸ್ವೀಕರಣಾ ಕೇಂದ್ರದಿಂದ ಪ್ರಸ್ತುತವಿರುವ 220ಕೆ.ವ್ಹಿ ಕಪನೂರ-ಶಹಾಪೂರ ವಿದ್ಯುತ್ ಮಾರ್ಗಕ್ಕೆ 10.207 ಕಿ.ಮೀ ಉದ್ದದ 220ಕೆ.ವ್ಹಿ ಡಬಲ್ ಸರ್ಕ್ಯೂಟ್ ವಿದ್ಯುತ್ ಪ್ರಸರಣ ಮಾರ್ಗದ ನಿರ್ಮಾಣದ ಕಾಮಗಾರಿಯನ್ನು ಕೈಗೊಂಡಿದ್ದು, ಈ ವಿದ್ಯುತ್ ಪ್ರಸರಣ ಮಾರ್ಗವು ನದಿಸಿಣ್ಣೂರ, ಬಳವಾಡ ಮತ್ತು ಹೊನ್ನಕಿರಣಗಿ ಹಳ್ಳಿಗಳ ಸರಹದ್ದಿನಲ್ಲಿ ಹಾದು ಹೋಗಿದ್ದು, ಈ ವಿದ್ಯುತ್ ಪ್ರಸರಣ ಮಾರ್ಗಗಳಲ್ಲಿ 2025ರ ಮೇ 20 ರಂದು ಅಥವಾ ತದನಂತರ ಈ ವಿದ್ಯುತ್ ಲೈನಿನಲ್ಲಿ ವಿದ್ಯುತ್ ಪ್ರವಹಿಸಲಾಗುತ್ತದೆ ಎಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಯೋಜನಾ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಕಾರಣ ವಿದ್ಯುತ್ ಗೋಪುರಕ್ಕೆ ಹತ್ತುವುದಾಗಲಿ ಅಥವಾ ಇದಕ್ಕೆ ದನಕರುಗಳನ್ನು ಕಟ್ಟುವುದಾಗಲಿ, ಹಸಿರು ಟೊಂಗೆಗಳನ್ನು ವಿದ್ಯುತ್ ಲೈನಿಗೆ ಎಸೆಯುವುದು ಪ್ರಾಣಾಪಾಯವಾಗುವುದು. ಆದ್ದರಿಂದ ಸಾರ್ವಜನಿಕರು ಮೇಲ್ಕಾಣಿಸಿದವುಗಳನ್ನು ಮಾಡಬಾರದು. ಒಂದು ವೇಳೆ ಇಂತಹ ಕೃತ್ಯಗಳನ್ನು ಯಾರಾದರೂ ಎಸಗಿದಲ್ಲಿ ಮುಂದೆ ಒದಗಬಹುದಾದ ಅಪಾಯಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜವಾಬ್ದಾರಿಯಾಗುವುದಿಲ್ಲಾ ಎಂದು ಅವರು ತಿಳಿಸಿದ್ದಾರೆ.

# ಸಚಿವ ಪ್ರಿಯಾಂಕ್ ಖರ್ಗೆ ಅವರ ವಿರುದ್ಧ ಹಗುರವಾಗಿ ಮಾತನಾಡಿದ ಚಲವಾದಿ ಹೇಳಿಕೆ ಶಿವಕುಮಾರ್ ತಳವಾರ್ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ : ಚಲವಾದಿ ನಾರಾಯಣಸ್ವಾಮಿ ಅವರು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ನಂತರ ಖರ್ಗೆ ಸಾಹೇಬರ ಕುಟುಂಬದ ವಿರುದ್ಧ ಮಾತನಾಡುವುದನ್ನು ಬಿಟ್ಟು ಬೇರೆ ಯಾವ ವಿಷಯವನ್ನು ಕೂಡ ಮಾತನಾಡುತ್ತಿಲ್ಲ ಇದರ ಅರ್ಥ ಉದ್ದೇಶಪೂರ್ವಕವಾಗಿ ಚಲವಾದಿ ನಾರಾಯಣ ಸ್ವಾಮಿಯವರನ್ನ ವಿಧಾನ ಪರಿಷತ್ತಿನ ಸದಸ್ಯರನ್ನಾಗಿ ಮಾಡಿ ವಿಧಾನಪರಿಷತ್ತಿನ ವಿರೋಧಪಕ್ಷದ ನಾಯಕರನ್ನಾಗಿ ಮಾಡಿರುವದರ ಖರ್ಗೆ ಕುಟುಂಬದ ವಿರುದ್ಧ ಮಾತನಾಡುವುದಕ್ಕೆ ಅವರನ್ನ ನೇಮಕ ಮಾಡಿದ್ದಾರೆ ಎಂದು ಮೇಲ್ನೋಟಕ್ಕೆ ಕಾಣುತ್ತದೆ ಸಚಿವ ಪ್ರಿಯಾಂಕ ಖರ್ಗೆ ಅವರು ದೇಶದ ಪ್ರಧಾನಿ ಮಂತ್ರಿಗಳ ಬಗ್ಗೆ ಹಗುರವಾಗಿ ಎಂದು ಮಾತನಾಡಿಲ್ಲ ದೇಶದ ನಮ್ಮ ಪ್ರಧಾನಿ ಮಂತ್ರಿಗಳಿಗೆ ಈ ದೇಶದ ಒಬ್ಬ ನಾಗರಿಕರಾಗಿ ಹಲವು ಪ್ರಶ್ನೆಗಳನ್ನು ಕೇಳಿದ್ದಾರೆ ಪ್ರಶ್ನೆಗಳನ್ನ ಕೇಳಿದರೆ ನಾಯಿಗೆ



ಹೋಲಿಕೆ ಮಾಡೋದು ಅಥವಾ ಬೇರೆ ಅವಚ್ಚೆ ಶಬ್ದಗಳನ್ನು ಬಳಸುವುದು ಇದು ಸರಿಯಲ್ಲ ಸಚಿವ ಪ್ರಿಯಾಂಕ್ ಖರ್ಗೆ ಅವರು ಬ್ರಷ್ಟಾಚಾರ ರಹಿತ ಮತ್ತು ರಾಜ್ಯದಲ್ಲಿ ಉತ್ತಮವಾಗಿ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿದ್ದಾರೆ ಈ ಹಿಂದೆ ಕರ್ನಾಟಕ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿ ಇದ್ದಂತ ಸಂದರ್ಭದಲ್ಲಿ ಬಿಜೆಪಿ ಸರ್ಕಾರದ ವೈಫಲ್ಯಗಳನ್ನು ಪಿ ಎಸ್ ಐ ಹಗರಣ ಮತ್ತು ಬಿಟ್ ಕಾಯಿನ್ ಹಗರಣ ಅನೇಕ ಹಗರಗಳನ್ನ ರಾಜ್ಯದ ಜನತೆಗೆ ತಲುಪಿಸುವ ಪ್ರಾಮಾಣಿಕ ಪ್ರಯತ್ನವನ್ನು ಸಚಿವ ಪ್ರಿಯಾಂಕ್ ಅವರು ಮಾಡಿದರು ಆ ಉದ್ದೇಶವನ್ನು ಇಟ್ಟುಕೊಂಡು ಇವತ್ತು ಬಿಜೆಪಿ ನಾಯಕರಿಗೆ ಚಲವಾದಿ ನಾರಾಯಣಸ್ವಾಮಿ ಅಂತವರನ್ನ ಬಿಟ್ಟು ಖರ್ಗೆ ಸಾಹೇಬರ ಕುಟುಂಬದ ವಿರುದ್ಧ ಹಗುರವಾಗಿ ಮಾತನಾಡುವುದಕ್ಕೆ ಬಿಟ್ಟಿದ್ದಾರೆ.

ಚಲವಾದಿ ನಾರಾಯಣ ಸ್ವಾಮಿಯವರು ಪದೇ ಪದೇ ಖರ್ಗೆ ಸಾಹೇಬರ ಕುಟುಂಬದ ಬಗ್ಗೆ ಇದೇ ರೀತಿ ಹೇಳಿಕೆಗಳನ್ನು ಕೊಟ್ಟರೆ ಮಾಜದಿಂದ ಉಗ್ರವಾದ ಹೋರಾಟವನ್ನುಮಾಡಬೇಕಾಗುತ್ತದೆ ಎಂದು ಶಿವಕುಮಾರ್ ತಳವಾರ್ ಆಕ್ರೋಶ ವ್ಯಕ್ತಪಡಿಸಿದ್ದಾರು . ನಿಮ್ಮ ಜವಾಬ್ದಾರಿಯನ್ನ ಸಮರ್ಪಕವಾಗಿ ರಾಜ್ಯದ ಪರವಾಗಿ ಕೆಲಸವನ್ನು ಮಾಡಿ ಅದನ್ನು ಬಿಟ್ಟು ನೀವು ಖರ್ಗೆ ಸಾಹೇಬರ ಕುಟುಂಬದ ಬಗ್ಗೆ ಹಗುರವಾಗಿ ಮಾತನಾಡಿದರೆ ಅದು ಸರಿ ಇರುವುದಿಲ್ಲ ಎಂದು ಈ ಮೂಲಕ ಕಾಂಗ್ರೆಸ್ ಯುವ ಮುಖಂಡ ನಿಜಗುಣ ದೋರನಹಳ್ಳಿ, ಅಲ್ಲಾಪಟೇಲ್ ಪೋಲಿಸ್ ಪಾಟೀಲ್, ರಾಮಣ್ಣ ಸಾದ್ಯಾಪೂರ , ಪತ್ರಿಕಾ ಪ್ರಕಟಣೆ ಮೂಲಕ ಎಚ್ಚರಿಕೆಯನ್ನು ಕೋಟ್ಟಿದ್ದಾರೆ ಈ ಸಂದರ್ಭದಲ್ಲಿ ಮಲ್ಲಣಗೌಡ ತಿಪ್ಪನಹಳ್ಳಿ, ಮಹೇಶ ಮಡಿವಾಳಕರ್, ರಾಮಣಗೌಡ ಹುಲಕಲ್, ಗಿರಿಮಲ್ಲಪ್ಪ, ಮಲ್ಲಾ ಆದಮ್ ಪಟೇಲ್, ಉಪಸ್ಥಿತರಿದ್ದರು.

# ಜೆಸ್ಕಾಂ: ಇಂದು ನಗರದ ವಿವಿಧಡೆ ವಿದ್ಯುತ್ ವ್ಯತ್ಯಯ

ರಾಯಚೂರು ಮೇ.22: ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆಯ ಉಪ ವಿಭಾಗ-1ರ 11 ಕೆವಿ ಮಾರ್ಗ ಹಾಗೂ ಜಿ.ಒ.ಎಸ್ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಮೇ.23ರ ಬೆಳಿಗ್ಗೆ 11ಗಂಟೆಯಿಂದ ಮಾಧ್ಯಾಹ್ನ 2ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ ಸ್ಟೇಷನ್ ಏರಿಯಾ, ಗುಡ್‌ಶೆಡ್ ಏರಿಯಾ, ಆಶಾಪೂರು ಸರ್ಕಲ್, ಕೆ.ಕೆ.ರೆಡ್ಡಿ ಫಂಕ್ಷನ್ ಹಾಲ್, ಎಫ್.ಸಿ.ಐ ಗೋಡಾನ್, ಅಮರೇಶ್ವರ ಕಾಲೋನಿ, ಆರ್. ಆರ್ ಕಾಲೋನಿ, ಪದ್ಮಾವತಿ ಕಾಲೋನಿ, ರಾಜಮಾತಗುಡಿ, ಆಫಿಸರ್ಸ್ ಕಾಲೋನಿ, ಇಂಜಿನೀರ್ಸ್ ಕಾಲೋನಿ, ಪವನ್ ಲೇಔಟ್, ರಾಯಲ್ ಫೋರ್ಟ್, ಬಿ.ಸಿ.ಎಮ್ ಹಾಸ್ಟಲ್, ರಾಧಕೃಷ್ಣ ಫಂಕ್ಷನ್ ಹಾಲ್ ಸೇರಿದಂತೆ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧಡೆ ವಿದ್ಯುತ್ ವ್ಯತ್ಯಯ

ರಾಯಚೂರು ಮೇ.22 (ಕರ್ನಾಟಕ ವಾರ್ತೆ): ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆಯ ಉಪ ವಿಭಾಗ-1ರ 11 ಕೆವಿ ಮಾರ್ಗ ಹಾಗೂ ಜಿ.ಒ.ಎಸ್ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಮೇ.23ರ ಬೆಳಿಗ್ಗೆ 11ಗಂಟೆಯಿಂದ ಮಾಧ್ಯಾಹ್ನ 2ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ. ಅಂದು ಬೆಳಿಗ್ಗೆ ಸ್ಟೇಷನ್ ಏರಿಯಾ, ಗುಡ್‌ಶೆಡ್ ಏರಿಯಾ, ಆಶಾಪೂರು ಸರ್ಕಲ್, ಕೆ.ಕೆ.ರೆಡ್ಡಿ ಫಂಕ್ಷನ್ ಹಾಲ್, ಎಫ್.ಸಿ.ಐ ಗೋಡಾನ್, ಅಮರೇಶ್ವರ ಕಾಲೋನಿ, ಆರ್.ಆರ್ ಕಾಲೋನಿ, ಪದ್ಮಾವತಿ ಕಾಲೋನಿ, ರಾಜಮಾತಗುಡಿ, ಆಫಿಸರ್ಸ್ ಕಾಲೋನಿ, ಇಂಜಿನೀರ್ಸ್ ಕಾಲೋನಿ, ಪವನ್ ಲೇಔಟ್, ರಾಯಲ್ ಫೋರ್ಟ್, ಬಿ.ಸಿ.ಎಮ್ ಹಾಸ್ಟಲ್, ರಾಧಕೃಷ್ಣಫಂಕ್ಷನ್ ಹಾಲ್ ಸೇರಿದಂತೆ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

## ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಜೋಳ ಖರೀದಿ ಮಾರ್ಪಾಡು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 22-2024-25 ನೇ ಸಾಲಿನ ಮುಂಗಾರು ಋತುವಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಜೋಳ ಖರೀದಿ ಪ್ರಕ್ರಿಯೆ ಮಾರ್ಪಾಡು ಮಾಡಲಾಗಿದೆ.

ಸರ್ಕಾರದ ಆದೇಶದಂತೆ ರಾಜ್ಯದಲ್ಲಿ 1 ಲಕ್ಷ ಮೆಟ್ರಿಕ್ ಟನ್ ಜೋಳ ಖರೀದಿಸುವ ಬದಲಾಗಿ 1.25 ಲಕ್ಷ ಮೆಟ್ರಿಕ್ ಟನ್ ಜೋಳ ಖರೀದಿಸುವುದಾಗಿ ಆದೇಶಿಸಿದೆ ಹಾಗೂ ಬಿಳಿಜೋಳ ಮಾರ್ಗಸೂಚಿಯಂತೆ ಪ್ರತಿ ರೈತರಿಂದ ಪ್ರತಿ ಎಕರೆಗೆ 20 ಕ್ವಿಂಟಾಲ್ ನಂತೆ ಗರಿಷ್ಟ 150 ಕ್ವಿಂಟಾಲ್ ಬಿಳಿಜೋಳವನ್ನು ಖರೀದಿಸುವ ಬದಲಾಗಿ, ಪ್ರತಿ ರೈತರಿಂದ ಪ್ರತಿ ಎಕರೆಗೆ 10 ಕ್ವಿಂಟಾಲ್ ನಂತೆ ಗರಿಷ್ಠ 150 ಕ್ವಿಂಟಾಲ್ ಬಿಳಿಜೋಳ ಖರೀದಿಸಲಾಗುವುದು ಎಂದು ಮಾರ್ಪಾಡಿಸಿ ಆದೇಶಿಸಲಾಗಿದೆ.

ಅದರಂತೆ ಎನ್‌ಐಸಿ (NIC) ತಂತ್ರಾಂಶದಲ್ಲಿ ಮಾರ್ಪಾಡು ಆದ ಕೂಡಲೇ ಖರೀದಿ ಪ್ರಕ್ರಿಯೆ ಆರಂಭಿಸಲಾಗುವುದು. ಹಾಗಾಗಿ ಜಿಲ್ಲೆಯಲ್ಲಿ ಈಗಾಗಲೇ ನೋಂದಣಿ ಮಾಡಿಕೊಂಡ ರೈತರು ಕೂಡಲೇ ನೋಂದಾಯಿತ ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ಜೋಳ ಮಾರಾಟ ಮಾಡಿ ಶೀಘ್ರವಾಗಿ ಗ್ರೇನ್ ವೋಚರ್ ಪಡೆದುಕೊಳ್ಳಬೇಕು.

ಮುಂಗಾರು ಜೋಳವನ್ನು ನೋಂದಣಿ ಮಾಡಿದ ರೈತರು ಶೀಘ್ರವಾಗಿ ಜೋಳ ಮಾರಾಟ ಮಾಡುವುದು ಅಗತ್ಯವಾಗಿದ್ದು, ರೈತರು ಮಾರಾಟ ಮಾಡುವ ಜೋಳವನ್ನು ಜೋಳ ಉಪಯೋಗಿಸುವ ಜಿಲ್ಲೆಗಳಿಗೆ ಪಡಿತರ ವಿತರಣೆ ಹಂಚಿಕೆಗೆ ನೀಡಲಾಗುವುದು. ಈ ನಿಟ್ಟಿನಲ್ಲಿ ಶೀಘ್ರವಾಗಿ ನೋಂದಾಯಿತ ರೈತರು ಜೋಳವನ್ನು ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡುವ ಮೂಲಕ ಸರ್ಕಾರದ ಈ ಯೋಜನೆಯ ಪ್ರಯೋಜನ ಪಡೆದುಕೊಳ್ಳಬೇಕು.

ಬೆಂಬಲ ಬೆಲೆ ಯೋಜನೆ ಬಗ್ಗೆ ರೈತರಿಗೆ ಯಾವುದೇ ಸಮಸ್ಯೆಗಳಿದ್ದರೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನಿಯಮಿತದ ಶಾಖಾ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಜಿಲ್ಲಾ ವ್ಯವಸ್ಥಾಪಕರು ಹಾಗೂ ಆಯಾ ತಾಲ್ಲೂಕಿನ ತಹಸಿಲ್ದಾರ್, ಕೃಷಿ ಅಧಿಕಾರಿ, ಎ.ಪಿ.ಎಂ.ಸಿ ಕಾರ್ಯದರ್ಶಿ ಅಥವಾ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬೇಕು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗಣಿ ಪ್ರಭಾವಕ್ಕೊಳಗಾದ ವಲಯಗಳಿಗೆ ಸಮಗ್ರ ಪರಿಸರ ಯೋಜನೆಯಡಿ ಕಾರ್ಯಕಾರಿ ಸಮಿತಿ ರಚನೆ

## ಜಾಣೆಕುಂಟೆ-ವೇಣಿ ವೀರಾಪುರ ಹಾಗೂ ಹಲಕುಂದಿ-ಬೆಳಗಲ್ಲು ಎರಡು ಯೋಜನೆ ಆಯ್ಕೆ: ಮಹೇಶ್ ಕುಮಾರ್




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 22-ರಾಜ್ಯದಲ್ಲಿ ಗಣಿಗಾರಿಕೆ ಪ್ರಭಾವಕ್ಕೆ ಒಳಗಾದ ವಲಯಗಳಿಗೆ ಸಮಗ್ರ ಪರಿಸರ ಯೋಜನೆಯನ್ನು ನಾಲ್ಕು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಅದರಲ್ಲಿ ಬಳ್ಳಾರಿ ಜಿಲ್ಲೆಯು ಕೂಡ ಒಂದಾಗಿದೆ. ಬಳ್ಳಾರಿ ತಾಲ್ಲೂಕಿನ ಜಾಣೆಕುಂಟೆ-ವೇಣಿ ವೀರಾಪುರ ಹಾಗೂ ಹಲಕುಂದಿ-ಬೆಳಗಲ್ಲು ಎರಡು ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಗ್ರಾಮ್ಸ್ ಸಂಸ್ಥೆಯ ಮಹೇಶ್ ಕುಮಾರ್ ಹೇಳಿದರು.

ಜಲಾನಯನ ಅಭಿವೃದ್ಧಿ ಇಲಾಖೆ, ಕೃಷಿ ಇಲಾಖೆ ಹಾಗೂ ಗ್ರಾಮ್ಸ್ ಸಂಸ್ಥೆ ಲಿಂಗಸಗೂರು ಇವರ ಸಹಯೋಗದಲ್ಲಿ ಬಳ್ಳಾರಿ ತಾಲೂಕಿನ ಹಲಕುಂದಿ-ಬೆಳಗಲ್ಲು ಉಪಜಲಾನಯನ ಯೋಜನಾ ವ್ಯಾಪ್ತಿಯಲ್ಲಿ ಬರುವ ಹಲಕುಂದಿ ಗ್ರಾಮ ಪಂಚಾಯಿತಿಯ ಸಭಾಂಗಣದಲ್ಲಿ ಬುಧವಾರ ಜರುಗಿದ ಗಣಿ ಪ್ರಭಾವಕ್ಕೆ ಒಳಗಾದ ವಲಯಗಳಿಗೆ ಸಮಗ್ರ ಪರಿಸರ ಯೋಜನೆಯ ಕಾರ್ಯಕಾರಿ ಸಮಿತಿ ರಚನೆ ಸಭೆಯಲ್ಲಿ ಅವರು ಮಾತನಾಡಿದರು.

ಹಲಕುಂದಿ ಬೆಳಗಲ್ಲು ಉಪಜಲಾನಯನ ಯೋಜನಾ ವ್ಯಾಪ್ತಿಯಲ್ಲಿ ಸುಮಾರು 4,196 ಹೇಕ್ಟರ್ ಪ್ರದೇಶಗಳಲ್ಲಿ ಈ ಯೋಜನೆಯ ಕಾರ್ಯನಿರ್ವಹಿಸುತ್ತಿದ್ದು, ಸುಮಾರು 6 ಹಳ್ಳಿಗಳು ಈ ಯೋಜನೆಯಡಿ ಬರುತ್ತವೆ ಎಂದು ತಿಳಿಸಿದರು. ಮುಖ್ಯವಾಗಿ ಈ ಯೋಜನೆಯಡಿ ಮಣ್ಣು ಮತ್ತು ನೀರಿನ ಸಂರಕ್ಷಣೆ ಮಾಡಲು ರೈತರ ಜಮೀನುಗಳಿಗೆ ಉಪಚಾರಗಳನ್ನು ಮಾಡುವುದು, ಮಳೆಯ ಹಸಿರುಯುತ ಭೂಮಿಯ ಉತ್ಪಾದಕತೆ ಸಾಮರ್ಥ್ಯ ಹೆಚ್ಚಿಸುವುದಾಗಿದೆ ಎಂದರು.

ಯೋಜನಾ ವ್ಯಾಪ್ತಿಯ ಪ್ರದೇಶದಲ್ಲಿ ಅಂತರ್ಜಲ ಮಟ್ಟ ಪುನಶ್ಚೇತನಗೊಳಿಸುವುದು ಮತ್ತು ನೀರಿನ ಮಟ್ಟ ಸುಧಾರಣೆಯಾಗುವಂತೆ ಕ್ರಮವಹಿಸುವುದು. ಮಣ್ಣು ಮತ್ತು ನೀರಿನ ಸಂರಕ್ಷಣೆಯನ್ನು ಮಾಡುವುದರ ಮುಖಾಂತರ ಮಣ್ಣಿನ ಸವಕಳಿ ತಡೆಗಟ್ಟುವುದು. ಜಾನುವಾರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ಕೃಷಿ ಚಟುವಟಿಕೆಗಳ ಬಳಕೆಗಾಗಿ ಮಳೆ ನೀರು ಕೊಯ್ಲು ರಚನೆಗಳ ಮೂಲಕ ನೀರನ್ನು ಸಂರಕ್ಷಣೆ ಮಾಡುವುದು. ಕೃಷಿ ಉತ್ಪಾದನೆಯನ್ನು ಸುಸ್ಥಿರಗೊಳಿಸುವುದು ಹಾಗೂ ರೈತ ಸಮುದಾಯದ ಜೀವನ ಮಟ್ಟವನ್ನು ಸುಧಾರಣೆ ಮಾಡುವುದಾಗಿದೆ ಎಂದು ತಿಳಿಸಿದರು.

ಮುಖ್ಯವಾಗಿ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಸ್ವಸಹಾಯ ಗುಂಪುಗಳಿಗೆ ತರಬೇತಿ ನೀಡುವುದರ ಮೂಲಕ ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡಲಾಗುವುದು ಮತ್ತು ಆರ್ಥಿಕತೆ ಹೆಚ್ಚಿಸುವ ಕಾರ್ಯ ಮಾಡಲಾಗುತ್ತದೆ ಎಂದು ತಿಳಿಸಿದರು.

ಕೃಷಿ ಅಧಿಕಾರಿ ಬಸವರಾಜ್ ಅವರು ಮಾತನಾಡಿ, ಜಲಾನಯನ ಸಮಿತಿಯು ಈ ಯೋಜನೆಯ ಮೇಲ್ವಿಚಾರಣೆ ಮಾಡಲು ಮತ್ತು ಅಗತ್ಯ ದಾಖಲೆ ನಿರ್ವಹಣೆ ಮಾಡಲು ಕಾರ್ಯನಿರ್ವಹಿಸುತ್ತದೆ ಎಂದು ತಿಳಿಸಿದರು.

ಜಲಾನಯನ ಸಮಿತಿಯು ಗ್ರಾಮ ಪಂಚಾಯಿತಿಗೆ ಒಂದರಂತೆ ಇದ್ದು, ಇದರಲ್ಲಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರೇ ಈ ಸಮಿತಿಯ ಅಧ್ಯಕ್ಷರಾಗಿರುತ್ತಾರೆ ಮತ್ತು ಯೋಜನಾ ವ್ಯಾಪ್ತಿಯ ಗ್ರಾಮಗಳಲ್ಲಿಯ ಇಬ್ಬರು ಚುನಾಯಿತ ಗ್ರಾಮ ಪಂಚಾಯತಿ ಸದಸ್ಯರು ಈ ಸಮಿತಿಗೆ ಸದಸ್ಯರಾಗಿರುತ್ತಾರೆ. ಜೊತೆಗೆ ಸ್ವಸಹಾಯ ಗುಂಪಿನ ಮಹಿಳೆಯರು ಎರಡರಿಂದ ಮೂರು ಜನ ಪ್ರತಿನಿಧಿಗಳು ಮತ್ತು ಬಳಕೆದಾರ ಗುಂಪುಗಳಿಂದ ಮೂರರಿಂದ ನಾಲ್ಕು ಜನ ಪ್ರತಿನಿಧಿಗಳು ಮತ್ತು ಸರಕಾರೇತರ ಸಂಸ್ಥೆ ಪ್ರತಿನಿಧಿಗಳು ಇಬ್ಬರು ಹಾಜರಾಗಿರುತ್ತಾರೆ ಹಾಗೂ ಸಂಬಂಧಿಸಿದ ಕೃಷಿ ಅಧಿಕಾರಿಗಳು ಈ ಒಂದು ಸಮಿತಿಗೆ ಖಜಾಂಚಿ ಅಥವಾ ಕಾರ್ಯದರ್ಶಿಗಳಾಗಿರುತ್ತಾರೆ ಎಂದು ಅವರು ವಿವರಿಸಿದರು.

ಜೊತೆಗೆ ಪ್ರತಿ ವರ್ಷ ಕೂಡ ಶೇ.20ರಷ್ಟು ಕಾರ್ಯಕಾರಿ ಸಮಿತಿ ಸದಸ್ಯರು ಬದಲಾಗುತ್ತಿರುತ್ತಾರೆ. ಶೇ.18ರಷ್ಟು ಪ.ಜಾತಿ ಮತ್ತು ಪ.ಪಂಗಡದ ಸದಸ್ಯರು ಜಲಾನಯನ ಸಮಿತಿಯಲ್ಲಿ ಇರುತ್ತಾರೆ ಎಂದು ತಿಳಿಸಿದರು.

ಬಳಿಕ ಹಲಕುಂದಿ ಕಾರ್ಯಕಾರಿ ಸಮಿತಿಗೆ ಸದಸ್ಯರನ್ನು ಆಯ್ಕೆ ಮಾಡಲಾಯಿತು.

ಸಭೆಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರುಗಳು, ಕೃಷಿ ಇಲಾಖೆಯ ಕೃಷಿ ಅಧಿಕಾರಿಗಳು, ತಾಂತ್ರಿಕ ಅಧಿಕಾರಿಗಳು, ಅನುಷ್ಠಾನ ಸಂಸ್ಥೆಯ ಸಿಇಓ ಮತ್ತು ಉಪಜಲಾನಯನ ಯೋಜನೆಯ ತಂಡದ ನಾಯಕರು, ಐಜಿಎ ಪರಿಣಿತರು, ಜಲಾನಯನ ಸಹಾಯಕರು, ಸ್ವಸಹಾಯ ಗುಂಪಿನ ಮಹಿಳಾ ಸದಸ್ಯರು, ಬಳಕೆದಾರ ಗುಂಪಿನ ರೈತ ಸದಸ್ಯರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

## ಮಗುವಿಗೆ ತಪ್ಪದೇ ದಡಾರ-ರೂಬೆಲ್ಲಾ ಲಸಿಕೆ ಹಾಕಿಸಿ: ಡಾ.ಶರಣಬಸಪ್ಪ ಗಣಜಲಖೇಡ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ22-ನಿರ್ಲಕ್ಷಿಸಿದರೆ ಅಪಾಯಕಾರಿಯಾಗುವ ದಡಾರ ರೋಗ ತಡೆಯಲು ಮಗುವಿನ ವಯಸ್ಸು ಒಂಬತ್ತು ತಿಂಗಳು ತುಂಬಿದನಂತರ ತಪ್ಪದೇ ದಡಾರ-ರೂಬೆಲ್ಲಾ ಲಸಿಕೆ ಹಾಕಿಸಬೇಕು ಎಂದು ಕಲಬುರಗಿ ವಿಭಾಗದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಉಪನಿರ್ದೇಶಕ ಡಾ.ಶರಣಬಸಪ್ಪ ಗಣಜಲಖೇಡ ಅವರು ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಲ್ಲಿ ಬುಧವಾರ ಆಯೋಜಿಸಿದ್ದ ವೈದ್ಯಾಧಿಕಾರಿಗಳ ಜಾಗೃತಿ ಸಭೆಯಲ್ಲಿ ಅವರು ಭಾಗವಹಿಸಿ ಮಾತನಾಡಿದರು.

ಸಾಮಾನ್ಯವಾಗಿ ಬೇಸಿಗೆಯಲ್ಲಿ ಬೆವರುಸಾಲೆಯಿಂದ ದೇಹದ ಮೇಲೆ ನುಚ್ಚುಗುಳ್ಳೆಗಳು ಕಂಡು ಬರುವುದು ಸಹಜ. ದಡಾರ ಸೋಂಕು ಸಹ ನೋಡಲು ಇದೇ ರೀತಿ ಕಂಡು ಬರುತ್ತದೆ. ಮುಂಜಾಗೃತೆಕ್ರಮವಾಗಿ ಯಾವುದೇ ತಪ್ಪು ನಂಬಿಕೆಗಳನ್ನು ನಂಬದೆ ಮಕ್ಕಳಿಗೆ ದಡಾರ- ರೂಬೆಲ್ಲಾ ಲಸಿಕೆ ಹಾಕಿಸಬೇಕು ಎಂದರು.

ಮೇ 26 ರಿಂದ ಒಂದು ವಾರ ಜರಗುವ ವಿಶೇಷ ಲಸಿಕಾ ಕಾರ್ಯಕ್ರಮದಲ್ಲಿ ದಡಾರ ಪ್ರಕರಣಗಳು ಈ ಪೂರ್ವದಲ್ಲಿ ವರದಿಯಾದ ಗ್ರಾಮ, ಬಡಾವಣೆಗಳನ್ನು ಗುರಿಯಾಗಿ-ಟ್ಟುಕೊಂಡು ಸಮುದಾಯದಲ್ಲಿ ಅಮ್ಮ, ತಟ್ಟು, ಗಂಜೀನಿ ಎಂದು ಕರೆಯಲ್ಪಡುವ ದಡಾರ ರೋಗ ಕುರಿತು ಜಾಗೃತಿ ನೀಡಬೇಕು ಎಂದರು.

ಪಾಲಕರು ಸಹ ತಮ್ಮ ಮಕ್ಕಳಿಗೆ 9 ತಿಂಗಳು ತುಂಬಿದ ನಂತರ ಹಾಗೂ ಒಂದುವರೆ ವರ್ಷದ ಅವಧಿಯಲ್ಲಿ ತಪ್ಪದೆ ದಡಾರ ಲಸಿಕೆ ಹಾಕಿಸಲು ಮುಂದಾಗಬೇಕು. ಈ ಕುರಿತು ವ್ಯಾಪಕ ಜಾಗೃತಿ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು ಮಾತನಾಡಿ, ದಡಾರ ವೈರಸ್ ಹೊಂದಿದ ಮಗುವಿನ ಸಂಪರ್ಕಕ್ಕೆ ಬರುವ ಇನ್ನೊಂದು ಮಗುವಿಗೆ ಬರುವ ಸಾಧ್ಯತೆ ಹೆಚ್ಚು ಇದ್ದು, ಕೆಮ್ಮು ಮತ್ತು ಸೀನುವಿಕೆಯಿಂದ ಇನ್ನೊಬ್ಬರಿಗೆ ಹರಡುತ್ತದೆ. ದಡಾರ ಸೋಂಕಿತ ವ್ಯಕ್ತಿಗೆ ಒಡ್ಡಿಕೊಂಡ ಸುಮಾರು 10 ದಿನಗಳ ನಂತರ ದಡಾರದ ಲಕ್ಷಣಗಳು ಸಾಮಾನ್ಯವಾಗಿ ಕಾಣಿಸಿಕೊಳ್ಳುತ್ತವೆ ಎಂದು ತಿಳಿಸಿದರು. ದಡಾರದ ಅತ್ಯಂತ ಪ್ರಮುಖ ಲಕ್ಷಣವೆಂದರೆ ಕೆಂಪು ಬಣ್ಣದ ದದ್ದು(ಗುಳ್ಳೆ). ಆದರೆ ಇದು ಸಾಮಾನ್ಯವಾಗಿ ಮೊದಲ ಲಕ್ಷಣವಲ್ಲ, ಬದಲಾಗಿ ದಡಾರವು ಸಾಮಾನ್ಯವಾಗಿ ಜ್ವರ ತರಹದ ಕಾಯಿಲೆಯಾಗಿ ಪ್ರಾರಂಭವಾಗುತ್ತದೆ. 2 ರಿಂದ 4 ದಿನಗಳವರೆಗೆ ಇರುತ್ತದೆ. ಜ್ವರ, ಆಯಾಸ, ತೀವ್ರ ಕೆಮ್ಮು, ಕಾಂಜಂಕ್ಟಿವಿಟಿಸ್ (ಕೆಂಪು ಕಣ್ಣುಗಳು), ಸ್ರವಿಸುವ ಮೂಗು, ಬಾಯಿಯಲ್ಲಿ ಬಿಳಿ ಚುಕ್ಕೆಗಳು (ಕೊಪ್ಲಿಕ್ ಚುಕ್ಕೆಗಳು ಎಂದು ಕರೆಯಲಾಗುತ್ತದೆ. ಅನಾರೋಗ್ಯದ 3 ರಿಂದ 7 ದಿನಗಳಲ್ಲಿ ದದ್ದು ಕಾಣಿಸಿಕೊಳ್ಳುತ್ತದೆ. ಇದು ಸಾಮಾನ್ಯವಾಗಿ ಕೆಂಪು ಮತ್ತು ಮಚ್ಚೆಯಿಂದ ಕೂಡಿರುತ್ತದೆ, ಆದರೆ ತುರಿಕೆ ಇರುವುದಿಲ್ಲ.

ದಡಾರದ ದದ್ದು ಸಾಮಾನ್ಯವಾಗಿ ತಲೆಯ ಮೇಲೆ ಪ್ರಾರಂಭವಾಗುತ್ತದೆ ಮತ್ತು ನಂತರ ದೇಹದ ಉಳಿದ ಭಾಗಗಳಿಗೆ ಹರಡುತ್ತದೆ. ಇದು ಸಾಮಾನ್ಯವಾಗಿ 4 ರಿಂದ 7 ದಿನಗಳವರೆಗೆ ಇರುತ್ತದೆ. ಒಂದು ವೇಳೆ ನಿರ್ಲಕ್ಷಿಸಿದರೆ ವಾಂತಿ-ಭೇದಿ, ನ್ಯೂಮೋನಿಯಾ ಉಂಟಾಗಿ ಮಗು ಮರಣ ಸಹ ಹೊಂದಬಹುದು, ಈ ಹಿನ್ನಲೆ ಪ್ರಸ್ತುತ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಹೆಚ್ಚುವರಿಯಾಗಿ ಒಂದು ಡೋಸ್ ಲಸಿಕೆ ಹಾಗೂ ಇದರೊಂದಿಗೆ ವಿಟಾಮಿನ್-ಎ ಅನ್ನಾಂಗ ದ್ರಾವಣವನ್ನು ಸಹ ನೀಡಲಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ನಗರ ಪ್ರದೇಶದ ಕೊಳಚೆ ಪ್ರದೇಶಗಳು ಮತ್ತು ಗ್ರಾಮೀಣ ಪ್ರದೇಶ, ವಲಸೆ ಸ್ಥಳಗಳಲ್ಲಿ ಹೆಚ್ಚು ಜಾಗೃತಿ ನೀಡಿ ಲಸಿಕೆ ಹಾಕಿಸಲು ಸೂಚಿಸಿದರು.

ಇದೇ ವೇಳೆ ವಿವಿಧ ರಾಷ್ಟ್ರೀಯ ಕಾರ್ಯಕ್ರಮಗಳ ಕುರಿತು ಸುಧೀರ್ಘ ಚರ್ಚಿಸಿದರು.

ಸಭೆಯಲ್ಲಿ ಡಡಬ್ಲ್ಯೂಹೆಚ್‌ಓ ಸರ್ವೆಕ್ಷಣಾ ವೈದ್ಯಾಧಿಕಾರಿ ಡಾ.ಆರ್.ಎಸ್ ಶ್ರೀಧರ, ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವಿರೇಂದ್ರಕುಮಾರ ಸೇರಿದಂತೆ ತಾಲ್ಲೂಕು ಆರೋಗ್ಯಾಧಿಕಾರಿಗಳು, ಆಡಳಿತ ವೈದ್ಯಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಸರ್ಕಾರಿ ಆದರ್ಶ ವಿದ್ಯಾಲಯ: 6ನೇ ತರಗತಿಗೆ ದಾಖಲಾತಿ ಪ್ರಾರಂಭ

ಬಳ್ಳಾರಿ,ಮೇ 22-ನಗರದ ಈದ್ಗಾ ರಸ್ತೆಯ ಹಿರಿಯಾಳ್ ಕುಡಂ ನ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 2025-26ನೇ ಸಾಲಿಗೆ 6ನೇ ತರಗತಿಗೆ ದಾಖಲಾತಿ ಪ್ರಕ್ರಿಯೆ ಆರಂಭವಾಗಿದೆ ಎಂದು ಶಾಲೆಯ ಮುಖ್ಯೋಪಾಧ್ಯಯರು ತಿಳಿಸಿದ್ದಾರೆ.

ಈಗಾಗಲೇ 6ನೇ ತರಗತಿ ಪ್ರವೇಶ ಪರೀಕ್ಷೆಯ ಮೊದಲನೇ ಸುತ್ತಿನಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳ ದಾಖಲಾತಿ ಮಾಡಿಕೊಳ್ಳಲಾಗುತ್ತಿದ್ದು, ಆಯ್ಕೆಯಾದ ಎಲ್ಲಾ ವಿದ್ಯಾರ್ಥಿಗಳ ಪಾಲಕರ ಮೊಬೈಲ್ ಗೆ ಸಂದೇಶ ಕಳುಹಿಸಲಾಗಿದೆ. ದಾಖಲಾತಿ ಹೊಂದಲು ಮೇ 29 ಕೊನೆಯ ದಿನವಾಗಿದೆ.

**ದಾಖಲೆ:**

ಪ್ರವೇಶಾತಿ ಅರ್ಜಿ, ವರ್ಗಾವಣೆ ಪ್ರಮಾಣ ಪತ್ರ(ಮೂಲ) ಮತ್ತು 2 ಜೆರಾಕ್ಸ್ ಪ್ರತಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಥಿಯ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕ ಜೆರಾಕ್ಸ್ ಪ್ರತಿ, ತಂದೆ-ತಾಯಿಯ ಆಧಾರ್ ಪ್ರತಿ, ಅಂಗವಿಕಲ ವಿದ್ಯಾರ್ಥಿಯಾಗಿದ್ದಲ್ಲಿ ವೈದ್ಯಕೀಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ(ಬೇರೆ ತಾಲ್ಲೂಕಿನವರಿಗೆ ಮಾತ್ರ), 5ನೇ ತರಗತಿ ಅಂಕಪಟ್ಟಿ ಮೂಲ(ಜೆರಾಕ್ಸ್ ಪ್ರತಿ 2), ಪ್ರವೇಶ ಪರೀಕ್ಷೆಯ ಹಾಲ್‌ಟಿಕೇಟ್, ವಿದ್ಯಾರ್ಥಿಯ ಆರೋಗ್ಯ ಕಾರ್ಡ್, ಇತ್ತೀಚಿನ 4 ಭಾವಚಿತ್ರ, ಮೊಬೈಲ್ ಸಂ-ಖ್ಯೆ, ಪಡಿತರ ಜೆರಾಕ್ಸ್ ಪ್ರತಿ ಮತ್ತು ಭಾಗ್ಯಲಕ್ಷ್ಮೀ ಬಾಂಡ್ ಪ್ರತಿ(ವಿದ್ಯಾರ್ಥಿನಿಯರಿಗೆ ಮಾತ್ರ).

ಆಯ್ಕೆಯಾದ ವಿದ್ಯಾರ್ಥಿಗಳು ನಿಗದಿತ ದಿನಾಂಕ ಮತ್ತು ಸಮಯದೊಳಗೆ ಪೂರಕ ದಾಖಲೆಗಳೊಂದಿಗೆ ಶಾಲೆಗೆ ಹಾಜರಾಗಿ ದಾಖಲಾತಿ ಹೊಂದಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿರುಗುಪ್ಪ: ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 22-ಸಿರುಗುಪ್ಪ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ತೆಕ್ಕಲಕೋಟೆ ಹಾಗೂ ರಾವಿಹಾಳು ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ನಿಲಯಗಳಿಗೆ 2025-26ನೇ ಸಾಲಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿ ನಿಲಯಗಳಿಗೆ ಸೇರಬಯಸುವ 05ನೇ ತರಗತಿಯಿಂದ 10 ತರಗತಿಯ ಪರಿಶಿಷ್ಟ ವರ್ಗದ ಆಸಕ್ತ ವಿದ್ಯಾರ್ಥಿಗಳು ಆನ್‌ಲೈನ್ ಜಾಲತಾಣ https://shp.karnataka.gov.in/ ಭೇಟಿ ನೀಡಿ ಅರ್ಜಿ ಸಲ್ಲಿಸಿ ಪೂರಕ ದಾಖಲೆಗಳೊಂದಿಗೆ ಸಿರುಗುಪ್ಪ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ಸಂಬಂಧಿಸಿದ ವಿದ್ಯಾರ್ಥಿ ನಿಲಯಕ್ಕೆ ಸಲ್ಲಿಸಬೇಕು ಎಂದು ಸಿರುಗುಪ್ಪ ತಾಲ್ಲೂಕು ಪರಿಶಿಷ್ಟವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ 23 ರಂದು ಭಾರತ ಸುಗಮ್ಯ ಯಾತ್ರಾ ಅರಿವು ಮೂಡಿಸುವ ಜಾಥಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ22-ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆವತಿಯಿಂದ ಮೇ 23 ರಂದು ಬೆಳಿಗ್ಗೆ 09 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಅವರಣದಲ್ಲಿ ಭಾರತ ಸುಗಮ್ಯ ಯಾತ್ರಾ ಅರಿವು ಮೂಡಿಸುವ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಆಸಕ್ತ ವಿಶೇಷಚೇತನರು ಭಾಗವಹಿಸಬೇಕು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ಸಚಿವ ಖರ್ಗೆ ಅವರು ಬಗ್ಗೆ ಹಗುರವಾಗಿ ಮಾತನಾಡಿದ ಛಲವಾದಿ ನಾರಾಯಣಸ್ವಾಮಿ ಕ್ಷಮೆಯಾಸಿಸಲಿ ಜಮಾದಾರ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಸಚಿವ ಪ್ರಿಯಾಂಕ್ ಖರ್ಗೆ ಅವರ ಬಗ್ಗೆ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಕೆಟ್ಟದಾಗಿ ಮಾತನಾಡಿದ್ದು, ಇದನ್ನು ಸಹಿಸಲಾಗುವುದಿಲ್ಲ ಎಂದು ಕೆಪಿಸಿಸಿ ಸಂಯೋಜಕ ಹಾಗೂ ಕೆಪಿಸಿಸಿ ಕಿಸಾನ್ ಘಟಕದ ಕಾರ್ಯದರ್ಶಿ ರಾಜ್ ಮೈನುದ್ದಿನ್ ಜಮಾದಾರ ದೋರನಳ್ಳಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಒಬ್ಬ ಸಚಿವರ ಬಗ್ಗೆ ಹಗುರವಾಗಿ ಮಾತನಾಡುವ ಛಲವಾದಿ ನಾರಾಯಣಸ್ವಾಮಿ ಅವರು, ಸೌಜನ್ಯವನ್ನು ಮೀರಿ ಟೀಕಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರು ಪ್ರಧಾನಮಂತ್ರಿಗಳ ಬಗ್ಗೆ ಮಾತನಾಡಬಾರದು ಎಂಬುದು ಇವರ ವಾದವಾಗಿದೆ. ಪ್ರಜಾಪ್ರಭುತ್ವದಲ್ಲಿ ಎಲ್ಲರಿಗೂ ಮಾತನಾಡುವ ಸ್ವಾತಂತ್ರ ಇದೆ ಆದರೆ ಬಿಜೆಪಿಯವರ ಬಗ್ಗೆ ಮಾತನಾಡಬಾರದು ಆದರೆ ಬಿಜೆಪಿಯವರು ಕಾಂಗ್ರೆಸ್ ಸಚಿವರಿಗೆ ಹಗುರವಾಗಿ ಮಾತನಾಡಬಹುದೇ? ಎಂದು ಅವರು ಪ್ರಶ್ನಿಸಿದ್ದಾರೆ.

ಟೀಕೆಗಳನ್ನು ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಬದಲಿಗೆ ಟೀಕೆ ಮಾಡಿದವರಿಗೆ ಹಗುರವಾಗಿ ಮಾತನಾಡುವುದು ತರವಲ್ಲ ಎಂದು ಅವರು ಹೇಳಿದ್ದಾರೆ.

ಇಂತಹ ಕೆಟ್ಟ ಸಂಸ್ಕೃತಿಯನ್ನು ಕೈಬಿಡಬೇಕು ಸಚಿವರೊಬ್ಬರಿಗೆ ಕೆಟ್ಟದಾಗಿ ನಿಂದಿಸುವುದನ್ನು ಬಿಡಬೇಕು ಇಲ್ಲವಾದಲ್ಲಿ ಕಾಂಗ್ರೆಸ್ ತಕ್ಕ ಪಾಠ ಕಲಿಸಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

## ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ನಡೆದ ಕುಂಭಾಭಿಷೇಕ -ವಿಗ್ರಹ ಪ್ರತಿಷ್ಠಾಪನೆ



ಮಲ್ಲಮ್ಮ ನುಡಿ ವಾರ್ತೆ


ಬಳ್ಳಾರಿ, ಮೇ.22: ಬಳ್ಳಾ-ರಿಯ ಶ್ರೀ ರಾಘವೇಂದ್ರ ಕಾಲೋನಿ ಎರಡನೇ ಹಂತದಲ್ಲಿರುವ ಶ್ರೀ ಅಯ್ಯಪ್ಪ ಸ್ವಾಮಿ ದೇವಾಲಯ ನಿರ್ಮಾಣವಾಗಿ 12 ವರ್ಷವಾಗಿರುವ ಸುಸಂದರ್ಭದಲ್ಲಿ ಕುಂಭಾಭಿಷೇಕ, ಶ್ರೀ ವಾಸವಿ ಪೀಠ ಬೆಂಗಳೂರು ಸ್ವಾಮಿಗಳಾದ "ಶ್ರೀ ಸಚಿದಾನಂದ ಸರಸ್ವತಿ ಸ್ವಾಮೀಜಿ ಅವರ ನೇತೃತ್ವದಲ್ಲಿ ಶ್ರೀರಂಗಪಟ್ಟಣ ದಿಂದ ಬಂದ 30 ಸ್ವಾಮಿಗಳು ಎಲ್ಲರು ಸೇರಿ ಬಹಳ ವಿಜೃಂಭಣೆಯಿಂದ ಈ ಕಾರ್ಯಕ್ರಮವನ್ನು ನಡೆಸಲಾಯಿತು. ಮೇ 17.ರಂದು ಬೆಂಗಳೂರಿನ "ಶ್ರೀ ಲಲಿತ ಕಲಾ ನಾಟ್ಯಕಲ್ಪ ಅಕಾಡೆಮಿ " ಇವರಿಂದ ಅಯ್ಯಪ್ಪ ಸ್ವಾಮಿ ಚರಿತೆಯನ್ನು ನೃತ್ಯ ರೂಪದಲ್ಲಿ ನ ಭೂತೋ ನ ಭವಿಷ್ಯತಿ ಎನ್ನುವ ರೀತಿಯಲ್ಲಿ ಪ್ರದರ್ಶಿಸಲಾಯಿತು. ಮೇ.18ರಂದು ನಮ್ಮ ಬಳ್ಳಾರಿಯ ಗಾಯಕಿಂ-ಮಾದ "ಪ್ರಕೃತಿ ರೆಡ್ಡಿ" ಇವರಿಂದ ಭಕ್ತಿಗೀತೆಗಳ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಮತ್ತು ಮೇ.19 ಸೋಮವಾರ ದೇವಾಲಯದ ಪ್ರಾಂಗಣದಲ್ಲಿ ನವಗ್ರಹ ವಿಗ್ರಹಗಳ ಮತ್ತು ದೇವಿ ವಿಗ್ರಹ ಪ್ರತಿಷ್ಠಾಪನವನ್ನು ಮಾಡಲಾಯಿತು. ಇನ್ನುಮುಂದೆ ದೇವಾಲಯಕ್ಕೆ ಬರುವ ಭಕ್ತರಿಗೆಲ್ಲ ಒಂದೇ ಪ್ರಾಂಗಣದಲ್ಲಿ ಶ್ರೀ ಅಯ್ಯಪ್ಪ ಸ್ವಾಮಿ,. ಗಣಪತಿ, ಕುಮಾರಸ್ವಾಮಿ ,ನವಗ್ರಹಗಳು ಮತ್ತು ದೇವಿಯ ದರ್ಶನವನ್ನು ಮಾಡಬಹುದಾಗಿದೆ. ಮತ್ತು ಸಂಜೆ ಶ್ರೀ ಅಯ್ಯಪ್ಪ ಸ್ವಾಮಿ ದೇವಾಲಯದ ಪಡಿ ಪೂಜೆಯನ್ನು ಶಬರಿಮಲೆ ಮೂಲ ಸ್ಥಾನ ಅರ್ಚಕರಾದ "ಶ್ರೀ ಶ್ರೀರಂಗಂ ಶರಣ್ ಮೋಹನ್ "ರವರಿಂದ ಶಬರಿಮಲೆಯಲ್ಲಿ ನಡೆಯುವ ರೀತಿಯಲ್ಲಿಯೇ ಮಾಡಲಾಯಿತು. ಈ ಕಾರ್ಯಕ್ರಮಕ್ಕೆ ಕೇರಳದಿಂದ ಚಂಡ ವಾದ್ಯ ಕೂಡ ತರಿಸಲಾಯಿತು.ಹಾಗೆ 18 ವಿಧವಾದ ಪುಷ್ಪಗಳಿಂದ ವಿಶೇಷ ಪುಷ್ಪಾಭಿಷೇಕವನ್ನು ಶ್ರೀ ಅಯ್ಯಪ್ಪ ಸ್ವಾಮಿ ವಿಗ್ರಹಕ್ಕೆ ಬಹಳ ಸುಂದರವಾಗಿ ಭಕ್ತರ ಕಣ್ಣಿಗೆ ತೃಪ್ತಿಯಾಗುವ ರೀತಿಯಲ್ಲಿ ಮಾಡಲಾಯಿತು. ಈ ಮೂರು ದಿನದ ಕಾರ್ಯಕ್ರಮಗಳಿಗೆ ಬಂದ ಭಕ್ತರಿಗೆಲ್ಲ ದೇವರ ಪ್ರಸಾದವನ್ನು ಏರ್ಪಡಿಸಲಾಯಿತು ಎಂದು ಶ್ರೀ ಶಬರಿ ಅಯ್ಯಪ್ಪ ಟ್ರಸ್ಟ್ ನ ಚೆರ್ಮನ್ ರಾದ ಜಯಪ್ರಕಾಶ್. ಜೆ.ಗುಪ್ತ ಅವರು ತಿಳಿಸಿದ್ದಾರೆ.

ಈ ಕಾರ್ಯಕ್ರಮಕ್ಕೆ ಮಾಜಿ ಶಾಸಕರಾದ ಜಿ. ಸೋಮಶೇಖರ್ ರೆಡ್ಡಿ ರವರು, ಬುಡಾ ಚೇರ್ಮನ್ ಆಂಜನೇಯಲು,ಬುಡಾ ಮಾಜಿ ಚೇರ್ಮನ್ ರಾದ ಮಾರುತಿ ಪ್ರಸಾದ್ ಮತ್ತು ನಗರದ ಪಾಲಿಕೆ ಸದಸ್ಯರಾದ ಮುಂಡ್ಲೂರ್ ಅನೂಪ್ ಕುಮಾರ್, ರಾಯದುರ್ಗ ಮಾಜಿ ಶಾಸಕರಾದ ಕಾಪು ರಾಮಚಂದ್ರ ರೆಡ್ಡಿ ಮತ್ತು ನಗರದ ಪಾಲಿಕಿಯ ಸದಸ್ಯರು ಹಾಗೂ ನಗರದ ಅನೇಕ ಗಣ್ಯರು, ಅಯ್ಯಪ್ಪ ಸ್ವಾಮಿಯ ಭಕ್ತರು ಹಾಗೂ ಬಳ್ಳಾರಿಯ ಗಡಿ ಭಾಗ, ಬೇರೆ ಊರುಗಳಿಂದ ಬಂದ ಅಯ್ಯಪ್ಪ ಭಕ್ತರು, ಈ ಮೂರು ದಿನ ಗಳ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡಿದ್ದರು.

# ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ವಿಜೇತೆ
## ಸಾಹಿತಿ ಬಾನು ಮುಷ್ತಾಕ್ ಅವರಿಗೆ ಕೆಯುಡಬ್ಲ್ಯೂಜೆ ಅಭಿನಂದನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.22:ಪ್ರತಿಷ್ಠಿತ ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿಗೆ ಭಾನವಾಗಿರುವ ಖ್ಯಾತ ಸಾಹಿತಿ ಮತ್ತು ಪತ್ರಕರ್ತೆ ಬಾನುಮುಷ್ತಾಕ್ ಮತ್ತು ಅನುವಾದಕಿ ದೀಪಾ ಭಸ್ತಿ ಅವರನ್ನುಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ಕೆಯುಡಬ್ಲೂಜೆ) ಅಭಿನಂದಿಸಿದೆ.



ಸಣ್ಣಕಥೆಗಳ ಅನುವಾದಿತ ಸಂಕಲನ 'ಹಾರ್ಟ್ ಲ್ಯಾಂಪ್' (ಹೃದಯ ದೀಪ)ಕೃತಿ ಅಂತಿಮ ಸುತ್ತಿಗೆ ಆಯ್ಕೆಯಾದ ಸಂದರ್ಭದಲ್ಲಿಯೇ

ಹಾಸನದಲ್ಲಿ ಬಾನು ಮುಷ್ತಾಕ್ ಅವರನ್ನು ಅಭಿನಂದಿಸಿ ಶುಭ ಕೋರಿದ್ದನ್ನುನೆನಪಿಸಿರುವ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು, ಲಂಡನ್ ನಲ್ಲಿ ಬುಕರ್ ಪ್ರಶಸ್ತಿ ಘೋಷಣೆ ಮಾಡಿದ ಕ್ಷಣ, ಕನ್ನಡಿಗರ ಪಾಲಿಗೆ ಹೆಮ್ಮೆಯ ಅಮೃತ ಘಳಿಗೆಯಾಗಿದೆ ಎಂದು ಶ್ಲಾಘಿಸಿದ್ದಾರೆ.

ಹಾಸನದಿಂದ ಪಿ.ಲಂಕೇಶ್ ಪತ್ರಿಕೆಗೆ ವರದಿಗಾರರಾಗಿದ್ದ ಭಾನುಮುಷ್ತಾಕ್ ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರಾಗಿದ್ದರು. ವಕೀಲರಾಗಿ, ನಗರಸಭೆ ಸದಸ್ಯರಾಗಿ ಹಾಗೂ ಪ್ರಗತಿಪರ ಸಾಹಿತಿಯಾಗಿ ಗುರುತಿಸಿಕೊಂಡವರು. ಅನ್ಯಾಯದ ವಿರುದ್ಧ ಧ್ವನಿ ಎತ್ತಿದವರು. ಸಂಘ ಸಂಸ್ಥೆಗಳಲ್ಲಿ ಸಂಘಟಕಿಯಾಗಿಯೂ ಕೆಲಸ ಮಾಡಿದವರು. ಅವರ ಹೃದಯ ದೀಪ ಕೃತಿ ಬುಕರ್ ಪ್ರಶಸ್ತಿಯನ್ನು ಗೆದ್ದಿರುವುದು ಕನ್ನಡಿಗರ ಹೃದಯ ಗೆದ್ದಂತಾಗಿದೆ. ಹೃದಯ ದೀಪ, ಕನ್ನಡದ ದೀಪವಾಗಿ ಜಗದೆಲ್ಲೆಡೆ ಪ್ರಜ್ವಲಿಸಲಿ ಎಂದು ಅವರು ಶುಭ ಹಾರೈಸಿದ್ದಾರೆ.

ಗಿರೀಶ್ ಕಾಸರವಳ್ಳಿ ನಿರ್ದೇಶನ ಮಾಡಿದ ಹಸೀನಾ ಚಲನಚಿತ್ರ ಕಥೆ ಕೂಡ ಬಾನುಮುಷ್ತಾಕ್ ಅವರ ಹಸೀನಾ ಮತ್ತು ಇತರ ಕಥೆಗಳಿಂದಲೇ ಆಯ್ಕೆ ಮಾಡಿದ್ದು. ಹಸೀನಾ ಚಿತ್ರಕ್ಕೆ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಘೋಷಣೆ ಮಾಡಿದ ಸಂದರ್ಭದಲ್ಲಿ ಇಡೀ ತಂಡವನ್ನು ಹಾಸನಕ್ಕೆ ಆಹ್ವಾನಿಸಿದ್ದ, ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಕಲಾಭವನದಲ್ಲಿ ಏರ್ಪಡಿಸಿದ್ದ ಅದ್ದೂರಿ ಕಾರ್ಯಕ್ರಮದಲ್ಲಿ ಸನ್ಮಾನಿಸಿತ್ತು. ಕೆಲ ಘಟನೆಗಳ ಸಂಕಷ್ಟದ ಸಂದರ್ಭದಲ್ಲಿಯೂ ಬಾನುಮುಷ್ತಾಕ್ ಅವರ ಜೊತೆಗೆ ಬೆಂಬಲವಾಗಿ ನಿಂತಿದ್ದು ಮರೆಯಲಾಗದ ಕ್ಷಣ ಎನ್ನುವುದನ್ನು ಶಿವಾನಂದ ತಗಡೂರು ಅವರು ಸ್ಮರಿಸಿದ್ದಾರೆ.

# ಸೈನಿಕರ, ತ್ಯಾಗ ಬಲಿದಾನ ಸರ್ವರಿಗೂ ಮಾದರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.22: ದೇಶಕ್ಕಾಗಿ ತಮ್ಮ ಸರ್ವಸ್ವವನ್ನು ತ್ಯಾಗ ಮಾಡುವ ಸೈನಿಕರ ಕಾರ್ಯ, ಬದುಕು ನಮ್ಮೆಲ್ಲರಿಗೂ ಮಾದರಿ, ಸ್ಫೂರ್ತಿ ಎಂದು ಅನುಭವ ಮಂಟಪ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಹೇಳಿದರು.

ಪಟ್ಟಣದಲ್ಲಿ ಬುಧವಾರ ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ಭಾರತ ಯಶಸ್ಸುಗಳಿಸಿದ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ನಾಗರಿಕ ತಿರಂಗಾ ಯಾತ್ರೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ದೇಶದ ರಕ್ಷಣೆ, ಸುರಕ್ಷತೆ ನಮ್ಮೆಲ್ಲರ ಪ್ರಥಮ ಆದ್ಯತೆ ಆಗಬೇಕು. ಸಮಯ ಬಂದರೆ ದೇಶಕ್ಕಾಗಿ ಪ್ರಾಣವನ್ನೂ ಅರ್ಪಿಸುವ ದೇಶಭಕ್ತಿಯ ಭಾವ ಎಲ್ಲರಲ್ಲಿ ಬೆಳೆಯಬೇಕು. ದೇಶ ಉಳಿದಾಗ ಮಾತ್ರ ನಾವೆಲ್ಲರೂ ಉಳಿಯಲು ಸಾಧ್ಯ ಎಂದು ಹೇಳಿದರು.

ಆಪರೇಷನ್ ಸಿಂಧೂರ ಮೂಲಕ ಆತಂಕವಾದಿಗಳನ್ನು ಮಟ್ಟ ಹಾಕಿದ ನಮ್ಮ ಸೈನಿಕರ ಶೌರ್ಯ ಜಗತ್ತು ಮೆಚ್ಚುವಂತದ್ದು ಎಂದು ಶ್ಲಾಘಿಸಿದರು.

ಮಾಜಿ ಶಾಸಕ ಪ್ರಕಾಶ ಖಂಡ್ರೆ ಮಾತನಾಡಿ, ವಿದ್ಯಾರ್ಥಿಗಳು ಬಾಲ್ಯದಿಂದಲೇ ದೇಶಪ್ರೇಮದ ಕಿಚ್ಚು ಬೆಳೆಸಿಕೊಂಡು ರಾಷ್ಟ್ರದ ಸೇವೆಗೆ ಸಿದ್ಧರಾಗಬೇಕು. ಅಮಾಯಕ ಜೀವಗಳ ಬಲಿ ತೆಗೆದುಕೊಂಡ ಆತಂಕವಾದಿಗಳಿಗೆ ನಮ್ಮ ದೇಶದ ಹೆಮ್ಮೆ ಸೈನಿಕರು ಮುಟ್ಟಿನೋಡಿಕೊಳ್ಳುವಂತೆ ಉತ್ತರ ನೀಡಿರೋದು ಸಂತಸದ ಸಂಗತಿ ಎಂದು ತಿಳಿಸಿದರು.

ಹಾವಗಿಲಿಂಗೇಶ್ವರ ಶಿವಾಚಾರ್ಯರು ಮಾತನಾಡಿ, ದೇಶದ ರಕ್ಷಣೆಗಾಗಿ ನಾವೆಲ್ಲರೂ ಯಾವುದೇ ರೀತಿಯ ತ್ಯಾಗ ಮತ್ತು ಹೋರಾಟಕ್ಕೂ ಸಿದ್ಧರಾಗುವ ಮನಸ್ಥಿತಿ ಬೆಳೆಸಿಕೊಂಡು ದೇಶಪ್ರೇಮ ಮೆರೆಯಬೇಕು ಎಂದು ಹೇಳಿದರು.

ಮಾಜಿ ಸೈನಿಕ ಶಿವಲಿಂಗಯ್ಯ ಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ

ಮಾತನಾಡಿದರು.

ಭಾರತ ಮಾತೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ಬಳಿಕ ಭಾಲ್ಕೇಶ್ವರ ಮಂದಿರದಿಂದ ಆರಂಭವಾದ ತಿರಂಗಾ ಯಾತ್ರೆ, ಬೊಮ್ಮಗೊಂಡೇಶ್ವರ ವೃತ್ತ, ಬಸ್ ನಿಲ್ದಾಣ, ಅಂಬೇಡ್ಕರ್ ವೃತ್ತದ ಮೂಲಕ ಸಾಗಿ ಮಹಾತ್ಮ ಗಾಂಧಿ ವೃತ್ತದಲ್ಲಿ ಸಮಾವೇಶಗೊಂಡಿತ್ತು.

ಪ್ರಮುಖರಾದ ಈಶ್ವರಸಿಂಗ್ ಠಾಕೂರ್, ವೀರಣ್ಣ ಕಾರಬಾರಿ, ಶಿವರಾಜ ಗಂದಗೆ, ಗೋವಿಂದರಾವ್ ಬಿರಾದರ, ಚನ್ನಬಸವ ಬಳತೆ, ಕಿಶನರಾವ್ ಪಾಟೀಲ ಎನ್. ಡಿ. ಬಗದುರೆ, ತಾನಾಜಿ ರಾಠೋಡ್, ಸೋಮನಾಥಪ್ಪ ಅಷ್ಟುರೆ, ವೆಂಕಟ ಬಿರಾದಾರ, ಬಾಬುರಾವ್ ಧೂಪೆ, ಸುಭಾಷ ಬಿರಾದರ, ಸೂರಜ್ ಸಿಂಗ್ ರಜಪೂತ, ಕೆ. ಡಿ. ಗಣೇಶ, ಕಿರಣ್ ಖಂಡ್ರೆ, ಶಿವಲಿಂಗ ಕುಂಬಾರ, ಶಿವಾನಂದ ದಾಡಗೆ, ದಯಾನಂದ ಪವಾರ್, ಸತೀಶ ಮುದಾಳೆ, ಜಗನ್ನಾಥ ಬಿರಾದರ, ಸಂಜೀವ ಶಿಂಧೆ, ವೈದ್ಯರಾದ ಅಮಿತ್ ಅಷ್ಟೂರೆ, ವಸಂತ ಪವಾರ್, ಜಗದೀಶ ಭೂರೆ, ನಾಗೇಶ ಟೋಪಾರೆ, ಮಂಜುನಾಥ ಹಿರೇಮಠ, ಸಂಜೀವಕುಮಾರ ಪಂಡರಗಿರೆ, ರಾಜಗೋಪಾಲ ಬಿಯಾನಿ, ಬಿಜಿ ಸಂತೋಷ ಪಾಟೀಲ ಸೇರಿದಂತೆ ವಿವಿಧ ಶಾಲೆ, ಕಾಲೇಜುಗಳ ವಿದ್ಯಾರ್ಥಿಗಳು, ನಿವೃತ್ತ ಸೈನಿಕರು ಇದ್ದರು.

# ಕಲಂ 371(ಜೆ) ಸಮಗ್ರ ಅನುಷ್ಟಾನಕ್ಕಾಗಿ ಸಂಕಲ್ಪ: ಮಾನುರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 22 : ಕಲ್ಯಾಣ ಕರ್ನಾಟಕ ಅಭಿವೃದ್ಧಿಗಾಗಿ ಕಲಂ 371(ಜೆ) ಸಮಗ್ರ ಅನುಷ್ಠಾನದ ಸಂಕಲ್ಪ ಮಾಡಲಾಗಿದ್ದು, ಇದನ್ನು ವ್ಯಾಪಕವಾಗಿ ವಿಸ್ತರಿಸಲು ಪಣ ತೊಡಲಾಗಿದೆ ಎಂದು ಕಲಂ 371(ಜೆ) ಸಮಗ್ರ ಅನುಷ್ಠಾನ ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಅಶೋಕಕುಮಾರ ಮಾನೂರೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮಹಾರಾಷ್ಟ್ರ ಹಾಗೂ ತೆಲಂಗಾಣಾಕ್ಕೆ ಹೋಗಿ ಅಧ್ಯಯನ ಮಾಡಲಾಗುವುದು. ಮಹಾರಾಷ್ಟ್ರದ ಅಭಿವೃದ್ಧಿ ಹಾಗೂ ತೆಲಂಗಾಣದ ಶಿಕ್ಷಣ ನೀತಿಯನ್ನು ಅರ್ಥಮಾಡಿಕೊಳ್ಳಲು ಶೀಘ್ರವೇ ಈ ಎರಡು ರಾಜ್ಯಗಳಿಗೆ ಪ್ರವಾಸ ಕೈಗೊಳ್ಳಲಾಗುವುದೆಂದು ಹೇಳಿದರು.

ಇಷ್ಟೆಲ್ಲ ಆದ ಬಳಿಕ ಈ ಭಾಗದ ಅಭಿವೃದ್ಧಿಗಾಗಿ 371(ಜೆ) ಅನುಷ್ಠಾನಗೊಳಿಸಲು ಇಲ್ಲಿಯ ಸಚಿವರಿಗೆ, ರಾಜ್ಯದ ಪಂಚಾಯತ ರಾಜ್ ಸಚಿವ ಪ್ರಿಯಾಂಕ ಖರ್ಗೆ ಹಾಗೂ ರಾಜ್ಯಪಾಲರಿಗೆ ಮನವಿ ಮಾಡಲಾಗುವುದು. 1996ರಲ್ಲಿ ಹೈ.ಕ.ಹೋ ಸಮಿತಿ ಸಂಸ್ಥಾಪಕ ಅಧ್ಯಕ್ಷರಾಗಿದ್ದ ದಿ.ವೈಜಿನಾಥ ಪಾಟೀಲ ಅವರ ನೇತೃತ್ವದಲ್ಲಿ ನಿರಂತರ ಹೋರಾಟ ನಡೆದ ಪ್ರತಿಫಲವಾಗಿ 371(ಜೆ) ಜಾರಿಯಾಗಲು ಸಾಧ್ಯವಾಯಿತು. ಇದನ್ನು ಜಾರಿ ಮಾಡಲು ಮುತುವರ್ಜಿ ವಹಿಸಿದ ರಾಜ್ಯಸಭೆ ವಿರೋಧ ಪಕ್ಷದ ನಾಯಕ ಡಾ.ಮಲ್ಲಿಕಾರ್ಜುನ್ ಖರ್ಗೆ ಹಾಗೂ ಇತರರಿಗೆ ಅಭಿನಂದಿಸುವುದಾಗಿ ಹೇಳಿದರು. 371(ಜೆ) ಕಲಂ ಪರಿಪೂರ್ಣವಾಗಿ ಜಾರಿಯಾಗಲು ಹೋರಾಟದ ಅಗತ್ಯವಿದ್ದು, ಹೋರಾಟವನ್ನು ಚುರುಕುಗೊಳಿಸುವ ನಿಟ್ಟಿನಲ್ಲಿ ಹಾಗೂ ಸಮಗ್ರ ಅನುಷ್ಠಾನ ಮಾಡುವ ನಿಟ್ಟಿನಲ್ಲಿ ಹೋರಾಟ ಸಮಿತಿಯನ್ನು ವಿಸ್ತಾರಗೊಳಿಸಿ, ವಿವಿಧ ಹುದ್ದೆಗಳಿಗೆ ನೇಮಕ ಮಾಡಲಾಗುತ್ತಿದೆ. ಪೂಜ್ಯ ಡಾ. ಚನ್ನಬಸವನಾಂದ ಸ್ವಾಮೀಜಿಯವರನ್ನು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಗೌರವ ಅಧ್ಯಕ್ಷರನ್ನಾಗಿ, ನಿವೃತ್ತ ಪ್ರಾಂಶುಪಾಲರಾದ ಶಿವರಾಜ ಜುಕಾಲೆ ಇವರನ್ನು ಜಂಟಿ ಕಾರ್ಯದರ್ಶಿಗಳನ್ನಾಗಿ, ನ್ಯಾಯವಾದಿ ಶಿವಕುಮಾರ ಮಾಲೀ ಪಾಟೀಲ ಅವರನ್ನು ಬೀದರ್ ಜಿಲ್ಲಾಧ್ಯಕ್ಷರನ್ನಾಗಿ,

ನಿವೃತ್ತ ಜಿಲ್ಲಾ ನ್ಯಾಯಧೀಶರಾದ ರವೀಂದ್ರ ಕೆ. ಖಾನಾಪೂರಕರ್, ವಕೀಲರು ಹಾಗೂ ನಿವೃತ್ತ ಪ್ರಾಂಶುಪಾಲ ಶರಣಪ್ಪ ಬಿರಾದಾರ ಇವರನ್ನು ಕಾನೂನು ಸಲಹೆಗಾರರನ್ನಾಗಿ, ಔರಾದ್ ನ್ಯಾಯವಾದಿ ಸಂದೀಪ ಮೇತ್ರೆ ಇವರನ್ನು ಬೀದರ ಜಿಲ್ಲೆಯ ಹೋರಾಟ ಸಮಿತಿಯ ಪ್ರಧಾನ ಕಾರ್ಯದರ್ಶಿಯನ್ನಾಗಿ, ನಿವೃತ್ತ ಗ್ರಂಥಪಾಲಕ ವೀರಶೆಟ್ಟಿ ಚನ್ನಶೆಟ್ಟಿ ಇವರನ್ನು ಕೋಶಾಧ್ಯಕ್ಷರನ್ನಾಗಿ, ಅಶೋಕ ಮುಧೋಳಕರ್ ಇವರನ್ನು ಬೀದರ ಜಿಲ್ಲಾ ಜಂಟಿ ಕಾರ್ಯದರ್ಶಿಗಳಾಗಿ, ಮಕ್ಸೂದ ಅಲಿ ಡಾಂಗೆ ಇವರನ್ನು ಬೀದರ ಜಿಲ್ಲಾ ಕೋಶಾಧ್ಯಕ್ಷರನ್ನಾಗಿ, ಬಜರಂಗ ಖಾಶೆಂಪೂರ ಇವರನ್ನು ಬೀದರ ಜಿಲ್ಲಾ ಸಂಘಟನಾ ಕಾರ್ಯದರ್ಶಿಗಳಾಗಿ ನೇಮಕ ಮಾಡಲಾಗಿದೆ ಎಂದು ವಿವರಿಸಿದರು.

ಸಮಿತಿಯ ಗೌರವಾಧ್ಯಕ್ಷರಾದ ಪೂಜ್ಯ ಡಾ.ಚನ್ನಬಸವಾನಂದ ಮಹಾಸ್ವಾಮಿಜಿ ಮಾತನಾಡಿ, ಕಲ್ಯಾಣ ಕರ್ನಾಟಕದ ಕಲ್ಯಾಣ ಆಗಬೇಕಾದರೆ ಬರೀ ಅದರ ಹೆಸರಿನಿಂದ ಸಾಧ್ಯವಾಗುವುದಿಲ್ಲ, ಬದಲಿಗೆ ಅಣ್ಣ ಬಸವಣ್ಣನವರ ಸಂಕಲ್ಪದಂತೆ ಈ ಭಾಗದ ಸಮಗ್ರ ವಿಕಾಸ ಆಗಬೇಕಿದೆ. ಅದಕ್ಕಾಗಿ ಕಲಂ 371(ಜೆ) ಅನುಷ್ಠಾನಗೊಳಿಸುವಲ್ಲಿ ಸಮಿತಿಯು ಸಾಮಾಜಿಕ ಹಾಗೂ ಕಾನೂನಾತ್ಮಕ ಹೋರಾಟ ಮಾಡಲಗುತ್ತದೆ ಮತ್ತು ಕಲ್ಯಾಣ ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ಪದಾಧಿಕಾರಿಗಳನ್ನು ನೇಮಿಸಿ, ಮುಂದಿನ ದಿನಗಳಲ್ಲಿ ಹೋರಾಟ ಮಾಡುವುದರಲ್ಲಿ ಕಲ್ಯಾಣ ಕರ್ನಾಟಕದ ಎಲ್ಲಾ ನಾಗರಿಕರ ಸಹಕಾರ ಬಯಸಲಾಗುವುದು. ಶ್ರೀಘ್ರದಲ್ಲಿ ಕಲ್ಯಾಣ ಕರ್ನಾಟಕ ಆಯಾ ಜಿಲ್ಲೆಗಳಲ್ಲಿ ಸಮಗ್ರ ಅನುಷ್ಠಾನ ಹೋರಾಟ ಸಮಿತಿಯ ಪದಾಧಿಕಾರಿಗಳನ್ನು ನೇಮಕ ಮಾಡಲಾಗುವುದು. ಬರುವ ಜೂನ್ ತಿಂಗಳಲ್ಲಿ ಎಲ್ಲಾ ಜಿಲ್ಲೆಗಳ ಪ್ರವಾಸ ಕೈಗೊಂಡು, ಕಲಂ 371(ಜೆ) ಸಮಗ್ರ ಅನುಷ್ಠಾನ ಕುರಿತು ಜಾಗೃತಿ ಮೂಡಿಸಲಾಗುವುದು ಎಂದು ಪೂಜ್ಯರು ತಿಳಿಸಿದರು.

ಔರಾದ್‌ನ ಬಾಜಿರಾವ ಪಾಟೀಲ, ನಿವೃತ್ತ ಸರ್ಕಾರಿ ಅಭಿಯೋಜಕ ಭೀಮಾಶಂಕರ ಅಂಬುಲಗಿ, ನಿವೃತ್ತ ಸಹಾಯಕ ಆಯುಕ್ತ ಎಸ್.ಎಂ. ಪಾಟೀಲ, ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಸಂಗಮೇಶ ಚಿದ್ರೆ, ಹಾಗೂ ಪದಾಧಿಕಾರಿಗಳು, ನ್ಯಾಯವಾದಿ ಸಿ.ಕೆ. ಬಿರಾದಾರ, ಕೆ.ಕೆ. ಪಾಟೀಲ, ಜಂಟಿ ಕಾರ್ಯದರ್ಶಿ ರಮೇಶ ನೇಳಗೆ, ರವಿಕಾಂತ ಬಿರಾದಾರ, ಬಾಬುರಾವ ಬಿರಾದಾರ, ಶಿವಶರಣಪ್ಪ ಪಾಟೀಲ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಸಚಿವ ಸೋಮಣ್ಣಗೆ ಪೂಜಾರ ಮನವಿ
## ಅಯೋಧ್ಯೆಗೆ ವಾರಕ್ಕೆ ಮೂರು ದಿನ ರೈಲು ಓಡಿಸಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.22–ಹುಬ್ಬಳ್ಳಿಯಿಂದ ಅಯೋಧ್ಯೆಗೆ ಸಂಚರಿಸಲಿರುವ ರೇಲ್ವೆ ಸೇವೆಯನ್ನು ವಾರಕ್ಕೆ ಮೂರು ದಿನಕ್ಕೆ ವಿಸ್ತರಿಸುವಂತೆ ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಕೇಂದ್ರದ ರೇಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಮನವಿ ಮಾಡಿದ್ದಾರೆ.

ನವೀಕರಣಗೊಂಡ ಬಾಗಲಕೋಟೆ ರೈಲು ನಿಲ್ದಾಣದ ಉದ್ಘಾಟನಾ ಕಾರ್ಯಕ್ರಮದಲ್ಲಿ ಪೂಜಾರ ಸಚಿವರಿಗೆ ಮನವಿ ನೀಡಿದ್ದು, ಈಗ ಹುಬ್ಬಳ್ಳಿಯಿಂದ ಅಯೋಧ್ಯೆಗೆ ಬಾಗಲಕೋಟೆ–ವಿಜಯಪುರ ಮೂಲಕ ವಾರಕ್ಕೆ ಒಂದು ಬಾರಿ ಸಂಚರಿಸುವ ರೇಲ್ವೆ ಸೇವೆಯನ್ನು ವಾರಕ್ಕೆ ಮೂರು ದಿನ ಒದಗಿಸಬೇಕು ಎಂದಿದ್ದಾರೆ. ವಿಜಯಪುರ–ಬಾಗಲಕೋಟೆ–ಗದಗ ಮೂಲಕ ಈ ಭಾಗದ ಪ್ರಯಾಣಿಕರು ಹೆಚ್ಚಿನ ಸಂಖ್ಯೆಯಲ್ಲಿ ಬೆಂಗಳೂರಿಗೆ ಪ್ರಯಾಣಿಸುತ್ತಿರುವುದರಿಂದ ನಿತ್ಯ ರಾತ್ರಿ 8 ಗಂಟೆಗೆ ವಿಜಯಪುರದಿಂದ ಸೂಪರಫಾಸ್ಟ್ ರೇಲ್ವೆ ಸೇವೆ ಒದಗಿಸಬೇಕು. ಗುಜರಾತ, ರಾಜಸ್ಥಾನ ರಾಜ್ಯಕ್ಕೆ ಸಂಪರ್ಕಿಸುವ ರೇಲ್ವೆ ಸೇವೆ ಪ್ರಾರಂಭಿಸಬೇಕು. ಬೆಂಗಳೂರು–ಹುಬ್ಬಳ್ಳಿ ನಡುವೆ ಓಡುವ ಜನಶತಾಬ್ದಿ ಎಕ್ಸ್ ಪ್ರೆಸ್ ರೈಲನ್ನು ಬಾಗಲಕೋಟೆವರೆಗೂ ವಿಸ್ತರಿಸಬೇಕು ಎಂದು ಮನವಿ ಮಾಡಿದ್ದಾರೆ. ನಿತ್ಯ ಬಾಗಲಕೋಟೆ ಮೂಲಕ ಬೆಂಗಳೂರಿಗೆ ಓಡುವ ಗೋಲಗುಂಬಜ್ ಎಕ್ಸ್‌ಪ್ರೆಸ್ ರೈಲಿನಲ್ಲಿ 1ಎಸಿ ಹಾಗೂ 2ಎಸಿ ಬೋಗಿಗಳನ್ನು ಪ್ರತ್ಯೇಕ ಒದಗಿಸಬೇಕು ಎಂದು ವಿಪ ಸದಸ್ಯ ಪಿ.ಎಚ್.ಪೂಜಾರ ಸಚಿವ ಸೋಮಣ್ಣ ಅವರಿಗೆ ಮನವಿ ಸಲ್ಲಿಸಿದ್ದಾರೆ.

# ಅಮೃತ ಯೋಜನೆಯಡಿ ಪುನರಾಭಿವೃದ್ಧಿಗೊಂಡ ಮುನಿರಾಬಾದ ರೈಲು ನಿಲ್ದಾಣ ಪ್ರಧಾನಿಯಿಂದ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮೇ.22: ಅಮೃತ ಭಾರತ ನಿಲ್ದಾಣ ಯೋಜನೆಯಡಿಯಲ್ಲಿ ಪುನರಾಭಿವೃದ್ಧಿಗೊಂಡ ಕೊಪ್ಪಳ ಜಿಲ್ಲೆಯ ಮುನಿರಾಬಾದ್ ರೈಲು ನಿಲ್ದಾಣ ಸೇರಿ ದೇಶದ 103 ರೈಲು ನಿಲ್ದಾಣಗಳು ಮತ್ತು ಇತರ ಯೋಜನೆಗಳನ್ನು ಪ್ರಧಾನಂತ್ರಿಗಳಾದ ನರೇಂದ್ರಮೋದಿಜಿ ಅವರು ಗುರುವಾರ ರಾಜಸ್ಥಾನ ರಾಜ್ಯದ ಬಿಕಾನೆರದಿಂದ ವೀಡಿಯೊ ಕಾನ್ಫರೆನ್ಸ್ ಮೂಲಕ ಉದ್ಘಾಟನೆ ಮಾಡಿದರು.

ಮುನಿರಾಬಾದ್ ರೈಲು ನಿಲ್ದಾಣವನ್ನು ಮಹತ್ವಾಕಾಂಕ್ಷೆಯ ಅಮೃತ್ ಭಾರತ್ ನಿಲ್ದಾಣ ಯೋಜನೆಯಡಿ ರೂ. 18.40 ಕೋಟಿ ವೆಚ್ಚದಲ್ಲಿ ವಿಶ್ವ ದರ್ಜೆಯ ಸೌಲಭ್ಯವನ್ನಾಗಿ ಪುನರಾಭಿವೃದ್ಧಿಪಡಿಸಲಾಗಿದೆ. ಈ ಆಧುನಿಕ ಜಿ+1 ನಿಲ್ದಾಣವು ಈಗ ಹೆಚ್ಚುವರಿ ಪ್ರಯಾಣಿಕರಿಗೆ ಅನುಕೂಲವನ್ನು ನೀಡುತ್ತದೆ. ಇದು ಅತ್ಯಾಧುನಿಕ ಮೂಲಸೌಕರ್ಯ ಮತ್ತು ಸಮಗ್ರ ಸೌಲಭ್ಯಗಳನ್ನು ಒಳಗೊಂಡಿದ್ದು, 'ಹೊಸ ಭಾರತ'ದ ಮನೋಭಾವವನ್ನು ಪ್ರತಿಬಿಂಬಿಸುತ್ತದೆ. ಈ ನವೀಕರಣವು ಪ್ರಯಾಣಿಕರಿಗೆ ಉತ್ತಮ ಅನುಭವವನ್ನು ನೀಡುವ ಗುರಿಯನ್ನು ಹೊಂದಿದ್ದು, ಮುನಿರಾಬಾದ್ ರೈಲು ನಿಲ್ದಾಣದಲ್ಲಿ ಉತ್ತಮ ಪಾರ್ಕಿಂಗ್, ನಿರೀಕ್ಷಣಾ ಕೊಠಡಿ, ಜಲ ಸಂರಕ್ಷಣೆ, ಸೌರಶಕ್ತಿ, ಹಸಿರು ಸ್ಥಳಗಳ ಮತ್ತು ಇತರೆ ಮೂಲಭೂತ ಸೌಕರ್ಯಗಳ ವ್ಯವಸ್ಥೆಗಳನ್ನು ಮಾಡಲಾಗಿದೆ.

ಅಮೃತ ಭಾರತ ನಿಲ್ದಾಣ ಯೋಜನೆಯಡಿಯಲ್ಲಿ ಪುನರಾಭಿವೃದ್ಧಿಗೊಂಡ ರೈಲು ನಿಲ್ದಾಣಗಳ ಉದ್ಘಾಟನೆ ಅಂಗವಾಗಿ ಮುನಿರಾಬಾದ್ ರೈಲು ನಿಲ್ದಾಣದ ಆವರಣದಲ್ಲಿಯೂ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಮಾರಂಭದಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಅವರು ಭಾಗವಹಿಸಿ ಮಾತನಾಡಿ, ಬಡವರಿಗೆ ಕಡಿಮೆ ದರದಲ್ಲಿ ಸಾರಿಗೆ ಸೇವೆ ಒದಗಿಸುವ ವ್ಯವಸ್ಥೆ ರೈಲ್ವೆ ಇಲಾಖೆಯದ್ದಾಗಿದೆ. ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ಕಡಿಮೆ ದರದಲ್ಲಿ ದೇಶಾದ್ಯಂತ ಪ್ರಯಾಣ ಮಾಡಲು ರೈಲ್ವೆ ವಲಯ ಒಂದು ಜನಸ್ನೇಹಿಯಾಗಿದೆ. ಇಂತಹ ರೈಲ್ವೆ ಇಲಾಖೆಯಲ್ಲಿ ರೈಲು ನಿಲ್ದಾಣಗಳನ್ನು ಉನ್ನತೀಕರಿಸಿ, ಎಲ್ಲಾ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ಮಾಡುವಂತಹ ಕೆಲಸ ಕೇಂದ್ರ ಸರ್ಕಾರ ಮಾಡುತ್ತಿದೆ. ಇದರ ಭಾಗವಾಗಿ ಮುನಿರಾಬಾದ್ ರೈಲ್ವೆ ನಿಲ್ದಾಣ ಅಮೃತ ಭಾರತ ನಿಲ್ದಾಣ ಯೋಜನೆಯಡಿ ಪುನರಾಭಿವೃದ್ಧಿಪಡಿಸಿ ರೂ. 18.40 ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಿ ಲೋಕಾರ್ಪಣೆ ಮಾಡಲಾಗಿದೆ. ಇದರಿಂದ ಶ್ರೀ ಹುಲಿಗೆಮ್ಮ ದೇವಿ ಸ್ಥಾನದ ದರ್ಶನಕ್ಕಾಗಿ ಬರುವ ಭಕ್ತಾಧಿಗಳಿಗೆ ತುಂಬಾ ಅನುಕೂಲವಾಗಿದೆ ಎಂದರು.



ನಮ್ಮ ಭಾಗದಲ್ಲಿ ಬಹಳಷ್ಟು ರೈಲ್ವೆ ಯೋಜನೆಗಳು ಆಗಬೇಕಿದ್ದು, ಇದಕ್ಕಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಮುನಿರಾಬಾದ್ ರೈಲು ನಿಲ್ದಾಣಕ್ಕೆ ಶ್ರೀ ಹುಲಿಗೆಮ್ಮ ದೇವಿ ತಾಯಿಯ ಹೆಸರಿಡುವಂತೆ ಹಲವಾರು ಜನರು ಮನವಿ ಮಾಡಿದ್ದು, ಈಗಾಗಲೇ ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅವರ ಮೂಲಕ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಹೋದ ತಕ್ಷಣ ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಇದರ ಜೊತೆಗೆ ಬಾಣಾಪುರ ರೈಲು ನಿಲ್ದಾಣಕ್ಕೆ ಮಹಾತ್ಮಾ ಗಾಂಧಿಜಿ ಹಾಗೂ ಗಂಗಾವತಿ ರೈಲು ನಿಲ್ದಾಣಕ್ಕೆ ಕಿಷ್ಕಿಂದ ಎಂದು ಮರು ನಾಮಕರಣಕ್ಕೆ ಪ್ರಸ್ತಾವನೆಯನ್ನು ಕೊಡಲಾಗಿದೆ. ಹುಬ್ಬಳ್ಳಿಯಿಂದ ಹೊಸಪೇಟೆಗೆ ಬರುವ ರೈಲ್ವೆ ಮಾರ್ಗದಲ್ಲಿ ಬಹಳಷ್ಟು ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದೆ. ಮುಂಬರುವ ದಿನಗಳಲ್ಲಿ ಇನ್ನೂ ಎರಡು ರೈಲು ಹಳಿಗಳನ್ನು ನಿರ್ಮಾಣ ಮಾಡುವ ಕೆಲಸ ಆಗಬೇಕಿದೆ. ರೈಲ್ವೆ ಮಾರ್ಗದಲ್ಲಿ ಬರುವ ಎಲ್ಲಾ ರೈಲ್ವೆ ಗೇಟ್‌ಗಳಲ್ಲಿ ಮಾನವ ರಹಿತ ಕ್ರಾಸಿಂಗ್ ವ್ಯವಸ್ಥೆ ಆಗಲಿವೆ. ನಿರ್ಮಾಣದಲ್ಲಿರುವ ಹುಲಿಗಿಯ ರೈಲ್ವೆ ಗೇಟ್‌ನ ಸೇತುವೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಜನರಿಗೆ ಅನುಕೂಲ ಮಾಡಿಕೊಡಲು ಕ್ರಮ ವಹಿಸಲಾಗುವುದು. ನಮ್ಮ ಭಾಗದಲ್ಲಿರುವ ಹನುಮನ ಜನ್ಮಸ್ಥಳವಾದ ಅಂಜಾದ್ರಿಯಿಂದ ಅಯೋಧ್ಯೆಗೆ ವಿಶೇಷ ರೈಲು ಓಡಿಸಬೇಕೆಂಬುದು ಇಲ್ಲಿನ ಬಹುಜನರ ಬೇಡಿಕೆಯಾಗಿದೆ. ಇದಕ್ಕಾಗಿ ರೈಲ್ವೆ ಮಂತ್ರಿಗಳಿಗೆ ಮನವಿ ಮಾಡಲಾಗಿದೆ ಎಂದರು.

ಕೊಪ್ಪಳ ಜಿಲ್ಲೆಯ ರೈಲ್ವೆ ಅಭಿವೃದ್ಧಿಯಲ್ಲಿ ಹಿಂದಿನ ಸಂಸದರಾದ ಕರಡಿ ಸಂಗಣ್ಣನವರ ಪರಿಶ್ರಮವೂ ಇದೆ. ಹೊಸ ರೈಲು ಮಾರ್ಗಗಳಾದ ಗಂಗಾವತಿ–ಬಾಗಲಕೋಟೆ ಲೈನ್‌ಗೆ ರೂ. 950 ಕೋಟಿ ಹಾಗೂ ಗಂಗಾವತಿ–ದರೋಜಿ ಲೈನ್‌ಗೆ ರೂ. 402 ಕೋಟಿಗಳ ಅನುದಾನವನ್ನು ನೀಡಲು ರೈಲ್ವೆ ಇಲಾಖೆಯ ರಾಜ್ಯ ಸಚಿವರಾದ ವಿ.ಸೋಮಣ್ಣನವರಿಗೆ ಮನವಿ ಮಾಡಿದ್ದು, ಈ ವರ್ಷ ಒಂದು ಮತ್ತು ಮುಂದಿನ ವರ್ಷ ಮತ್ತೊಂದು ಕಾಮಗಾರಿಗೆ ಅನುಮೋದನೆ ನೀಡುವುದಾಗಿ ಸಚಿವರು ಭರವಸೆಯನ್ನು ನೀಡಿದ್ದಾರೆ. ಕೊಪ್ಪಳ ನಗರದ ಸ್ವಾಮಿ ವಿವೇಕಾನಂದ ಶಾಲೆಯ ಹತ್ತಿರದ ರೈಲ್ವೆ ಲೈನ್ ಬಳಿಯ ಸೇತುವೆಯ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು. ಹಿಟ್ನಾಳ್ ಕ್ರಾಸ್ ಎಲ್.ಸಿ ಸಂಖ್ಯೆ–17ಕ್ಕೆ ಟೆ–ಂಡರ್ ಆಗಿದ್ದು, ಶೀಘ್ರದಲ್ಲಿಯೇ ಅಡಿಗಲ್ಲು ಹಾಕಲಾಗುವುದು. ಮುನಿರಾಬಾದ್ ರೈಲು ನಿಲ್ದಾಣದಲ್ಲಿ ನಿಲ್ಲದ ಟ್ರೈನ್‌ಗಳ ನಿಲುಗಡೆಗೆ ಸಾರ್ವಜನಿಕರು ಮನವಿ ಮಾಡಿದ್ದು, ಇದಕ್ಕೆ ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ, ಮುನಿರಾಬಾದ ರೈಲ್ವೆ ನಿಲ್ದಾಣವು ನವೀಕರಣಗೊಂಡು ಉದ್ಘಾಟನೆಯಾಗಿರುವುದು ನಮ್ಮ ಭಾಗದ ಜನರಿಗೆ ಇಂದು ಸಂತಸದ ದಿನವಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ರೈಲ್ವೆಯ ಹೊಸ–ಹೊಸ ಮಾರ್ಗಗಳಿಂದಾಗಿ ಜನರಿಗೆ ವಿವಿಧ ಊರುಗಳ ಪ್ರಯಾಣಕ್ಕೆ ಅನುಕೂಲವಾಗುತ್ತಿದೆ. ಮುಂಬರುವ ದಿನಮಾನಗಳಲ್ಲಿ ನಮ್ಮ ಜಿಲ್ಲೆಯಲ್ಲಿ ಟ್ರಂಕ್ ರೂಟ್ ವ್ಯವಸ್ಥೆಯಾಗಲಿದೆ. ಮುನಿರಾಬಾದ್ ರೈಲು ನಿಲ್ದಾಣದ ಅಭಿವೃದ್ಧಿಯಿಂದ ಶ್ರೀ ಹುಲಿಗೆಮ್ಮ ದೇವಿಯ ಜಾತ್ರೆಯ ಸಮಯದಲ್ಲಿ ಲಕ್ಷಾಂತರ ಸಂಖ್ಯೆಯಲ್ಲಿ ಬರುವ ಭಕ್ತಾಧಿಕಗಳಿಗೆ ಹಾಗೂ ಇಲ್ಲಿನ ಸುತ್ತು–ಮುತ್ತಲಿನ ಪ್ರವಾಸಿತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರಿಗೂ ತುಂಬಾ ಅನುಕೂಲವಾಗಲಿದೆ ಎಂದರು.

ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಮಾತನಾಡಿ, ಮುನಿರಾಬಾದ್ ರೈಲು ನಿಲ್ದಾಣ ಹೆಚ್ಚು ಜನ ದಟ್ಟಣೆ ಇರುವ ನಿಲ್ದಾಣವಾಗಿದೆ. ಹುಲಿಗೆಮ್ಮ ದೇವಿ ದೇವಸ್ಥಾನ ಇರುವುದರಿಂದ ಇಲ್ಲಿಗೆ ಲಕ್ಷಾಂತರ ಭಕ್ತರು ಬರುತ್ತಾರೆ ಹಾಗಾಗಿ ಮುನಿರಾಬಾದ್ ರೈಲು ನಿಲ್ದಾಣಕ್ಕೆ ಹುಲಿಗೆಮ್ಮ ದೇವಿ ರೈಲು ನಿಲ್ದಾಣ ಎಂದು ನಾಮಕರಣ ಮಾಡಬೇಕು. ಅಮೃತ ಭಾರತ ಸ್ಟೇಷನ್ ಅಡಿ ಪುರಾಭಿವೃದ್ಧಿ ಪಡಿಸಲಾದ ಮುನಿರಾಬಾದ್ ರೈಲು ನಿಲ್ದಾಣ ಸೇರಿದಂತೆ ದೇಶದ 103 ರೈಲು ನಿಲ್ದಾಣಗಳನ್ನು ಸನ್ಮಾನ್ಯ ಪ್ರಧಾನ ಮಂತ್ರಿಗಳು ಇಂದು ಉದ್ಘಾಟನೆ ನೆರವೇರಿಸುತ್ತಿರುವುದು ನಮಗೆ ಸಂತಸ ತಂದಿದೆ ಎಂದರು.

ಅಮೃತ ಭಾರತ ಸ್ಟೇಷನ್ ಯೋಜನೆ ಅಡಿಯಲ್ಲಿ ಪುನರಾಭಿವೃದ್ಧಿಗೊಂಡ ರೈಲು ನಿಲ್ದಾಣಗಳು ತುಂಭಾ ಸುಂದರವಾಗಿಗೆ ಹಾಗೂ ರೈಲು ನಿಲ್ದಾಣಗಳಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಹಲವಾರು ಸೌಲಭ್ಯಗಳನ್ನು ಒದಗಿಸಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಹಲವಾರು ಐತಿಹಾಸಿಕ ಪ್ರವಾಸಿ ಸ್ಥಳಗಳು ಇರುವುದರಿಂದ ಇಲ್ಲಿಗೆ ಬರುವ ಪ್ರವಾಸಿಗರಿಗೂ ರೈಲು ಸಾರಿಗೆಯಿಂದ ತುಂಬಾ ಅನುಕೂಲವಾಗಲಿದೆ ಎಂದು ಹೇಳಿದರು.

ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ: ನೈಋತ್ಯ ರೈಲ್ವೆ ವತಿಯಿಂದ ಶಾಲಾ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಾಗಿದ್ದ ಪ್ರಬಂಧ, ಚರ್ಚಾ ಹಾಗೂ ಚಿತ್ರಕಲೆ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲೆಯ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೇಕ್ಯಾತರ, ಹುಲಿಗಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ನಿಲಮ್ಮ ಸಿದ್ದಪ್ಪ ಗುಂಗಾಡಿ, ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಮಾಜಿ ಶಾಸಕರಾದ ಬಸಬವರಾ ದಢೇಸೂಗೂರು, ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನ ಪ್ರಾಧಿಕಾರದ ಕಾರ್ಯನಿರ್ವಹಣಾಧಿಕಾರಿ ಎಂ.ಹೆಚ್.ಪ್ರಕಾಶರಾವ್, ನೈಋತ್ಯ ರೈಲ್ವೆ ವಲಯ ಹುಬ್ಬಳ್ಳಿಯ ವಿಭಾಗಿಯ ವ್ಯವಸ್ಥಾಪಕ ಡಾ. ಅನೂಪ್ ಅಲ್ವಾ ಸೇರಿದಂತೆ ಇತರೆ ಜನಪ್ರತಿನಿಧಿಗಳು ಮತ್ತು ಮುನಿರಾಬಾದ್ ರೈಲ್ವೆ ನಿಲ್ದಾಣದ ಅಧಿಕಾರಿ, ಸಿಬ್ಬಂದಿ ಹಾಗೂ ಹುಲಿಗಿ ಗ್ರಾಮಸ್ಥರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.